ಸಂಪುಟ: 22, ಸಂಚಿಕೆ: 103, ಪುಟಗಳು: 8, ಗುರುವಾರ, 23 ಜನವರಿ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

## ಬಿಡಿಎ ಹಿರಿಯ ಅಧಿಕಾರಿ ಹನಿಟ್ರ್ಯಾಪ್‌ಗೆ ಬಲಿ?



ಹಣವಂತ ತೆವಲುಗಾರರು ಈಚೆಗೆ ಹನಿಟ್ರ್ಯಾಪ್ ದಂಧೆಗೆ ಬಲಿ ಬೀಳುತ್ತಿರುವುದು ಸಾಮಾನ್ಯವಾಗುತ್ತಿದೆ. ಕೆಲವೊಮ್ಮೆ ಅಮಾಯಕರು ಕೂಡ ಇಂತಹ ವಿಷಜಾಲಕ್ಕೆ ಸಿಕ್ಕು ನರಳಾಡುತ್ತಿರುವುದೂ ಇದೆ. ಹಣವಂತರನ್ನು, ಪ್ರಭಾವಿಗಳನ್ನು ಖೆಡ್ಡಾಕ್ಕೆ ಕೆಡವಿಕೊಳ್ಳುವ ಮಾಯಾಂಗನೆಯರು ಬಲೆಗೆ ಬೀಳುವ ಮಿಕವನ್ನು ಚರ್ಮ ಸಮೇತ ಸುಲಿದು ಹಾಕುತ್ತಾರೆ ಅಥವಾ ಮಾಯಾಂಗನೆಯರನ್ನು ಛೂ ಬಿಡುವ ದಂಧೆಕೋರರು ತಮ್ಮ ಕೋರಿಕೆಗಳನ್ನು ನಯವಾಗಿ ಇಡೇರಿಕೊಳ್ಳುತ್ತಾರೆ.

ಈಚೆಗೆ ಬಿಡಿಎ ಹಿರಿಯ ಅಧಿಕಾರಿಯೊಬ್ಬರು ಇಂತಹ ಹನಿಟ್ರ್ಯಾಪ್ ಬಲೆಗೆ ಬಿದ್ದಿರುವ ಗುಸುಗುಸು ಹರಿದಾಡುತ್ತಿದೆ. ಈ ಅಧಿಕಾರಿ ತೆವಲಿಗಾಗಿ ಬಲೆಗೆ ಬಿದ್ದರೋ... ಅಥವಾ ಅಮಾಯಕತನದಿಂದ ಸಿಕ್ಕಿ ಬಿದ್ದರೋ ಗೊತ್ತಿಲ್ಲ. ಖಾಸಗಿ ಟಿವಿ ವಾಹಿನಿಯೊಂದು ಈ ಬಗ್ಗೆ ಪ್ರೋಮೋ ಬಿಡುಗಡೆ ಮಾಡಿತಾದರೂ ಸಂಪೂರ್ಣ ಸುದ್ದಿ ಬಿತ್ತರಿಸಲಿಲ್ಲ. ಮುರಳಿ ಎಂಬ




ಬಿಡಿಎ ದಲ್ಲಾಳಿ ಈ ಹನಿಟ್ರ್ಯಾಪ್ ಹಿಂದಿರುವ ಖಳನಾಯಕನೆಂದು ಶಂಕಿಸಲಾಗಿದೆ. ಅಲ್ಲದೇ ಶಂಕಿತ ವೀಡಿಯೋ ಕೂಡ ತುಂಬಾ ಹಳೆಯದ್ದು ಎಂದು ಹೇಳಲಾಗುತ್ತಿದೆ. ಅದೇನೆ ಇರಲಿ ಭ್ರಷ್ಟಾಚಾರದಿಂದ ಗಳಿಸಿದ ಹಣ ಇಂತ ಮಹತ್ ಕಾರ್ಯಕ್ಕಲ್ಲದೇ ಇನ್ಯಾವುದಕ್ಕೆ ತಾನೇ ಸಾರ್ಥಕವಾದೀತು? ಅಸಲಿಗೆ ಅಮಾಯಕರ ಶಾಪದಿಂದ ಗಳಿಸಿದ ಈ ಅಕ್ರಮ ಹಣ ಮಾಯಾಂತನೆಯರಿಗಲ್ಲದೇ ಭ್ರಷ್ಟರ ಮಡದಿ-ಹೆಣ್ಣುಮಕ್ಕಳಿಗಾದೀತೇ? ಎಂಬುದು ಜನಸಾಮಾನ್ಯರ ಅಂಬೋಣ.

### ಬದಲಾಗಲಿದೆಯೇ ಬಿಡಿಎ ಮುಖ್ಯ ಸ್ಥಾನ?

ಹನಿಟ್ರ್ಯಾಪ್ ಬಲೆಗೆ ಬಿದ್ದಿರುವ ಬಿಡಿಎ ಹಿರಿಯ ಅಧಿಕಾರಿಯ ಅಶ್ಲೀಲ ವಿಡಿಯೋ ಆಗಲಿ, ಫೋಟೋ ಆಗಲಿ ಈಗವರೆಗೂ ಎಲ್ಲಿಯೂ ಹೊರಬಿದ್ದಿಲ್ಲ. ಬಹುಶಃ ತೆರೆಮರೆಯಲ್ಲಿಯೇ ಹನಿಟ್ರ್ಯಾಪ್‌ದಂಧೆಕೋರರ ಬೇಡಿಕೆ ಈಡೇರಿದಂತಿದೆ. ಹೀಗಾಗಿ ಅಲ್ಲಲ್ಲೇ ಸಾಕ್ಷ್ಯ ನಾಶ ಮಾಡಿರಬಹುದಾದ ಸಾಧ್ಯತೆಯನ್ನೂ ಅಲ್ಲಗಳೆಯಲು ಸಾಧ್ಯವಿಲ್ಲ.



ಗಮನಾರ್ಹವೆಂದರೆ, ಸದರಿ ಹನಿಟ್ರ್ಯಾಪ್ ಗುಸುಗುಸು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಗಮನಕ್ಕೂ ಬಂದಿದೆ ಎನ್ನಲಾಗುತ್ತಿದೆ. ಸರ್ಕಾರ ಈಗಾಗಲೇ ಹಲವು ರೀತಿಯ ಮುಜುಗರವನ್ನು ಎದುರಿಸಿದ್ದು; ಈ ವಿಚಾರದಲ್ಲೂ ಮುಜುಗರಕ್ಕೆ ಈಡಾಗುವ ಸಾಧ್ಯತೆಯನ್ನು ಮನಗಂಡು ಶೀಘ್ರದಲ್ಲಿಯೇ ಬಿಡಿಎ ಬಹುಮುಖ್ಯ ಸ್ಥಾನದಲ್ಲಿರುವ ಆ ಹಿರಿಯ ಅಧಿಕಾರಿಯನ್ನು ಎತ್ತಂಗಡಿ ಮಾಡಿ ಬೇರೆಯವರನ್ನು ತಂದುಕೂರಿಸುವ ಪ್ರಯತ್ನ ನಡೆಯುತ್ತಿದೆ ಎಂದು ಹೇಳಲಾಗುತ್ತಿದೆ.

# ನಿಶಾಚರರ ನಿಗೂಢ ದಂಧೆ!

## ಬಿಡಿಎ ಇಂಜಿನಿಯರ್‌ಗಳ ಓವರ್‌ಡ್ಯೂಟಿ !

## ಉತ್ತರ ಅಭಿಯಂತರ ವಿಭಾಗದಲ್ಲಿ ನಡದಿದೆ ಮಹತ್ಕಾರ್ಯ..

■ ಸಂಜೆ ಮುಗಿಲು ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿಗೆ ಇಂಜನೀಯರ್‌ಗಳು ಹಗಲಿರುಳು ಬೆವರು ಸುರಿಸುತ್ತಿದ್ದಾರೆ. ಕಚೇರಿ ಅವಧಿಯಲ್ಲಿ ಸೇವೆ ಸಲ್ಲಿಸಿದ್ದಲ್ಲದೇ ಕಚೇರಿ ಅವಧಿ ಮುಗಿದ ಮೇಲೂ ಅವರ ದಣಿವರಿಯದ ಸೇವೆ ನಿರಂತವಾಗಿ ನಡೆದೇ ಇರುತ್ತದೆ. ಅಷ್ಟರ ಮಟ್ಟಿಗೆ ಬಿಡಿಎ ಅಭಿವೃದ್ಧಿಗೆ ಅಭಿಯಂತರರ ಕೊಡುಗೆ ತನು-ಮನ-ಧನ ಪೂರ್ವಕವಾಗಿ ಸಲ್ಲುತ್ತಿದೆ.

ಆಶ್ಚರ್ಯವಾಯಿತೇ? ಹೌದು, ಬೆಂಗಳೂರು ಮಹಾನಗರದ ಮಟ್ಟಿಗೆ ಭ್ರಷ್ಟಾಚಾರದ ಕೂಪವೆಂಬ ಕುಖ್ಯಾತಿ ಪಡೆದ ಬಿಬಿಎಂಪಿ ಮತ್ತು ಬಿಡಿಎ ಆಡಳಿತ ವ್ಯವಸ್ಥೆ ಅದ್ಯಾವತ್ತೋ ಹಳ್ಳ ಹಿಡಿದಿದೆ. ಅದರಲ್ಲೂ ಬಿಡಿಎ ಭ್ರಷ್ಟರ ಪಾಲಿಗೆ ಚಿನ್ನದ ಮೊಟ್ಟೆ ಇಡುವ ಕೋಳಿಯಾಗಿದೆ. ಏಕೆಂದರೆ ಬಿಡಿಎ ಬಹುತೇಕ ವ್ಯವಹಾರಗಳು 'ಭೂಮಿ'ಗೆ ಸಂಬಂಧಿಸಿರುವುದರಿಂದ ಇಲ್ಲಿ ಅವ್ಯವಹಾರವಿಲ್ಲದೇ ಯಾವ ಹುಲ್ಲುಕಡ್ಡಿಯೂ ಅಲ್ಲಾಡುವುದಿಲ್ಲ.

ಪತ್ರಿಕೆ ಬಿಡಿಎ ಆಡಳಿತ ವ್ಯವಸ್ಥೆಯ ಅಧ್ವಾನಗಳನ್ನು ಈಗಾಗಲೇ ಹಲವು ಬಾರಿ ನಿಮ್ಮ ಮುಂದಿಡುತ್ತ ಬಂದಿದೆ. ಅದೇ ಸರಣಿಯಲ್ಲಿ ಇದೀಗ ಬಿಡಿಎ ಇಂಜನೀಯರ್‌ಗಳ ಓವರ್‌ಡ್ಯೂಟಿ ಮಹತ್ಕಾರ್ಯದ ವಿವರವನ್ನು ಹಂತ ಹಂತವಾಗಿ ನಿಮ್ಮ ಮುಂದೆ ಇಡುತ್ತಿದೆ.



ಭಾನಗಡಿ 1

### ಬಿಡಿಎ ಉತ್ತರ ಅಭಿಯಂತರ ವಿಭಾಗದಲ್ಲಿ ಮೂರೂಬಿಟ್ಟ ಕಸುಬು!

ಅಸಲಿಗೆ ಬಿಡಿಎ ಉತ್ತರ ಅಭಿಯಂತರ ವಿಭಾಗದಲ್ಲಿ ಒಟ್ಟು 6 ಸಬ್-ಡಿವಿಷನ್‌ಗಳಿವೆ, ಆ ಪೈಕಿ 1 ಮತ್ತು 2ರ ಸಬ್-ಡಿವಿಷನ್‌ನ ಅಭಿಯಂತರರು ಇನ್ನೂ ಅಭಿವೃದ್ಧಿ ಹಂತದಲ್ಲಿರುವ ಶಿವರಾಮ ಕಾರಂತ್ ಬಡಾವಣೆ ಅಭಿವೃದ್ಧಿ ಕಾರ್ಯದಲ್ಲಿ ಕೈ-ಬಾಯಿ ಮೊಸರು ಮಾಡಿಕೊಳ್ಳುತ್ತಿದ್ದಾರೆ. ಇನ್ನು 3 ರಿಂದ 6ರ ಒಟ್ಟು ನಾಲ್ಕು ಸಬ್ ಡಿವಿಜನ್‌ಗಳ ಅಭಿಯಂತರರು ಬಿಡಿಎ ಅಭಿವೃದ್ಧಿ ಪಡಿಸಿರುವ ಹಳೆಯ ಬಡಾವಣೆಗಳ ಉಸ್ತುವಾರಿ ವಹಿಸಿದ್ದಾರೆ. ತಲಾ ಒಂದೊಂದು ಉಪ ವಿಭಾಗಗಳಿಗೆ ಒಂದಷ್ಟು ಪ್ರದೇಶಗಳನ್ನು ನಿಗದಿಪಡಿಸಲಾಗಿದೆ. ಆಯಾ ಪ್ರದೇಶಗಳಲ್ಲಿ ತಲೆಎತ್ತುವ ಕಟ್ಟಡಗಳ ನಕ್ಷೆಯನ್ನು ಆಯಾ ಸಬ್‌ಡಿವಿಜನ್‌ಗೆ ಸಂಬಂಧಿಸಿದ ಅಭಿಯಂತರರೇ ಅನುಮೋದಿಸಬೇಕೆಂಬುದು ಕಚೇರಿಯ ಸಾಮಾನ್ಯ ನಿಯಮ. ಪ್ರತಿ ಸಬ್‌ಡಿವಿಜನ್‌ಗೆ ಒಬ್ಬೊಬ್ಬ ಸಹಾಯಕ ಕಾರ್ಯಪಾಲಕ ಅಭಿಯಂತರ (ಎಇಇ), 2-3 ಜನ ಸಹಾಯಕ ಅಭಿಯಂತರರು (ಎಇ) ಅಥವಾ ಜೂನಿಯರ್ ಇಂಜಿನಿಯರ್ (ಜೆಇ)ಗಳು ಇರುತ್ತಾರೆ. ಇವರು ಪ್ಲಾನ್ ಅನುಮೋದಿಸಿಕೊಟ್ಟತರುವಾಯ ನಿರ್ಮಾಣ ಹಂತದಲ್ಲಿ ಸ್ಥಳಕ್ಕೆ ಖುದ್ದು ಭೇಟಿ ಕೊಟ್ಟು, ಕಟ್ಟಡದ ನಿಯಮ ಪಾಲನೆ ಬಗ್ಗೆ ಸಂಪೂರ್ಣ ವಿವರ ಪಡೆದು ಡೀವಿಯೇಷನ್ ಆಗದಂತೆ ನಿಗಾ ವಹಿಸಬೇಕು.

ಇದು ಒತ್ತೊಟ್ಟಿಗಿರಲಿ. ಆದರೆ, ಇಲ್ಲಿ ಹಾಗಿಲ್ಲ; ಒಟ್ಟು ನಾಲ್ಕು ಸಬ್-ಡಿವಿಷನ್‌ಗಳಲ್ಲಿ ಅಭಿಯಂತರರು ಇದ್ದರೂ ಕೂಡ ಪ್ಲ್ಯಾನ್ ಅನುಮೋದಿಸುವ ಜವಾಬ್ದಾರಿ ಮಾತ್ರ ಇಇ ಮಹಾಶಯರು ಅವರಿಗೆ ಬೇಕಾದವರಿಗೆ ವಹಿಸಿದ್ದಾರೆಂಬುದು ಆರೋಪ. ಈ ವಿಚಾರವಾಗಿ ಅನ್ಯ ಉಪವಿಭಾಗದ ಕೆಲ ಅಭಿಯಂತರರು ಕೇಂದ್ರ ಕಚೇರಿಗೆ ಹೋಗಿ ಅಭಿಯಂತರ ಅಧಿಕಾರಿ ಹಾಗೂ ಅಭಿಯಂತರ ಸದಸ್ಯರಿಗೆ ಮೌಖಿಕ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲವಂತೆ, ಇನ್ನು ಅಧಿಕಾರಿಗಳ ಸಾಮಾನ್ಯ ಸಭೆಗಳಲ್ಲಿ ನೆಪ ಮಾತ್ರಕ್ಕೆ ಆಯುಕ್ತರು ಈ ಬಗ್ಗೆ ಎಚ್ಚರಿಸಿದ್ದು ಬಿಟ್ಟರೇ ಯಾವುದೇ ರೀತಿಯ ಶಿಸ್ತು ಕ್ರಮವಾಗಲಿ, ಕೆಲಸ ಹಂಚಿಕೆಯಾಗಲಿ ನಡೆದಿಲ್ಲವೆಂಬುದು ಸಂತ್ರಸ್ತ ಅಧಿಕಾರಿಗಳ ಆರೋಪ.

#### ವಿಚಿತ್ರ ಆದರೂ ಸತ್ಯ!

**ಕುಚೋದ್ಯವೆಂದರೆ, ಕಚೇರಿಯ ಸಮಯ ಮುಗಿದ ತರುವಾಯ ಸುಮಾರು ಸಂಜೆ 7ರ ನಂತರ ಈ ವಿಭಾಗದಲ್ಲಿ ವಸೂಲಿ ದಂಧೆ ಪ್ರಾರಂಭವಾಗುತ್ತದೆ ಎಂದು ಹೇಳಲಾಗುತ್ತಿದೆ. ಈ ವಸೂಲಿ ದಂಧೆಯಲ್ಲಿ ಎಲ್ಲರೂ ಪಾಲ್ಗೊಳ್ಳುವುದಿಲ್ಲ, ಬದಲಿಗೆ ಇಲ್ಲಿ ಭ್ರಷ್ಟರದ್ದೇ ಒಂದು ಗ್ಯಾಂಗ್ ಇದೆಯಂತೆ. ಹಾಗಾಗಿ ಇತರೆ ಅಧಿಕಾರಿಗಳು, ಸಿಬ್ಬಂದಿಗಳೆಲ್ಲ ಕಚೇರಿಯಿಂದ ಹೊರ ನಡೆದ ಬಳಿಕ ಈ ಗ್ಯಾಂಗ್ ಸಕ್ರಿಯಗೊಳ್ಳುತ್ತದೆ ಎಂಬುದು ಪ್ರತ್ಯಕ್ಷದರ್ಶಿಗಳ ಅಂಬೋಣ. ಇನ್ನು ಈ ಗ್ಯಾಂಗ್ ಸದಸ್ಯರು ಯಾರು, ಯಾರ ನೇತೃತ್ವದಲ್ಲಿ ಈ ವಸೂಲಿ ದಂಧೆ ನಡೆಯುತ್ತದೆ, ಈ ಸುಲಿಗೆಕೋರರು ಯಾವ ಡೀಲ್‌ಗಳನ್ನು ಮುಂದಿಟ್ಟುಕೊಂಡು ವಸೂಲಿ ದಂಧೆ ನಡೆಸುತ್ತಿದ್ದಾರೆಂಬುದನ್ನು ಸವಿವರವಾಗಿ ಮುಂದೆ ನೋಡುವಾ...**

#### ಕಮಾಯಿಕ್ರೂಢೀಕರಿಸುವ ಯೋಜನೆಯೇ?

ಸದ್ಯಕ್ಕೆ ಬಿಡಿಎ ಉತ್ತರ ವಿಭಾಗದ ನಾಲ್ಕೂ ಸಬ್ ಡಿವಿಜನ್‌ಗಳ ಕಟ್ಟಡ ನಕ್ಷೆ ಮಂಜೂರಾತಿ ವ್ಯವಹಾರವನ್ನು ಅಭಿಯಂತರರಾದ ಶ್ರೀಧರ್ ಮತ್ತು ರೂಪಲಕ್ಷ್ಮೀ ಎಂಬಿಬ್ಬರ ಪಾದಕ್ಕೆ ಒಪ್ಪಿಸಲಾಗಿದೆಯಂತೆ. ಇಇ ಮಹಾಶಯರು ಈ ಇಬ್ಬರಿಗಷ್ಟೇ ಕಟ್ಟಡ ಪ್ಲ್ಯಾನ್ ಮಂಜೂರಾತಿಯ ಪರಮಾಧಿಕಾರ ನೀಡಿದ್ದಾರೆಂದು ಹೇಳಲಾಗುತ್ತಿದೆ. ಎಲ್ಲಾ ಉಪ ವಿಭಾಗಗಳ ಅಭಿಯಂತರರಿಗೆ ಈ ಕೆಲಸ ಹರಿದು ಹಂಚಿ ಹೋದರೆ ಕಮಾಯಿ ಕೂಡ ಹರಿದು ಹಂಚಿ ಹೋಗುತ್ತದೆಂಬ ಕಾರಣಕ್ಕೋ ಏನೋ ಈ ರೀತಿ ಸಾಮಾನ್ಯ ನಿಯಮವನ್ನು ಗಾಳಿಗೆ ತೂರಲಾಗಿದೆ.




### ಸುಭಾಷಿತ

"ನುಡಿದರೆ ಮುತ್ತಿನ ಹಾರದಂತಿರಬೇಕು,
ನುಡಿದರೆ ಮಾಣಿಕ್ಯದ ದೀಪ್ತಿಯಂತಿರಬೇಕು,
ನುಡಿದರೆ ಸ್ಫಟಿಕದ ಶಲಾಕೆಯಂತಿರಬೇಕು,
ನುಡಿದರೆ, ನುಡಿದರೆ ಲಿಂಗ ಮೆಚ್ಚಿ
ಅಹುದಹುದೆನಬೇಕು".

। ಬಸವಣ್ಣ

### ಪಂಚಾಂಗ

(ಗುರುವಾರ 23, ಜನವರಿ-2025)

- ಶ್ರೀ ಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಕೃಷ್ಣ ಪಕ್ಷ, ನವಮಿ,
- ಗುರುವಾರ, ವಿಶಾಖ ನಕ್ಷತ್ರ.
- ರಾಹುಕಾಲ - 02:02 ರಿಂದ 03:28
- ಗುಳಿಕಕಾಲ - 09:42 ರಿಂದ 11:09
- ಯಮಗಂಡಕಾಲ - 06:49 ರಿಂದ 08:16

## ಸಂಕ್ಷಿಪ್ತ ಸುದ್ದಿ

### ಸಾಕುಪ್ರಾಣಿಗಳಿಗೆ ರಕ್ಷಣಾ ಕೇಂದ್ರ ತೆರೆಯಲು ಮುಂದಾದ ಬಿಬಿಎಂಪಿ

**ಬೆಂಗಳೂರು:** ಪ್ರಾಣಿ ರಕ್ಷಣೆಯ ಕಾರ್ಯದಲ್ಲಿ ಹೊಸ ಹೆಜ್ಜೆ ಇಡಲು ಮುಂದಾಗಿರುವ ಬಿಬಿಎಂಪಿ ಸಾಕುಪ್ರಾಣಿಗಳಿಗೆ ರಕ್ಷಣಾ ಕೇಂದ್ರ ತೆರೆಯಲು ಮುಂದಾಗಿದೆ. ದಾಸರಹಳ್ಳಿ, ಪೂರ್ವ ವಲಯ ಹಾಗೂ ದಕ್ಷಿಣ ವಲಯದಲ್ಲಿ ಪ್ರಾಣಿಗಳ ರಕ್ಷಣಾ ಕೇಂದ್ರ ಸ್ಥಾಪಿಸಲು ಪಾಲಿಕೆ ಮುಂದಾಗಿದ್ದು, ಆ ಮೂಲಕ ಸ್ಥಳೀಯ ಸಂಸ್ಥೆಯ ಮೂಲಕ ಸ್ಥಾಪಿಸಲ್ಪಟ್ಟ ದೇಶದ ಮೊದಲ ಪ್ರಾಣಿ ಸಂರಕ್ಷಣಾ ಕೇಂದ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಲಿದೆ.



ಬೆಂಗಳೂರಿನಲ್ಲಿ ಅನಾಥವಾಗಿ ಅಲೆಯುವ ಸಾಕುಪ್ರಾಣಿಗಳಿಗೆ ಗಾಯಗೊಂಡಾಗ ರಕ್ಷಣೆ ನೀಡುವುದರ ಜೊತೆಗೆ ಆರೈಕೆ ನೀಡುವುದು ಪ್ರಾಣಿ ಸಂರಕ್ಷಣಾ ಕೇಂದ್ರ ಸ್ಥಾಪನೆಯ ಉದ್ದೇಶವಾಗಿದೆ. ಪುಟ 2

### ರೈತರಿಗೆ ಇಂಧನ ಇಲಾಖೆಯಿಂದ ಸಿಹಿ ಸುದ್ದಿ

**ಬೆಂಗಳೂರು:** ರೈತರಿಗೆ ಇಂಧನ ಇಲಾಖೆ ಗುಡ್ ನ್ಯೂಸ್ ನೀಡಿದ್ದು ಇಲ್ಲಿಯವರೆಗೆ 2.5 ಲಕ್ಷ ಅಕ್ರಮ ಪಂಪ್ ಸೆಟ್‌ಗಳು ಸಕ್ರಮ ಎಂದು ಘೋಷಿಸಿದೆ.

» **2.5 ಲಕ್ಷ ಅಕ್ರಮ ಪಂಪ್ ಸೆಟ್‌ಗಳು ಸಕ್ರಮ**



ವಿಜಯಪುರದಲ್ಲಿ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಜನಪ್ರತಿನಿಧಿಗಳೊಂದಿಗೆ ಸಭೆಯಲ್ಲಿ ಸಚಿವ ಕೆಜೆ ಜಾರ್ಜ್ ಈ ಮಾಹಿತಿ ನೀಡಿದ್ದಾರೆ. ಇಂಧನ ಇಲಾಖೆಯಿಂದ 2.5 ಲಕ್ಷ ಅಕ್ರಮ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದ್ದು, ಬಾಕಿ ಇರುವ 2 ಲಕ್ಷ ಪುಟ 2

## ಮುಡಾ ಹಗರಣ | ಸಿದ್ದರಾಮಯ್ಯಗೆ ಬಿಗ್ ರಿಲೀಫ್

# ಲೋಕಾ ವರದಿ ಕ್ಲೀನ್ ಚಿಟ್

**ಬೆಂಗಳೂರು:** ಕರ್ನಾಟಕ ರಾಜಕೀಯದಲ್ಲಿ ಅಲ್ಲೋಲಕಲ್ಲೋಲ ಮೂಡಿಸಿದ್ದ ಮುಡಾ ಹಗರಣದ ಲೋಕಾಯುಕ್ತ ತನಿಖೆ ಪೂರ್ಣಗೊಂಡಿದ್ದು, ವರದಿಯೂ ಸಿದ್ಧವಾಗಿದೆ. ಲೋಕಾಯುಕ್ತ ವರದಿಯಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಪಾರ್ವತಿಗೆ ಕ್ಲೀನ್‌ಚಿಟ್ ನೀಡಿರುವುದು ತಿಳಿದುಬಂದಿದೆ. ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಪಾತ್ರ ಎಲ್ಲೂ ಕಂಡು ಬಂದಿಲ್ಲ.



ಡಿ ನೋಟಿಫೈ ಮಾಡುವಾಗ, ಭೂಪರಿವರ್ತನೆ ಮಾಡುವಾಗ ಅಧಿಕಾರಿಗಳು ನಿಯಮಗಳನ್ನು ಉಲ್ಲಂಘನೆ ಮಾಡಿದ್ದಾರೆ ಎಂದು ಲೋಕಾಯುಕ್ತ ತನಿಖಾ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಮುಡಾ ಆಯುಕ್ತರು, ರವಿನ್ಯೂ ಅಧಿಕಾರಿಗಳು ನಿಯಮಗಳನ್ನು ಗಾಳಿಗೆ ತೂರಿರುವುದು ಕಂಡು ಬಂದಿದೆ. ಅಧಿಕಾರಿಗಳು ಅಪರಾಧ ಎಸಗಿರುವ ಬಗ್ಗೆ ಮುಂದೇನು ಮಾಡಬೇಕೆಂಬುದರ ಪುಟ 2

### ಶಿಕ್ಷಣದ ಗುಣಮಟ್ಟ ಸುಧಾರಣೆಗೆ 100 ಹೊಸ ಸೈನಿಕ ಶಾಲೆಗಳ ಸ್ಥಾಪನೆ

**ಅಲಪ್ಪುಳ:** ಭಾರತದಲ್ಲಿ ಶಿಕ್ಷಣದ ಮೂಲಭೂತ ಗುಣಮಟ್ಟವನ್ನು ಸುಧಾರಿಸಲು ದೇಶಾದ್ಯಂತ 100 ಹೊಸ ಸೈನಿಕ ಶಾಲೆಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಕೇರಳದ ಅಲಪ್ಪುಳದಲ್ಲಿರುವ ವಿದ್ಯಾಧಿರಾಜ ವಿದ್ಯಾಪೀಠಂ ಸೈನಿಕ ಶಾಲೆಯ ವಾರ್ಷಿಕ ದಿನಾಚರಣೆಯ ಪುಟ 2



### ಪವನ್ ಕಲ್ಯಾಣ್ ಜನಸೇನಾ ಪಕ್ಷಕ್ಕೆ ಚುನಾವಣಾ ಆಯೋಗದಿಂದ ಪ್ರಾದೇಶಿಕ ಪಕ್ಷದ ಮಾನ್ಯತೆ

**ನವದೆಹಲಿ:** ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರ ಜನಸೇನಾ ಪಕ್ಷಕ್ಕೆ ಭಾರತೀಯ ಚುನಾವಣಾ ಆಯೋಗ (ಇಸಿಐ) ಅಧಿಕೃತವಾಗಿ 'ಮಾನ್ಯತೆ ಪಡೆದ ರಾಜಕೀಯ ಪಕ್ಷ' ಎಂಬ ಸ್ಥಾನಮಾನವನ್ನು ನೀಡಿದೆ. ಈ ಕುರಿತು ಪಕ್ಷವು ಬುಧವಾರ ಸಾಮಾಜಿಕ ಮಾಧ್ಯಮವಾದ ಎಕ್ಸ್ ನಲ್ಲಿ ಈ ಘೋಷಣೆ ಮಾಡಿದೆ. ಚುನಾವಣಾ ಆಯೋಗವು ಕಾಯ್ದಿರಿಸಿದಂತೆ ಪಕ್ಷವು ಈಗ ಪಕ್ಷದ ಶಾಶ್ವತ ಅಧಿಕೃತ ಚುನಾವಣಾ ಚಿಹ್ನೆಯಾಗಿ "ಗಾಜಿನ ಲೋಟ" ವನ್ನು ಹೊಂದಿದೆ. ಪುಟ 2






ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines



# ಸಿದ್ದರಾಮಯ್ಯ ಸಿಎಂ ಆಗಿರಲು ನಾಲಾಯಕ್: ಜೆಡಿಎಸ್ ಕಿಡಿ

**ಬೆಂಗಳೂರು:** ಕೆ.ಆರ್ ಮಾರುಕಟ್ಟೆಯಲ್ಲಿ ನಡೆದಿದ್ದ ಸಾಮೂಹಿಕ ಅತ್ಯಾಚಾರ ಕೇಸ್‌ಗೆ ಸಂಬಂಧಿಸಿದಂತೆ ಉಡಾಫೆ ಉತ್ತರ ಕೊಟ್ಟಿದ್ದ ಸಿಎಂ ಸಿದ್ದರಾಮಯ್ಯ ವಿರುದ್ಧ ಜೆಡಿಎಸ್ ಕಿಡಿಕಾರಿದೆ.



ಸಿದ್ದರಾಮಯ್ಯ ವಿರುದ್ಧ ಎಕ್ಸ್‌ನಲ್ಲಿ ಕಿಡಿಕಾರಿರುವ ಜೆಡಿಎಸ್, ವಿಪಕ್ಷದಲ್ಲಿ ಇದ್ದಾಗ ಸಿದ್ದರಾಮಯ್ಯ ಮಾಡಿದ್ದ ಟ್ವೀಟ್ ಟ್ಯಾಗ್ ಮಾಡಿ ವಾಗ್ದಾಳಿ ನಡೆಸಿದೆ. ಅಷ್ಟೇ ಅಲ್ಲದೇ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ನಾಲಾಯಕ್ ಎಂದು ಲೇವಡಿ ಮಾಡಿದೆ.

**ಜೆಡಿಎಸ್ ಟ್ವೀಟ್ ಏನು?:** ಸಿದ್ದರಾಮಯ್ಯ ಅವರೇ ಅಧಿಕಾರ ಅನುಭವಿಸುವಾಗ ನಿಮಗೆ ಮರೆವಿನ ಕಾಯಿಲೆಯೇ? ಬೆಂಗಳೂರಿನ ಕೆ.ಆರ್.ಮಾರ್ಕೆಟ್‌ನಲ್ಲಿ ನಡೆದ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಇಡೀ ರಾಜ್ಯವೇ ತಲೆ ತಗ್ಗಿಸುವ ಹೀನ ಕೃತ್ಯವಾಗಿದೆ.

ಇದನ್ನು ಪ್ರಶ್ನಿಸಿದರೇ ಹಿಂದಿನ ಸರ್ಕಾರಗಳ ಕಾಲದಲ್ಲಿ ರೇಪ್ ಆಗಿಲ್ವಾ ಎಂದು ಸಮರ್ಥಿಸಿಕೊಳ್ಳುವ ನೀವು ರಾಜ್ಯದ ಮುಖ್ಯಮಂತ್ರಿಯಾಗಿರಲು ನಾಲಾಯಕ್ ಸಿದ್ದರಾಮಯ್ಯ. ಕಾಂಗ್ರೆಸ್ ಸರ್ಕಾರದ ದುರಾಡಳಿತದಲ್ಲಿ ಕೊಲೆ, ದರೋಡೆ, ಅತ್ಯಾಚಾರ ಪ್ರಕರಣಗಳು ಹೆಚ್ಚುತ್ತಲೇ ಇರುವುದು ರಾಜ್ಯದಲ್ಲಿ ಕುಸಿದುಬಿದ್ದಿರುವುದು ಕಾನೂನು-ಸುವ್ಯವಸ್ಥೆಗೆ ಸಾಕ್ಷಿ ಎಂದು ವಾಗ್ದಾಳಿ ನಡೆಸಿದೆ.

# ಹೆಬ್ಬಾಳ್ಕರ್ ಕಾರನ್ನು ಬಟ್ಟೆ ಹಾಕಿ ಮುಚ್ಚಿದ್ದು ಯಾಕೆ?

**ಬೆಂಗಳೂರು:** ಲಕ್ಷ್ಮಿ ಹೆಬ್ಬಾಳ್ಕರ್ ಕಾರು ಅಪಘಾತ ಪ್ರಕರಣ ಬಗ್ಗೆ ಮತ್ತೆ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅನುಮಾನ ವ್ಯಕ್ತಪಡಿಸಿದ್ದಾರೆ.ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಲಕ್ಷ್ಮಿ ಹೆಬ್ಬಾಳ್ಕರ್ ಕಾರು ಅಪಘಾತವಾಗಿ ಕಾರಿನ ಗಾಜುಗಳು ಒಡೆದಿದೆ. ಆದರೆ ಅದನ್ನು ಬಟ್ಟೆ ಹಾಕಿ ಮುಚ್ಚಲಾಗಿದೆ. ಕಾರನ್ನು ಬಟ್ಟೆಯಿಂದ ಮುಚ್ಚಿದ್ದು ಯಾಕೆ? ತಕ್ಷಣ ಯಾಕೆ ಕಾರನ್ನು ಸ್ಥಳದಿಂದ ಸಾಗಿಸಲಾಯಿತು ಎಂದು ಪ್ರಶ್ನೆ ಮಾಡಿದ್ದಾರೆ. ಕಾರಿನಲ್ಲಿ ಕೋಟ್ಯಂತರ ರೂ. ಸಾಗಿಸಲಾಗುತ್ತಿತ್ತು ಅಂತ ಜನ ಮಾತನಾಡಿಕೊಳ್ಳುತ್ತಿದ್ದಾರೆ. ಇದಕ್ಕೆ ಸರ್ಕಾರ ಉತ್ತರ ಕೊಡಬೇಕು ತನಿಖೆ ಮಾಡುತ್ತಿರುವುದು ಯಾರು? ಡ್ರೈವರ್ ಎಲ್ಲಿ ಎಂದು ಪ್ರಶ್ನಿಸಿದರು.



» **ಮತ್ತೆ ಅನುಮಾನ ವ್ಯಕ್ತಪಡಿಸಿದ ಛಲವಾದಿ**

ನಾಯಿ ಅಡ್ಡ ಬಂತು ಅಂತ ಮೊದಲು ಹೇಳಿದ್ದೀರಿ. ನಂತರ ಹಿಟ್ ಅಂಡ್ ರನ್ ಆಗಿದೆ ಎನ್ನಲಾಗಿತ್ತು. ಬಳಿಕ ಚಾಲಕನಿಗೆ ನಿದ್ದೆ ಬಂದಿತ್ತು ಎಂಬ ಸುದ್ದಿ ಬಂತು. ಹೆಬ್ಬಾಳ್ಕರ್ ಯಾಕೆ ಸರ್ಕಾರಿ ಕಾರಲ್ಲಿ ಹೋಗಲಿಲ್ಲ, ಗನ್ ಮ್ಯಾನ್, ಎಸ್ಕಾರ್ಟ್ ತಗೊಳ್ಳಲಿಲ್ಲ ಎಂದು ಪ್ರಶ್ನಿಸಿದರು. ಅಪಘಾತ ಪ್ರಕರಣದಲ್ಲಿ ಬಹಳ ಅನುಮಾನಗಳಿವೆ, ಸರ್ಕಾರ ಉತ್ತರ ಕೊಡದಿದ್ದರೆ ಅನುಮಾನಗಳೇ ಸತ್ಯ ಆಗುತ್ತವೆ. ಈ ವಿಚಾರಗಳ ಬಗ್ಗೆ ತನಿಖೆ ಆಗತ್ಯ ಎಂದು ಛಲವಾದಿ ಆಗ್ರಹಿಸಿದರು.

# ಕರ್ನಾಟಕ ಎಕ್ಸ್‌ಪ್ರೆಸ್ ರೈಲುಗೆ 20 ಮಂದಿ ಬಲಿ

**ಮುಂಬೈ:** ಮಹಾರಾಷ್ಟ್ರದ ಜಲಗಾಂವ್‌ನಲ್ಲಿ ಬುಧವಾರ ಕರ್ನಾಟಕ ಎಕ್ಸ್‌ಪ್ರೆಸ್ ರೈಲು ಹರಿದು ಕನಿಷ್ಠ 20 ಜನರು ಸಾವನ್ನಪ್ಪಿದ್ದಾರೆ. ರೈಲ್ವೇ ಅಧಿಕಾರಿಗಳು ಮತ್ತು ಪೊಲೀಸರು ಸ್ಥಳಕ್ಕೆ ದೌಡಾಯಿಸಿದ್ದು ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.



**ಘಟನೆ ಹೇಗಾಯ್ತು?:** ಮೊದಲು ಪುಷ್ಪಕ್ ಎಕ್ಸ್‌ಪ್ರೆಸ್ ರೈಲಿನಲ್ಲಿ ಬಿಸಿ ಗಾಳಿ ಕಾಣಿಸಿದೆ.

ಈ ಬಿಸಿಗಾಳಿಯನ್ನೇ ಪ್ರಯಾಣಿಕರು ಬೆಂಕಿ ಎಂದು ಭಾವಿಸಿ ಚೈನ್ ಎಳೆದು ನಿಲ್ಲಿಸುವ ಪ್ರಯತ್ನ ಮಾಡಿದ್ದಾರೆ. ಈ ಸಂದರ್ಭದಲ್ಲಿ ಅಪಾಯದಿಂದ ಪಾರಾಲು ರೈಲಿನಿಂದ ಕೆಳಕ್ಕೆ ಜಿಗಿದು ಮತ್ತೊಂದು ಹಳಿಗೆ ಬಂದಿದ್ದಾರೆ. ಈ ವೇಳೆ ಕರ್ನಾಟಕ ಎಕ್ಸ್‌ಪ್ರೆಸ್ ಬಂದಿದ್ದು ಹಳಿಯಲ್ಲಿದ್ದ ಪ್ರಯಾಣಿಕರ ಮೇಲೆ ಹರಿದಿದೆ. ಇದರಿಂದಾಗಿ ಸಾವು ನೋವು ಜಾಸ್ತಿಯಾಗಿದೆ. ದೆಹಲಿಯಿಂದ ಬೆಂಗಳೂರಿಗೆ ಕರ್ನಾಟಕ ಎಕ್ಸ್‌ಪ್ರೆಸ್ ಬರುತ್ತಿದ್ದರೆ, ಪುಷ್ಪಕ್ ಎಕ್ಸ್‌ಪ್ರೆಸ್ ಲಕ್ನೋದಿಂದ ಮುಂಬೈಗೆ ಬರುತ್ತಿತ್ತು.

# ಬಿಜೆಪಿ ಕೋರ್ ಕಮಿಟಿ ಸಭೆ

## ರಾಮುಲುಗೆ ರಾಧಾಮೋಹನ್ ದಾಸ್ ಕ್ಲಾಸ್!

**ಬೆಂಗಳೂರು:** ಕೋರ್ ಕಮಿಟಿ ಸಭೆಯಲ್ಲಿ ಮಾಜಿ ಸಂಸದ ಶ್ರೀರಾಮುಲುಗೆ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಕ್ಲಾಸ್ ಮಾಡಿರುವ ವಿಚಾರ ಮೂಲಗಳಿಂದ ತಿಳಿದು ಬಂದಿದೆ.

ಸಭೆಯಲ್ಲಿ ಸಂಡೂರು ವಿಧಾನಸಭಾ ಕ್ಷೇತ್ರದ ಉಪ-ಚುನಾವಣೆಯಲ್ಲಿ ಬಂಗಾರು ಹನುಮಂತು ಸೋಲಿನ ಬಗ್ಗೆ ಚರ್ಚೆ ನಡೆಯಿತು. ಚುನಾವಣೆಯ ಫಲಿತಾಂಶದ ಬಳಿಕ ಶ್ರೀರಾಮುಲು ವಿರುದ್ಧ ಬಿಜೆಪಿ ನಾಯಕರಿಗೆ ಬಂಗಾರು ಹನುಮಂತು ದೂರು ನೀಡಿದ್ದರು.

ಬಂಗಾರು ಹನುಮಂತು ದೂರನ್ನು ಆಧರಿಸಿ, ಕೋರ್ ಕಮಿಟಿ ಸಭೆಯಲ್ಲಿ ರಾಧಾಮೋಹನ್ ದಾಸ್ ಅಗರ್‌ವಾಲ್ ರಾಮುಲು ಅವರ ಕಾರ್ಯವೈಖರಿ ಪ್ರಶ್ನಿಸಿದ್ದಾರೆ. ನೀವು ಉಪ-ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಪರ ಸರಿಯಾಗಿ ಕಾರ್ಯನಿರ್ವಹಣೆ ಮಾಡಿಲ್ಲ ಎಂಬ ದೂರು ಬಂದಿದೆ. ಇದಕ್ಕೆ ಉತ್ತರಿಸಿ ಎಂದು ಕೇಳಿದ್ದಾರೆ.



ಅಗರ್‌ವಾಲ್ ಅವರ ಶಾಕಿಂಗ್ ಪ್ರಶ್ನೆಗೆ ಗಲಬಿಲಿಗೊಂಡ ಶ್ರೀರಾಮುಲು ನಾನು ಕಷ್ಟಪಟ್ಟು ಶ್ರಮವಹಿಸಿ, ಉಪ-ಚುನಾವಣೆಯಲ್ಲಿ ಕೆಲಸ ಮಾಡಿದ್ದೇನೆ. ನನ್ನ ವಿರುದ್ಧ ಸುಖಾಸುಮ್ಮನೆ ದೂರು ನೀಡಲಾಗಿದೆ, ಇದು ಸರಿಯಲ್ಲ. ಇಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಣೆ ಮಾಡುವವರಿಗೆ ಬೆಲೆಯೇ ಸಿಗುವುದಿಲ್ಲ ರಾಮುಲು ಅಸಮಾಧಾನ ಹೊರಹಾಕಿದ್ದಾರೆ. ರಾಮುಲು ಮಾತಿಗೆ ಏನೂ ಪ್ರತಿಕ್ರಿಯೆ ನೀಡದೇ ರಾಧಾಮೋಹನ್ ದಾಸ್ ಅಗರ್‌ವಾಲ್ ಸುಮ್ಮನಾಗಿದ್ದರು. ಈ ಮೂಲಕ ಬಳ್ಳಾರಿ ಬಿಜೆಪಿ ಘಟಕದ ಒಳ ಕಚ್ಚಾಟ ಕೋರ್ ಕಮಿಟಿ ಸಭೆಯಲ್ಲೂ ಬಹಿರಂಗವಾಯಿತು.

ಕೋರ್ ಕಮಿಟಿ ಸಭೆ ಮುಕ್ತಾಯವಾಗುತ್ತಿದ್ದಂತೆ ಮಾಧ್ಯಮಗಳ ಮುಂದೆ ಬಂದು ಹೇಳಿಕೆ ನೀಡಲು ಶ್ರೀರಾಮುಲು ನಿಂತಿದ್ದರು. ಈ ವೇಳೆ ರಾಮುಲು ಅವರನ್ನು ಸಿ.ಟಿ. ರವಿ ಹಾಗೂ ವಿಜಯೇಂದ್ರ ತಡೆದರು. ರವಿ ಹೇಳಿಕೆಯ ಬಳಿಕ ರಾಮುಲು ಅವರನ್ನು ಸಮಾಧಾನಪಡಿಸಲು ವಿಜಯೇಂದ್ರ, ಸಿ.ಟಿ.ರವಿ ಪಕ್ಕಕ್ಕೆ ಕರೆದುಕೊಂಡು ಹೋದರು.

ಸದ್ಯ ಮಾಧ್ಯಮಗಳ ಮುಂದೆ ಯಾವುದೇ ವಿಚಾರವನ್ನು ಪ್ರಸ್ತಾಪ ಮಾಡದೇ ಹೊರಡುವಂತೆ ರಾಮುಲುಗೆ ವಿಜಯೇಂದ್ರ ಸೂಚಿಸಿದ್ದಾರೆ. ನಂತರ ಬೇಸರದಿಂದಲೇ ಬಿಜೆಪಿ ಕಚೇರಿಯಿಂದ ರಾಮುಲು ಹೊರಟರು.

# ರೌಡಿಶೀಟರ್ ಹತ್ಯೆ

## ಬೆಂಗಳೂರಲ್ಲಿ ಕೊಲೆ ಮಾಡಿ ತಮಿಳುನಾಡಿನಲ್ಲಿ ಸುಟ್ಟುಹಾಕಿದ್ದ

**ಬೆಂಗಳೂರು:** ಅಕ್ಕಪಕ್ಕದವರಿಗೂ ಅನುಮಾನ ಬಾರದಂತೆ ಅಪಾರ್ಟ್‌ಮೆಂಟ್‌ನ ಫ್ಲ್ಯಾಟ್‌ನಲ್ಲಿ ರೌಡಿಯ ಹತ್ಯೆ ಮಾಡಿ, ಮೃತದೇಹವನ್ನು ತಮಿಳುನಾಡಿನಲ್ಲಿ ಸುಟ್ಟುಹಾಕಿದ್ದ ಹಂತಕ ಕೊನೆಗೂ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ.

ಜ.12 ರಂದು ರೌಡಿ ಗುಣನನ್ನು ಭಾರತಿನಗರ ರೌಡಿಶೀಟರ್ ಬ್ರಿಜೇಶ್ ಮಾತನಾಡಬೇಕು ಅಂತ ತನ್ನ ಬಾಗಲೂರು ಬಳಿಯ ಅಪಾರ್ಟ್‌ಮೆಂಟ್‌ಗೆ ಕರೆಸಿದ್ದ. ಇಬ್ಬರ ನಡುವೆ ಜಗಳವಾಗಿ ಬ್ರಿಜೇಶ್ ಮಚ್ಚಿನಿಂದ ಹಲ್ಲೆ ಮಾಡಿದ್ದಾನೆ. ಪರಿಣಾಮವಾಗಿ ಸ್ಥಳದಲ್ಲಿಯೇ ಗುಣ ಪ್ರಾಣ ಬಿಟ್ಟಿದ್ದ. ಪೊಲೀಸರ ಕೈಗೆ ಸಿಕ್ಕಿ ಬೀಳಬಾರದೆಂದು ಆರೋಪಿ, ಮೃತದೇಹವನ್ನು ತಮಿಳುನಾಡಿನ ನಿರ್ಜನ ಪ್ರದೇಶಕ್ಕೆ ಸಾಗಿಸಿದ್ದ.

ರೌಡಿಶೀಟರ್ ಬ್ರಿಜೇಶ್ ಚಿನ್ನ ತಂದು ಮಾರಲು ಗುಣನಿಗೆ ನೀಡಿದ್ದ. ಗುಣ ಚಿನ್ನವನ್ನು ಮುತ್ತೂಟ್ ಫೈನಾನ್ಸ್‌ನಲ್ಲಿ 6 ಲಕ್ಷಕ್ಕೆ ಅಡವಿಟ್ಟಿದ್ದ. ನಂತರ ಬಂದ ಹಣದಲ್ಲಿ ಇಬ್ಬರು ಹಂಚಿಕೊಂಡಿದ್ದರು. ಚಿನ್ನದ ಮೇಲೆ ಇರುವ ಒಂದು ಲೇಯರ್ ಭಾಗವನ್ನು ಮಾತ್ರ ಚಿನ್ನದಿಂದ ಹಾಕಿ ನಂತರ ಉಳಿದ ಭಾಗ ಎಲ್ಲವೂ ಸಹ ನಕಲಿಯಾಗಿತ್ತು. ಮುತ್ತೂಟ್ ಫೈನಾನ್ಸ್‌ನವರು ನಕಲ್ಲಿ ಎಂದು ತಿಳಿದು ಗುಣನಿಗೆ ಫೋನ್ ಮಾಡಿ ಹಣ ವಾಪಸ್ ಕೇಳಿದ್ದಾರೆ. ಇಲ್ಲದಿದ್ದರೆ ಪೊಲೀಸ್‌ಗೆ ದೂರು ದಾಖಲಿಸುತ್ತೇವೆ ಎಂದಿದ್ದಾರೆ.



ಆಗ ಗುಣ, ಬ್ರಿಜೇಶ್‌ಗೆ ಹಣ ವಾಪಸ್ ನೀಡಲು ಒತ್ತಾಯಿಸಿದ್ದಾನೆ. ಇದೆಲ್ಲದರಿಂದ ಕೋಪಗೊಂಡಿದ್ದ ಬ್ರಿಜೇಶ್ ಏನಾದ್ರೂ ಒಂದು ಗತಿ ಕಾಣಿಸಬೇಕು ಅಂತ ನಿರ್ಧಾರ ಮಾಡಿದ್ದ. ಅದರಂತೆ ಜ.12 ರಂದು ಕಾಲ್ ಮಾಡಿ ಅಪಾರ್ಟ್ಮೆಂಟ್‌ಗೆ ಕರೆಸಿಕೊಂಡಿದ್ದಾನೆ. ಅಲ್ಲಿ ಬ್ರಿಜೇಶ್ ಮಚ್ಚಿನಿಂದ ಹೊಡೆದು ಕೊಲೆ ಮಾಡಿದ್ದಾನೆ. ಬಳಿಕ ತಮಿಳುನಾಡಿನಲ್ಲಿ ಮೃತದೇಹ ಬಿಸಾಡಿದ್ದಾನೆ. ಬಾಗಲೂರು ಪೊಲೀಸರು ತಮಿಳುನಾಡಿಗೆ ಹೋಗಿದ್ದು, ಮೃತದೇಹ ಪತ್ತೆ ಹಚ್ಚಿ ತನಿಖೆ ಮುಂದುವರೆಸಿದ್ದಾರೆ.

ರೌಡಿಶೀಟರ್ ಗುಣನ ಮೇಲೆ ಸಾಕಷ್ಟು ಕ್ರಿಮಿನಲ್ ಕೇಸ್‌ಗಳು ಇದ್ದವು. ಬ್ರಿಜೇಶ್ ಮೇಲೂ ಹಲವಾರು ಕೇಸ್ ಇವೆ. ಹೀಗಾಗಿ, ಇಬ್ಬರ ಮೇಲೂ ರೌಡಿಶೀಟ್ ಓಪನ್ ಮಾಡಲಾಗಿತ್ತು. ಕೊಲೆ ಬಳಿಕ ರೌಡಿಶೀಟರ್ ಬ್ರಿಜೇಶ್ ಹಾಗೂ ಆತನ ಸಹಚರರು ಮೂರು ದಿನಗಳ ನಂತರ ಪತ್ತೆಯಾಗಿದ್ದು, ಬಾಗಲೂರು ಪೊಲೀಸರು ತೀವ್ರ ವಿಚಾರಣೆ ಮಾಡುತ್ತಿದ್ದಾರೆ.

# 7 ಲಕ್ಷ ಆಸ್ತಿಗಳಿಗಿಲ್ಲ ಎ-ಬಿ ಖಾತಾ ಬಿಬಿಎಂಪಿಗೆ ಹೊಸ ತಲೆನೋವು



**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಆಸ್ತಿಗಳ ನಕಲಿ ದಾಖಲಾತಿ, ರಿಯಲ್ ಎಸ್ಟೇಟ್ ಮಾಫಿಯಾಗೆ ಕಡಿವಾಣ ಹಾಕಲು ಹೊಸ ಹೊಸ ಕ್ರಮಕ್ಕೆ ಬಿಬಿಎಂಪಿ ಮುಂದಾಗಿದೆ. ಹಾಗಾಗಿಯೇ ನಿವೇಶನ, ಆಸ್ತಿ ಖಾತೆಗಳ ಗೊಂದಲ ಬಗೆಹರಿಸಲು ಪಾಲಿಕೆ ಇ-ಖಾತಾ ಯೋಜನೆ ಜಾರಿ ಮಾಡಿದೆ. ಆದರೀಗ ಬಿಬಿಎಂಪಿಗೆ ಮತ್ತೊಂದು ತಲೆನೋವು ಶುರುವಾಗಿದೆ.

ಹೌದು. ಮಹಾನಗರ ಬೆಂಗಳೂರಿನಲ್ಲಿ ಆಸ್ತಿಗಳ ನಕಲಿ ದಾಖಲಾತಿ, ರಿಯಲ್ ಎಸ್ಟೇಟ್ ಮಾಫಿಯಾಗೆ ಕಡಿವಾಣ ಸೇರಿದಂತೆ ನಿವೇಶನ, ಆಸ್ತಿಗಳ ಗೊಂದಲಗಳಿಗೆ ತೆರೆ ಎಳೆಯಲು ಪಾಲಿಕೆ ಇ-ಖಾತಾ ಯೋಜನೆ ಜಾರಿಗೊಳಿಸಿದೆ. ಕಳೆದ 2-3 ತಿಂಗಳಿಂದ ಇ-ಖಾತಾ ಪಡೆಯಲು ಆಸ್ತಿ ಮಾಲೀಕರಿಗೆ ಅವಕಾಶವನ್ನೂ ಮಾಡಿಕೊಡಲಾಗಿದೆ. ಈ ನಡುವೆ ನಗರದಲ್ಲಿ 7 ಲಕ್ಷ ಆಸ್ತಿಗಳಿಗೆ ಎ ಅಥವಾ ಬಿ ಖಾತಾ ಇಲ್ಲದಿರುವುದು ಬೆಳಕಿಗೆ ಬಂದಿದೆ. ಇದು ಬಿಬಿಎಂಪಿ ಅಧಿಕಾರಿಗಳಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ.

ಹೌದು. ಸುಮಾರು 7 ಲಕ್ಷ ಆಸ್ತಿಗಳಿಗೆ ಯಾವುದೇ ದಾಖಲಾತಿಗಳು ಇಲ್ಲವಂತೆ. ಇಂಥಾ ಆಸ್ತಿಗಳಿಗೆ ಈಗ ಹೇಗೆ ಇ-ಖಾತಾ ನೀಡುವುದು ಎನ್ನುವುದೇ ಮತ್ತೊಂದು ಸಮಸ್ಯೆ. ಪಾಲಿಕೆ 22 ಲಕ್ಷ ಡ್ರಾಫ್ಟ್ ಅನ್ನು ಆನ್‌ಲೈನ್‌ಗೆ ಅಪ್ಲೋಡ್ ಮಾಡಿದೆ. ಆದ್ರೆ ಒಂದೇ ಸರ್ವೇ ನಂಬರ್ ಹಾಗೂ ಒಂದೇ ಖಾತೆಯ ಆಸ್ತಿಗಳಿಗೆ ಇಬ್ಬರು-ಮೂವರು ಮಾಲೀಕರೆಂದು ಹೇಳಿಕೊಳ್ಳುವವರಿಂದ ಅರ್ಜಿಗಳು ಪಾಲಿಕೆಗೆ ಬಂದಿದೆ.

ಈ ಎಲ್ಲ ಬೆಳವಣಿಗೆಯಿಂದ ಇ-ಖಾತಾ ಹಂಚಿಕೆಗೆ ದೊಡ್ಡ ತೊಡಕಾಗಿದೆ. ಇದು ಪಾಲಿಕೆಯ ತಳಮಟ್ಟದ ಕಂದಾಯ ಅಧಿಕಾರಿಗಳ ಲಂಚಬಾಕತನದಿಂದ ಆಗಿರುವ ಸಮಸ್ಯೆ ಎನ್ನುವುದು ಸಾರ್ವಜನಿಕರ ಆರೋಪ.

# ದರ್ಶನ್ ಜಾಮೀನು ರದ್ದುಗೊಳಿಸಿ ಸುಪ್ರೀಂಗೆ 1492 ಪುಟಗಳ ದಾಖಲೆ ಸಲ್ಲಿಸಿದ ಪೊಲೀಸರು

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜಾಮೀನಿನ ಮೇಲೆ ಬಿಡುಗಡೆ ಆಗಿರುವ ನಟ ದರ್ಶನ್‌ಗೆ ಸಂಕಷ್ಟ ತಪ್ಪಿದಂತೆ ಕಾಣ್ತಿಲ್ಲ. ದರ್ಶನ್ ಹಾಗೂ 7 ಆರೋಪಿಗಳ ಜಾಮೀನು ರದ್ದುಕೋರಿ ಸುಪ್ರೀಂಕೋರ್ಟ್‌ಗೆ ಪೊಲೀಸರು ಅರ್ಜಿ ಸಲ್ಲಿಸಿದ್ದಾರೆ.

ವಕೀಲ ಅನಿಲ್ ನಿಶಾನಿ ಮುಖಾಂತರ ಮೇಲ್ಮನವಿ ಸಲ್ಲಿಸಿರುವ ಸರ್ಕಾರ ಬರೋಬ್ಬರಿ 1,492 ಪುಟಗಳ ಕಡತಗಳನ್ನು ಸಲ್ಲಿಕೆ ಮಾಡಿದೆ.



**ಕಡತದಲ್ಲಿ ಏನಿದೆ?:** ಹೈಕೋರ್ಟ್ ಜಾಮೀನು ಆದೇಶ, ಕಾಮಾಕ್ಷಿಪಾಳ್ಯ ಠಾಣೆಯಲ್ಲಿ ದಾಖಲಾದ ಎಫ್‌ಐಆರ್ ಮತ್ತು ದೂರಿನ ಪ್ರತಿ, ಮರಣೋತ್ತರ ಪರೀಕ್ಷೆಯ ವರದಿ, ಆರೋಪಿಗಳ ಗ್ರೌಂಡ್ಸ್ ಆಫ್ ಅರೆಸ್ಟ್, ನ್ಯಾಯಾಲಯಕ್ಕೆ ಸಲ್ಲಿಸಿರುವ ಅಂತಿಮ ವರದಿಯ ತರ್ಜುಮೆ ಪ್ರತಿ.

ಪ್ರತ್ಯಕ್ಷ ದರ್ಶಿಗಳ ಹೇಳಿಕೆಯ ತರ್ಜುಮೆ ಕಾಪಿ, ಮರಣೋತ್ತರ ಪರೀಕ್ಷೆಯ ವರದಿ, ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ, ಸಿಡಿಆರ್, ಪಂಚನಾಮೆ ವರದಿ, ಆರೋಪಿಗಳ ಬಳಿ ವಶಪಡಿಸಿಕೊಂಡ ಡಿಜಿಟಲ್ ವಸ್ತುಗಳ ವಿಶ್ಲೇಷಣೆ ವರದಿ.

ಸೆಷನ್ಸ್ ನ್ಯಾಯಾಲಯದಲ್ಲಿ ಜಾಮೀನು ಅರ್ಜಿ ವಜಾ ಆದೇಶ ಪ್ರತಿ, ದರ್ಶನ್‌ಗೆ ನೀಡಿದ್ದ ಮಧ್ಯಂತರ ಜಾಮೀನು ಆದೇಶ ಪ್ರತಿ, ಜೈಲಿನಿಂದ ದರ್ಶನ್ ಬಗ್ಗೆ ಸಲ್ಲಿಕೆಯಾದ ವೈದ್ಯಕೀಯ ವರದಿ, ಬಿಜಿಎಸ್ ಆಸ್ಪತ್ರೆ ವೈದ್ಯರ ವರದಿ ಸೇರಿದಂತೆ ಒಟ್ಟು 15 ಅಂಶಗಳಿಗೆ ಸಂಬಂಧಿಸಿ ಒಟ್ಟು 1492 ಪುಟಗಳ ಕಡತವನ್ನು ಕೋರ್ಟ್‌ಗೆ ನೀಡಿದೆ.

# ಅಪಘಾತದಲ್ಲಿ ವಿದ್ಯಾಪೀಠದ 3 ವಿದ್ಯಾರ್ಥಿಗಳು ಚಾಲಕ ಸಾವು

**ರಾಯಚೂರು:** ಮಂತ್ರಾಲಯ ಸಂಸ್ಕೃತ ವಿದ್ಯಾಪೀಠದ ವಿದ್ಯಾರ್ಥಿಗಳು ಹಾಗೂ ಚಾಲಕ ಸೇರಿ ನಾಲ್ಕು ಜನ ಅಪಘಾತದಲ್ಲಿ ಸಾವನ್ನಪ್ಪಿರುವ ಘಟನೆ ಹಿನ್ನೆಲೆ ಮಂತ್ರಾಲಯ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥ ಸ್ವಾಮಿ ಮೃತರ ಆತ್ಮಕ್ಕೆ ಶಾಂತಿ ಕೋರಿದ್ದಾರೆ.

» **ಮಂತ್ರಾಲಯ ಶ್ರೀ ಸಂತಾಪ**



ಕೊಪ್ಪಳದ ಆನೆಗುಂದಿಯಲ್ಲಿ ಭಾವುಕರಾಗಿ ಮಾತನಾಡಿರುವ ಮಂತ್ರಾಲಯ ಶ್ರೀಗಳು, ಅಪಘಾತದಲ್ಲಿ ಮೃತರಾದವರ ಆತ್ಮಕ್ಕೆ ಸದ್ಗತಿಯಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸೋಣ. ನರಹರಿ ತೀರ್ಥರ ಆರಾಧನಾ ಉತ್ಸವದಲ್ಲಿ ಪಾಲ್ಗೊಳ್ಳಲು ಮಂತ್ರಾಲಯದಿಂದ ಉತ್ಸಾಹದಿಂದ ಹೊರಟಿದ್ದ ನಮ್ಮ ವಿದ್ಯಾರ್ಥಿಗಳ ವಾಹನ ತಾಂತ್ರಿಕ ದೋಷದಿಂದ ಅಪಘಾತಕ್ಕೀಡಾಗಿದೆ. ಮೂವರು ವಿದ್ಯಾರ್ಥಿಗಳು ಹಾಗೂ ಚಾಲಕ ತೀವ್ರ ಗಾಯಗಳಿಂದ ಸಾವನ್ನಪ್ಪಿದ್ದಾರೆ. ಓರ್ವ ವಿದ್ಯಾರ್ಥಿ ಆಸ್ಪತ್ರೆಗೆ ದಾಖಲಾಗಿದ್ದಾನೆ. ತೀವ್ರ ಗಾಯ ಹಾಗೂ ಭಯದಿಂದ ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದರು.

ಯಾವುದೇ ವಸ್ತುವಿಗೆ ಬೆಲೆಕಟ್ಟಬಹುದು, ಪ್ರಾಣಕ್ಕೆ ಬೆಲೆ ಕಟ್ಟಲು ಆಗಲ್ಲ. ಮೃತ ಮಕ್ಕಳ ಪೋಷಕರ ಜೊತೆ ಸಂಸ್ಥಾನ ಯಾವತ್ತಿಗೂ ಇರುತ್ತದೆ. ಆರ್ಥಿಕವಾಗಿ, ಸಾಮಾಜಿಕವಾಗಿ ಎಲ್ಲಾ ರೀತಿಯಿಂದಲೂ ಅವರಿಗೆ ಸಹಾಯ ಹಸ್ತ ನೀಡುತ್ತದೆ ಎಂದು ಹೇಳಿದರು. ಅಪಘಾತದಲ್ಲಿ ವಿದ್ಯಾರ್ಥಿಗಳಾದ 18 ವರ್ಷದ ಹಯವದನ, 22 ವರ್ಷದ ಸುಜಯೇಂದ್ರ, 20 ವರ್ಷದ ಅಭಿಲಾಷ್ ಹಾಗೂ ಚಾಲಕ 20 ವರ್ಷದ ಕಂಸಾಲಿ ಶಿವ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ 10 ಜನರಿಗೆ ಗಾಯಗಳಾಗಿದ್ದು, ವಿದ್ಯಾರ್ಥಿ ಜಯಸಿಂಹ ಪರಿಸ್ಥಿತಿ ಗಂಭೀರವಾಗಿದೆ. ಗಾಯಾಳುಗಳನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

# ಶಾಲೆಗೆ ಹೋಗುವುದಾಗಿ ಹೇಳಿ ತೆರಳಿದ್ದ 3 ಮಕ್ಕಳು ನಾಪತ್ತೆ

**ಹಾಸನ:** ಶಾಲೆಗೆ ಹೋಗುವುದಾಗಿ ಹೇಳಿ ಮನೆಯಿಂದ ತೆರಳಿದ್ದ ಮೂವರು ಮಕ್ಕಳು ನಾಪತ್ತೆಯಾಗಿರುವ ಘಟನೆ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಕುನಿಗನಹಳ್ಳಿ ಗ್ರಾಮದಲ್ಲಿ ನಡೆದಿದೆ.

ನಾಪತ್ತೆಯಾಗಿರುವ ಮೂವರು ವಿದ್ಯಾರ್ಥಿಗಳನ್ನು ಕುನಿಗನಹಳ್ಳಿ ಗ್ರಾಮದ ಧರ್ಮಪ್ರಕಾಶ್, ಮನು ಹಾಗೂ ಕಿರುಹುಣಸೆ ಗ್ರಾಮದ ಮಹೇಂದ್ರ ಎಂಬುವವರ ಮಕ್ಕಳಾಗಿದ್ದು, ಶರತ್ (16), ಧನಂಜಯ್ (16), ಮುರುಳಿ (16) ಎಂದು ಗುರುತಿಸಲಾಗಿದೆ.



ಮೂವರು ವಿದ್ಯಾರ್ಥಿಗಳು ಕುನಿಗನಹಳ್ಳಿ ಗ್ರಾ.ಪಂ. ವ್ಯಾಪ್ತಿಯ ಆದರವಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಹತ್ತನೇ ತರಗತಿ ವ್ಯಾಸಂಗ ಮಾಡುತ್ತಿದ್ದರು. ಬುಧವಾರ ಬೆಳಿಗ್ಗೆ 7:30ಕ್ಕೆ ಶಾಲೆಗೆ ಹೋಗುವುದಾಗಿ ಹೇಳಿ ಮನೆಯಿಂದ ತೆರಳಿದ್ದರು. ಮೂವರು ಶಾಲೆಗೆ ಬಾರದ ಹಿನ್ನೆಲೆ ಶಿಕ್ಷಕರು ಪೋಷಕರಿಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ. ನಂತರ ಗಾಬರಿಗೊಂಡ ಪೋಷಕರು ತಮ್ಮ ಮಕ್ಕಳಿಗಾಗಿ ಎಲ್ಲೆಡೆ ಹುಡುಕಾಟ ನಡೆಸಿದ್ದಾರೆ.

ರಾತ್ರಿಯಾದರೂ ಮೂವರು ಮಕ್ಕಳು ಮನೆಗೆ ವಾಪಸ್ ಬಂದಿಲ್ಲ. ಇನ್ನೂ ನಾಪತ್ತೆಯಾಗಿರುವ ಶರತ್ ಬಳಿ ಮೊಬೈಲ್ ಫೋನ್ ಇದ್ದು, ಸ್ವಿಚ್ ಆಫ್ ಆಗಿದೆ. ಇದರಿಂದ ಪೋಷಕರಲ್ಲಿ ಆತಂಕ ಮನೆ ಮಾಡಿದೆ. ತಮ್ಮ ಮಕ್ಕಳನ್ನು ಹುಡುಕಿಸಿ ಕೊಡುವಂತೆ ದೂರು ನೀಡಿದ್ದು, ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ರೆಡ್ಡಿ- ರಾಮುಲು

## ಒಂದೇ ರಾತ್ರಿಗೆ ಗಂಭೀರ ಹಂತಕ್ಕೆ ಹೋಯ್ತು ಕಲಹ!

**ಬೆಂಗಳೂರು:** ಕುಚಿಕು ಗೆಳೆಯರಾದ ಜನಾರ್ದನ ರೆಡ್ಡಿ, ಬಿ ಶ್ರೀರಾಮುಲು ಮಧ್ಯೆ ಬಂಗಾರು ಹನುಮಂತು ಕಿಡಿ ಹೊತ್ತಿಸಿದ್ದು, ಬಿಜೆಪಿಯಲ್ಲಿ ಮತ್ತೊಂದು ಕಲಹಕ್ಕೆ ವೇದಿಕೆ ಸೃಷ್ಟಿಯಾಗಿದೆ.

ಇಲ್ಲಿಯವರೆಗೆ ವಿಜಯೇಂದ್ರ ವರ್ಸಸ್ ಯತ್ನಾಳ್ ಕಚ್ಚಾಟದ ಮಧ್ಯೆ ರೆಡ್ಡಿ ವರ್ಸಸ್ ರಾಮುಲು ಫೈಟ್ ಆರಂಭವಾಗಿದ್ದು ಹೈಕಮಾಂಡ್‌ಗೆ ಹೊಸ ತಲೆನೋವು ಆರಂಭವಾಗಿದೆ. ಒಂದೇ ರಾತ್ರಿಗೆ ಗಂಭೀರ ಹಂತಕ್ಕೆ ರೆಡ್ಡಿ, ರಾಮುಲು ಕಲಹ ಹೋಗಿದ್ದು ಪಕ್ಷದ ಕೋರ್ ಕಮಿಟಿ ಸಭೆಯಲ್ಲೇ ರೆಬೆಲ್ ರಾಮುಲು ಅಸಮಧಾನ ಸ್ಫೋಟವಾಗಿದೆ.

ಸಂಡೂರು ಉಪಚುನಾವಣೆಯಲ್ಲಿ ನಾನು ಸರಿಯಾಗಿ ಕೆಲಸ ಮಾಡಿದ್ದೇನೆ. ಆದರೆ ಸಂಡೂರು ಸೋಲನ್ನು ನನ್ನ ತಲೆಗೆ ಕಟ್ಟುತ್ತಿದ್ದಾರೆ. ಇಷ್ಟು ವರ್ಷ ಪಕ್ಷಕ್ಕಾಗಿ ದುಡಿದು ತ್ಯಾಗ ಮಾಡಿದ ಹಿರಿಯ ನಾಯಕ ನಾನು. ನನಗೆ ಈಗ ಪಕ್ಷದ ವೇದಿಕೆಯಲ್ಲೇ ಅಪಮಾನ ನಡೆದಿದೆ ಎಂದು ಕೆರಳಿರುವ ಶ್ರೀರಾಮುಲು ರಾಜ್ಯ ಉಸ್ತುವಾರಿ ರಾಧಾ ಮೋಹನ ದಾಸ್, ಜನಾರ್ದನ ರೆಡ್ಡಿ ಹಾಗೂ ವಿಜಯೇಂದ್ರ ವಿರುದ್ಧ ಸಂಘಕ್ಕೆ ಮೌಖಿಕ ದೂರು ನೀಡಿದ್ದಾರೆ.



ಜನಾರ್ದನ ರೆಡ್ಡಿ ತಮ್ಮನ್ನು ರಾಜಕೀಯವಾಗಿ ಮುಗಿಸಲು ತಂತ್ರ ಮಾಡುತ್ತಿದ್ದಾರೆ ಎನ್ನುವುದು ರಾಮುಲು ಆರೋಪ. ಹೈಕಮಾಂಡ್ ಮೆಟ್ಟಿಲೇರಲು ರಾಮುಲು ತಯಾರಿ ನಡೆಸಿದ್ದು ಬಿ.ಎಲ್.ಸಂತೋಷ್ ಅವರಿಗೂ ದೂರು ಕೊಟ್ಟು ಮಧ್ಯಪ್ರವೇಶಕ್ಕೆ ಆಗ್ರಹಿಸಿದ್ದಾರೆ.

ಈ ಮಧ್ಯೆ ಇಂದು ಜನಾರ್ದನ ರೆಡ್ಡಿ ಸುದ್ದಿಗೋಷ್ಠಿ ನಡೆಸಿ ರಾಮುಲು ಮಾಡಿದ ಆರೋಪಗಳಿಗೆ ರೆಡ್ಡಿ ಠಕ್ಕರ್ ನೀಡುವ ಸಾಧ್ಯತೆಯಿದೆ.

# ಕ್ಲೀನ್ ಚಿಟ್

ಕುರಿತು ಕಾನೂನು ತಜ್ಞರ ಸಲಹೆ ಪಡೆಯಲಾಗುವುದು ಎನ್ನಲಾಗಿದೆ.

**ಸೋಮವಾರ ಕೋರ್ಟ್‌ಗೆ ಸಲ್ಲಿಕೆ:** ಮುಡಾ ಹಗರಣದ ತನಿಖಾ ವರದಿಯನ್ನು ಲೋಕಾಯುಕ್ತ ಅಧಿಕಾರಿಗಳು ಸೋಮವಾರ ಕೋರ್ಟ್‌ಗೆ ಸಲ್ಲಿಕೆ ಮಾಡಲಿದ್ದಾರೆ. ಲೋಕಾಯುಕ್ತ ಎಸ್ ಪಿ ಟಿಜೆ ಉದೇಶ್ ನೇತೃತ್ವದಲ್ಲಿ ತನಿಖೆ ನಡೆದು ವರದಿ ಸಿದ್ಧಪಡಿಸಲಾಗಿದೆ.

**ಸಿಎಂ ಪ್ರಭಾವ ಇಲ್ಲದೆ ಸಾಧ್ಯವೇ ಇಲ್ಲ:** ಲೋಕಾಯುಕ್ತ ವರದಿಯಲ್ಲಿ ಸಿಎಂ ಸಿದ್ದರಾಮಯ್ಯಗೆ ಕ್ಲೀನ್ ಚಿಟ್ ನೀಡಲಾಗಿದೆ ಎಂಬ ವರದಿಯ ಬಗ್ಗೆ ಪ್ರತಿಕ್ರಿಯಿಸಿದ ಮುಡಾ ಹಗರಣದ ಪ್ರಮುಖ ದೂರುದಾರ ಸ್ನೇಹಮಯಿ ಕೃಷ್ಣ, ಸಿಎಂ ಪ್ರಭಾವ ಇಲ್ಲದೆ ಅಧಿಕಾರಿಗಳು ಅಕ್ರಮ ಎಸಗಲು ಸಾಧ್ಯವೇ ಇಲ್ಲ ಎಂದಿದ್ದಾರೆ. ಲೋಕಾಯುಕ್ತ ವರದಿಯಲ್ಲಿ ಸಿಎಂ ಹಾಗೂ ಅವರ ಪತ್ನಿಗೆ ಕ್ಲೀನ್ ಚಿಟ್ ನೀಡಿರುವ ಬಗ್ಗೆ ಅಧಿಕೃತ ಮಾಹಿತಿ ನಮಗೆ ಬಂದಿಲ್ಲ. ಆದಾಗ್ಯೂ ಅದು ನಿರೀಕ್ಷಿತ. ಇದರಿಂದ ನನ್ನ ಹೋರಾಟಕ್ಕೆ ಯಾವುದೇ ಅಡ್ಡಿಯಾಗುವುದಿಲ್ಲ. ಸಿಎಂ ಪ್ರಭಾವ ಇಲ್ಲದೆ ಅಧಿಕಾರಿಗಳು ಅಪರಾಧವೆಸಗಲು ಸಾಧ್ಯವೇ ಇಲ್ಲ. ಈ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಭಾವ ಬಳಸಿದ್ದಾರೆ ಎಂದು ಆರೋಪಿಸಿದ್ದಾರೆ.

ಮುಡಾ ಹಗರಣ ಸಂಬಂಧ ಮತ್ತೊಂದೆಡೆ, ಜಾರಿ ನಿರ್ದೇಶನಾಲಯ ತನಿಖೆಯೂ ಪ್ರಗತಿಯಲ್ಲಿದೆ. ಏತನ್ಮಧ್ಯೆ, ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಮನವಿ ಮಾಡಿ ಸಲ್ಲಿಕೆಯಾಗಿರುವ ಅರ್ಜಿಯ ವಿಚಾರಣೆಯೂ ಕರ್ನಾಟಕ ಹೈಕೋರ್ಟ್ ನಲ್ಲಿ ನಡೆಯುತ್ತಿದೆ. ಜನವರಿ 27ರಂದು ಸಿಬಿಐ ತನಿಖೆ ವಿಚಾರವಾಗಿ ಹೈಕೋರ್ಟ್ ತೀರ್ಪು ನೀಡುವ ನಿರೀಕ್ಷೆ ಇದೆ. ಅದಕ್ಕೂ ಮುನ್ನ ಲೋಕಾಯುಕ್ತ ಅಧಿಕಾರಿಗಳು ತನಿಖಾ ವರದಿಯನ್ನು ಕೋರ್ಟ್‌ಗೆ ಸಲ್ಲಿಕೆ ಮಾಡಲಿದ್ದಾರೆ. ಹೀಗಾಗಿ ಪ್ರಕರಣದ ಕುರಿತ ಕುತೂಹಲ ಇದೀಗ ಮತ್ತಷ್ಟು ಹೆಚ್ಚಾಗಿದೆ.

# ಶಾಲೆಗಳ ಸ್ಥಾಪನೆ

ಸಂದರ್ಭದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಈ ಕುರಿತು ಘೋಷಿಸಿದರು.

ಕೇರಳದ ಆಲಪ್ಪುಳದಲ್ಲಿರುವ ವಿದ್ಯಾಧಿರಾಜ ಸೈನಿಕ ಶಾಲೆಯ 47ನೇ ವಾರ್ಷಿಕ ದಿನಾಚರಣೆಯನ್ನು ಉದ್ಘಾಟಿಸಿದ ನಂತರ ಮಾತನಾಡಿದ ರಾಜನಾಥ್ ಸಿಂಗ್, ಕೇಂದ್ರ ಸರ್ಕಾರವು ಸೈನಿಕ ಶಾಲೆಗಳಿಗೆ ಹುಡುಗಿಯರ ಪ್ರವೇಶಕ್ಕೆ ದಾರಿ ಮಾಡಿಕೊಟ್ಟಿದೆ. ದೇಶದ ವೈವಿಧ್ಯಮಯ ಸಾಂಸ್ಕೃತಿಕ ಹಿನ್ನೆಲೆ ಮತ್ತು ದೂರದ ಪ್ರದೇಶಗಳ ಸಿಬ್ಬಂದಿಯನ್ನು ಸೇರಿಸಿಕೊಳ್ಳಲು ಕೇಂದ್ರ ಸರ್ಕಾರ ಭಾರತದ ಪ್ರತಿಯೊಂದು ಪ್ರದೇಶ ಮತ್ತು ಜಿಲ್ಲೆಗೆ ಸೈನಿಕ ಶಾಲೆಗಳ ವ್ಯಾಪ್ತಿಯನ್ನು ವಿಸ್ತರಿಸಲು ನಿರ್ಧರಿಸಿದೆ ಎಂದು ಹೇಳಿದ್ದಾರೆ.

ಸೈನಿಕನನ್ನು ಕೇವಲ ಯುದ್ಧದ ದೃಷ್ಟಿಕೋನದಿಂದ ಮಾತ್ರ ನೋಡಬಾರದು. ಏಕೆಂದರೆ ಪ್ರತಿಯೊಬ್ಬ ಸೈನಿಕನು ಇತರ ಹಲವು ಗುಣಗಳನ್ನು ಹೊಂದಿರುತ್ತಾನೆ. ಸೈನಿಕನು ಶಿಸ್ತುಬದ್ಧನಾಗಿರುತ್ತಾನೆ,

## ಮೊದಲನೇ ಪುಟದಿಂದ...

ತನ್ನ ಗುರಿಗಳ ಮೇಲೆ ಕೇಂದ್ರೀಕರಿಸುತ್ತಾನೆ, ನಿಸ್ವಾರ್ಥವಾಗಿ ಸೇವೆ ಸಲ್ಲಿಸುತ್ತಾನೆ, ಸ್ವಯಂ ನಿಯಂತ್ರಣವನ್ನು ಹೊಂದಿರುತ್ತಾನೆ ಮತ್ತು ದೇಶಕ್ಕೆ ಸಮರ್ಪಿತನಾಗಿರುತ್ತಾನೆ ಎಂದು ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ.

ಸೈನಿಕನ ಈ ಗುಣಗಳು ಸ್ವಾಮಿ ವಿವೇಕಾನಂದ, ಆದಿ ಶಂಕರಾಚಾರ್ಯ ಮತ್ತು ರಾಜಾ ರವಿವರ್ಮರಂತಹ ಅನೇಕ ಮಹಾನ್ ನಾಯಕರಲ್ಲಿಯೂ ಕಂಡುಬರುತ್ತವೆ ಎಂದು ಕೇಂದ್ರ ಸಚಿವ ರಾಜನಾಥ್ ಸಿಂಗ್ ಅಭಿಪ್ರಾಯಪಟ್ಟಿದ್ದಾರೆ.

# ಪ್ರಾದೇಶಿಕ ಪಕ್ಷದ ಮಾನ್ಯತೆ

ಈ ಮಾನ್ಯತೆಯ ಬಗ್ಗೆ ಮಂಗಳವಾರ ಪತ್ರದ ಮೂಲಕ ಸಂವಹನ ನಡೆಸಲಾಗಿದೆ ಎಂದು ಜನಸೇನಾ ಪಕ್ಷ ಬಹಿರಂಗಪಡಿಸಿದೆ. ಜನಸೇನಾ ಮಾನ್ಯತೆ ಪಡೆದ ಪ್ರಾದೇಶಿಕ ರಾಜಕೀಯ ಪಕ್ಷವಾಗಿ ಹೊರಹೊಮ್ಮಿದೆ. ಕಳೆದ ಚುನಾವಣೆಯಲ್ಲಿ ಸಾಧಿಸಿದ ಐತಿಹಾಸಿಕ ವಿಜಯದೊಂದಿಗೆ ಇತಿಹಾಸ ಸೃಷ್ಟಿಸಿದ ಜನಸೇನಾ ಪಕ್ಷದ ಶಾಶ್ವತ ಚಿಹ್ನೆಯಾಗಿ ಗಾಜಿನ ಚಿಹ್ನೆಯನ್ನು ಗುರುತಿಸಿ ಚುನಾವಣಾ ಆಯೋಗ ಆದೇಶ ಹೊರಡಿಸಿದೆ.

ಒಂದು ದಶಕಕ್ಕೂ ಹೆಚ್ಚು ಕಾಲ ಪವನ್ ಕಲ್ಯಾಣ್ ಅವರ ಹೋರಾಟವು ಜನಸೇನಾ ಪಕ್ಷವನ್ನು ಮಾನ್ಯತೆ ಪಡೆದ ರಾಜಕೀಯ ಪಕ್ಷವೆಂದು ಅಂಗೀಕರಿಸುವಲ್ಲಿ ಕೊನೆಗೊಂಡಿತು'' ಎಂದು ಅದು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ ಹೇಳಿಕೆಯಲ್ಲಿ ತಿಳಿಸಿದೆ. ದ್ಯ ಪವನ್ ಕಲ್ಯಾಣ್ ಆಂಧ್ರಪ್ರದೇಶದ ಉಪಮುಖ್ಯಮಂತ್ರಿಯೂ ಆಗಿದ್ದಾರೆ.

ಕಳೆದ ಸಾರ್ವತ್ರಿಕ ಚುನಾವಣೆಯಲ್ಲಿ ಜನಸೇನಾ ಪಕ್ಷವು ಎರಡು ಲೋಕಸಭೆ ಮತ್ತು 21 ವಿಧಾನಸಭಾ ಸ್ಥಾನಗಳನ್ನು ಗೆದ್ದಿತ್ತು. ರಾಜ್ಯದಲ್ಲಿ ತನ್ನ ಬೆಳೆಯುತ್ತಿರುವ ಪ್ರಭಾವವನ್ನು ತೋರಿಸುತ್ತದೆ. ಈ ಯಶಸ್ಸು ಪಕ್ಷಕ್ಕೆ ರಾಜ್ಯ ಮಟ್ಟದ ಪಕ್ಷವಾಗಿ ಮನ್ನಣೆ ನೀಡಿತು.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡುವ ಮೂಲಕ ಪಕ್ಷವು ಈ ಮಾಹಿತಿಯನ್ನು ನೀಡಿದೆ. ಈ ಸಂದರ್ಭದಲ್ಲಿ ಅವರು ರಾಜ್ಯದ ಜನತೆಗೆ ಕೃತಜ್ಞತೆ ಸಲ್ಲಿಸಿದರು. ಪ್ರಸ್ತುತ ತಮಿಳುನಾಡಿನಲ್ಲಿ ಡಿಎಂಕೆ, ಆಂಧ್ರಪ್ರದೇಶದಲ್ಲಿ ವೈಎಸ್‌ಆರ್‌ಸಿಪಿ, ಬಿಹಾರದಲ್ಲಿ ಜೆಡಿಯು ಮತ್ತು ತೆಲಂಗಾಣದಲ್ಲಿ ಟಿಆರ್‌ಎಸ್ ರಾಜ್ಯಮಟ್ಟದ ರಾಜಕೀಯ ಪಕ್ಷಗಳಾಗಿವೆ.

1968 ರಲ್ಲಿ ನಿಗದಿಪಡಿಸಿದ ಮಾನದಂಡಗಳ ಆಧಾರದ ಮೇಲೆ ಇಅಖ ಪಕ್ಷವನ್ನು ರಾಷ್ಟ್ರೀಯ/ರಾಜ್ಯ ಪಕ್ಷವೆಂದು ಗುರುತಿಸುತ್ತದೆ., ರಾಜ್ಯ ಪಕ್ಷವಾಗಿ ಗುರುತಿಸಿಕೊಳ್ಳಲು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವೊಂದಕ್ಕೆ ಕನಿಷ್ಠ ಶೇ.6ರಷ್ಟು ಮತಗಳಿಕೆ ಹಾಗೂ ಕನಿಷ್ಠ ಇಬ್ಬರು ಶಾಸಕರ ಬೇಕು.

ಅಥವಾ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಒಟ್ಟು ಸೀಟುಗಳ ಕನಿಷ್ಠ ಶೇಕಡಾ ಮೂರು ಅಥವಾ ಮೂರು ಸ್ಥಾನಗಳು, ಯಾವುದು ಹೆಚ್ಚು, ಅಥವಾ, ಅದು ಪ್ರತಿ 25 ಸದಸ್ಯರಿಗೆ ಕನಿಷ್ಠ ಒಬ್ಬ ಸಂಸದರನ್ನು ಹೊಂದಿರಬೇಕು ಅಥವಾ ಲೋಕಸಭೆಯಲ್ಲಿ ರಾಜ್ಯಕ್ಕೆ ನಿಗದಿಪಡಿಸಿದ ಯಾವುದೇ ಭಾಗ ಅಥವಾ ಆ ರಾಜ್ಯದಿಂದ ಇತ್ತೀಚಿನ ಅಸೆಂಬ್ಲಿ ಅಥವಾ ಸಾರ್ವತ್ರಿಕ ಚುನಾವಣೆಗಳಲ್ಲಿ ಚಲಾವಣೆಯಾದ ಒಟ್ಟು ಮಾನ್ಯ ಮತಗಳಲ್ಲಿ ಕನಿಷ್ಠ 8 ಪ್ರತಿಶತವನ್ನು ಹೊಂದಿರಬೇಕು.

# ಬಿಬಿಎಂಪಿ

ಬೆಂಗಳೂರಿನ ಬಹುತೇಕ ಕಡೆಗಳಲ್ಲಿ ಪರಿತ್ಯಕ್ತ ಸಾಕು ಪ್ರಾಣಿಗಳಿಗೆ ಹಾಗೂ ಬೀದಿನಾಯಿಗಳಿಗೆ ಆಗುತ್ತಿರುವ ಸಮಸ್ಯೆಗಳನ್ನು ಅರಿತ ಪಾಲಿಕೆಯ ಪಶುಪಾಲನಾ ವಿಭಾಗ, ಮೂರು ವಲಯಗಳಲ್ಲಿ ಪ್ರಾಣಿಗಳ ಆರೈಕೆಗೆ ಕೇಂದ್ರಗಳನ್ನು ತೆರೆಯಲು ಮುಂದಾಗಿದೆ.

**500ಕ್ಕೂ ಹೆಚ್ಚು ಪ್ರಾಣಿಗಳಿಗೆ ಆಶ್ರಯದ ಗುರಿ:** ಬಿಬಿಎಂಪಿ ಪ್ರತಿ ಕೇಂದ್ರದಲ್ಲಿ 200 ಪ್ರಾಣಿಗಳನ್ನು ನಿರ್ವಹಿಸುವ ಗುರಿ ಹೊಂದಿದ್ದು, ಒಟ್ಟಾರೆ, ಈ ಮೂರು ಕೇಂದ್ರಗಳಲ್ಲಿ ಪ್ರತಿ ತಿಂಗಳು 500 ಕ್ಕೂ ಹೆಚ್ಚು ಪ್ರಾಣಿಗಳಿಗೆ ಆಶ್ರಯ ನೀಡಲು ಚಿಂತನೆ ನಡೆಸಿದೆ.

ಇದುವರೆಗೂ ಬಿಬಿಎಂಪಿ ತನ್ನದೇ ಆದ ಪ್ರಾಣಿ ರಕ್ಷಣಾ ಕೇಂದ್ರವನ್ನು ಹೊಂದಿರಲಿಲ್ಲ. ಪಶುಸಂಗೋಪನಾ ಇಲಾಖೆಗೆ ಪ್ರಾಣಿಗಳ ರಕ್ಷಣೆಗಾಗಿ ಕರೆ ಬಂದಾಗ ಅಥವಾ ಕೈಬಿಟ್ಟ ಮತ್ತು ಗಾಯಗೊಂಡ ಸಾಕುಪ್ರಾಣಿಗಳನ್ನ ನೋಡಿಕೊಳ್ಳಲು ಮನವಿ ಬಂದಾಗಲೆಲ್ಲ ಖಾಸಗಿ ಕೇಂದ್ರದ ಮೊರೆಹೋಗುತ್ತಿತ್ತು.

**ಯಾವೆಲ್ಲ ಪ್ರಾಣಿಗಳಿಗೆ ಸಿಗಲಿದೆ ಆರೈಕೆ?:** ಗಾಯಗೊಂಡ ಬೆಕ್ಕುಗಳು, ಬೀದಿನಾಯಿಗಳಿಗೆ ಪಾಲಿಕೆಯ ಈ ರಕ್ಷಣಾ ಕೇಂದ್ರಗಳಲ್ಲಿ ಚಿಕಿತ್ಸೆ ನೀಡಲು ಉದ್ದೇಶಿಸಲಾಗಿದ್ದು, ಅವುಗಳು ಚೇತರಿಸಿಕೊಂಡ ಬಳಿಕ ಮೊದಲು ಎಲ್ಲಿದ್ದವೋ ಅದೇ ಜಾಗಕ್ಕೆ ಮರಳಿ ಬಿಡಲು ಚಿಂತನೆ ನಡೆಸಲಾಗಿದೆ. ಸದ್ಯ ಈಗಾಗಲೇ ಎರಡು ವಲಯಗಳಲ್ಲಿ ಕೇಂದ್ರ ತೆರೆಯಲು ಗ್ರೀನ್ ಸಿಗ್ನಲ್ ಸಿಕ್ಕಿದ್ದು, ಪಾಲಿಕೆ ಕೂಡ ಸಾಧ್ಯಾಸಾಧ್ಯತೆ ಬಗ್ಗೆ ಪರಿಶೀಲನೆ ನಡೆಸುತ್ತಿದೆ ಎಂದು ವಿಶೇಷ ಆಯುಕ್ತ ಸೂರಲ್ಕರ್ ವಿಕಾಸ್ ಕಿಶೋರ್ ತಿಳಿಸಿದ್ದಾರೆ.

ಇತ್ತೀಚೆಗಷ್ಟೇ ಸಮುದಾಯ ಪ್ರಾಣಿಗಳ ಸಂರಕ್ಷಣೆ ಹೆಸರಲ್ಲಿ ಬೀದಿನಾಯಿಗಳಿಗೆ ಆಹಾರ ನೀಡುವುದರ ಜೊತೆಗೆ ಜನರಿಗೆ ಅರಿವು ಮೂಡಿಸುವ ಕೆಲಸವನ್ನು ಪಾಲಿಕೆ ಮಾಡಿತ್ತು.

# ಸಿಹಿ ಸುದ್ದಿ

ಪಂಪ್ ಸೆಟ್‌ಗಳು ಇನ್ನೊಂದು ವರ್ಷದಲ್ಲಿ ಸಕ್ರಮಗೊಳ್ಳಲಿದೆ.

ಅಕ್ರಮ ಪಂಪ್ ಸೆಟ್‌ಗಳ ಸಕ್ರಮ ಯೋಜನೆ 2004ರಿಂದಲೇ ಜಾರಿಯಲ್ಲಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಈ ಯೋಜನೆಯಡಿ 4.5 ಲಕ್ಷ ಅರ್ಜಿ ಬಾಕಿ ಇದ್ದವು. ಪ್ರಸ್ತುತ 2.5 ಲಕ್ಷ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ.

ಬಾಕಿ ಉಳಿದ ಅರ್ಜಿಗಳನ್ನು ಇತ್ಯರ್ಥಗೊಳಿಸಿದ ಬಳಿಕ ಹೊಸದಾಗಿ ಬಂದ ಅರ್ಜಿಗಳ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಜಾರ್ಜ್ ತಿಳಿಸಿದರು.

# ವಿವಾದಕ್ಕೀಡಾದ ಧಾರವಾಡ ವಿವಿ ಕನ್ನಡ ಪಠ್ಯ ಪುಸ್ತಕ

**ಧಾರವಾಡ:** ಧಾರವಾಡದ ಕರ್ನಾಟಕ ವಿವಿ ಪಠ್ಯ ಈಗ ವಿವಾದಕ್ಕೆ ಗುರಿಯಾಗಿದೆ. ವಿವಿಯ ಪ್ರಸಾರಂಗಾದಿಂದ ಮುದಿತ್ರವಾಗಿರುವ ವಿವಿಯ ಪದವಿ ಪುಸ್ತಕ ''ಬೆಳಗು -1''ರಲ್ಲಿ ಎಡವಟ್ಟಾಗಿದೆ ಎಂಬ ಆರೋಪ ಕೇಳಿಬಂದಿದೆ. ಬಿಎ, ಬಿ ಮ್ಯೂಸಿಕ್, ಬಿಎಫ್‌ಎ, ಬಿಎಸ್ ಡಬ್ಲ್ಯೂ, ಬಿವಿಎ ಪದವಿಗಳ ಪ್ರಥಮ ಸೆಮಿಸ್ಟರ್ ಕನ್ನಡ ಪಠ್ಯ ಪುಸ್ತಕದಲ್ಲಿ ಬಲಪಂಥೀಯ ಚಿಂತನೆ ಹೇರಲಾಗಿದೆ ಎಂದು ಧಾರವಾಡದ ಹಿರಿಯ ನ್ಯಾಯವಾದಿ ಅರುಣ ಜೋಶಿ ಆರೋಪಿಸಿದ್ದಾರೆ.



ರಾಷ್ಟ್ರ ಚಿಂತನೆಯ ಮಹತ್ವ ಹೇಳುವ ಎನ್‌ಇಪಿ ಪದ್ಧತಿ ಅನ್ವಯ ಮುದ್ರಣಗೊಂಡಿರುವ, ಅನೇಕ ವಿಷಯ ತಜ್ಞರು ಪರಿಷ್ಕರಿಸಿರುವ ಮಹತ್ವದ ಪಠ್ಯ ಪುಸ್ತಕವೇ ಈಗ ವಿವಾದಕ್ಕೆ ಗುರಿಯಾಗಿದೆ.

**ವಿವಾದವೇನು?:** ಪುಸ್ತಕದಲ್ಲಿ ರಾಷ್ಟ್ರೀಯ ಐಕ್ಯತೆಗೆ ಧಕ್ಕೆ ತರುವುದರ ಜತೆಗೆ ಕೋಮು ದ್ವೇಷ ಹುಟ್ಟಿಸುವ ರೀತಿಯಲ್ಲಿ ಪಠ್ಯ ಅಳವಡಿಸಲಾಗಿದೆ ಎಂದು ನ್ಯಾಯವಾದಿ ಅರುಣ ಜೋಶಿ ಆರೋಪಿಸಿದ್ದಾರೆ. ಈ ಸಂಬಂಧ ವಿವಿ ಕುಲಪತಿಗೆ ಎಚ್ಚರಿಕೆಯ ಪತ್ರವನ್ನೂ ರವಾನಿಸಿದ್ದು, ಪಠ್ಯ ವಾಪಸ್ ಪಡೆಯಲು ಆಗ್ರಹಿಸಿದ್ದಾರೆ. ಇಲ್ಲದೇ ಹೋದಲ್ಲಿ ಕೋರ್ಟ್‌ನಲ್ಲಿ ದಾವೆ ಹೂಡುವ ಎಚ್ಚರಿಕೆಯನ್ನೂ ನೀಡಿದ್ದಾರೆ.

**ಪಠ್ಯ ಪುಸ್ತಕ ವಿವಾದಕ್ಕೆ ಕಾರಣವೇನು?:** ಪುಸ್ತಕದ 4ನೇ ಅಧ್ಯಾಯದಲ್ಲಿ 'ರಾಷ್ಟ್ರೀಯತೆಯ ಆಚರಣೆಯ ಸುತ್ತ' ಎಂಬ ಲೇಖನವಿದ್ದು, ಇದರ ಬಗ್ಗೆಯೇ ಅರುಣ ಜೋಶಿ ಆಕ್ಷೇಪ ವ್ಯಕ್ತಪಡಿಸಿರುವುದು. 'ಭಾರತಾಂಬೆಯ ಕಲ್ಪನೆ' ಎಂಬ ಉಪ ಅಧ್ಯಾಯಯದಲ್ಲಿ 'ಭಾರತ ಮಾತೆಯ ಚಿತ್ರವು ಹಿಂದೂ ಮಾತೆಯ ಚಿತ್ರವಾಗಿದೆ. ಇದು ಒಂದು ವರ್ಗ ಸಮುದಾಯದ ಕಲ್ಪನೆ ಆಗಿದೆ' ಎಂದು ಉಲ್ಲೇಖಿಸಲಾಗಿದ್ದು, ಇದನ್ನು ಇತರರು ಒಪ್ಪುವಂತೆ ಒತ್ತಾಯಿಸಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಪ್ರತಿ ಸಭೆ, ಸಮಾರಂಭಗಳಲ್ಲಿ ಭಾರತ್ ಮಾತಾ ಕೀ ಜೈ ಎಂದು ಕೂಗಿದಾಗ ಉಳಿದವರೂ ಜೈ ಎನ್ನುತ್ತಾರೆ. ಈ ಜೈ ಎನ್ನುವ ಕಲ್ಪನೆ ಇನ್ನೊಬ್ಬರ ಸೋಲನ್ನು ನೆನಪಿಸುತ್ತದೆ ಎಂದು ಬರೆಯಲಾಗಿದೆ. ಅಲ್ಲದೇ 'ಭುವನೇಶ್ವರಿ ಕೂಡ ಕೋಮುವಾದಿ ಮಾತೆ ಎನ್ನಲಾಗಿದೆ'. ಮುಸ್ಲಿಮರಿಗೆ ಮೆಕ್ಕಾ ಇರುವಂತೆ ಹಿಂದೂಗಳಿಗೂ ಒಂದು ಪವಿತ್ರ ಕ್ಷೇತ್ರ ಆಯೋಧ್ಯಾ ಇರಲಿ ಎಂದು ಕೆಲ ಪರಿವಾರದವರು ಒತ್ತಾಯಿಸುತ್ತಾ ಬಂದಿದ್ದಾರೆ ಎಂದು ಮುದ್ರಿತವಾಗಿದೆ ಎಂಬುದಾಗಿ ಅರುಣ ಜೋಶಿ ಆರೋಪಿಸಿದ್ದಾರೆ.

ಇದರೊಂದಿಗೆ ಅಲ್ಲಲ್ಲಿ 'ಪರಿವಾರ' ಮತ್ತು 'ಸಂಘ ಪರಿವಾರ' ಎಂಬ ಶಬ್ದಗಳ ಬಳಕೆ ಮಾಡಲಾಗಿದೆ. ಆ ಮೂಲಕ ಪರೋಕ್ಷವಾಗಿ ಆರ್‌ಎಸ್‌ಎಸ್ ಅನ್ನು ಪಠ್ಯದಲ್ಲಿ ಎಳೆದು ತರಲಾಗಿದೆ ಎಂದು ಅವರು ಆರೋಪಿಸಿದ್ದಾರೆ. ಈ ಬಗ್ಗೆ ಕೋರ್ಟ್ ಮೊರೆ ಹೋಗಲು ಕೂಡ ಅರುಣ್ ಜೋಶಿ ನಿರ್ಧರಿಸಿದ್ದಾರೆ.

## ಸಂಜೆ ಟಿಪ್ಸ್

## ಡಿಆರ್‌ಎಚ್‌ಪಿ ಸಲ್ಲಿಕೆ ಮಾಡಿದ ವಿನಿರ್ ಇಂಜಿನಿಯರಿಂಗ್

ವ್ಯಾಪಕ ಶ್ರೇಣಿಯ ಕೈಗಾರಿಕಾ ಉತ್ಪನ್ನಗಳು ಮತ್ತು ಅಪ್ಲಿಕೇಶನ್ ಗಳಿಗೆ ವಿಶೇಷವಾದ, ಸಂಕೀರ್ಣವಾದ ಮತ್ತು ಭಾರೀ, ಪ್ರಿಸಿಷನ್ ಫೋರ್ಜ್ ಡ್ ಉತ್ಪನ್ನಗಳು ಮತ್ತು ಯಂತ್ರೋಪಕರಣಗಳ ಘಟಕಗಳ ತಯಾರಿಕೆಯಲ್ಲಿ ತೊಡಗಿರುವ ಇಂಟಿಗ್ರೇಟೆಡ್ ಎಂಜಿನಿಯರಿಂಗ್ ಉತ್ಪನ್ನಗಳ ಕಂಪನಿ ಆಗಿರುವ ವಿನಿರ್ ಇಂಜಿನಿಯರಿಂಗ್ ಲಿಮಿಟೆಡ್ ಸಂಸ್ಥೆಯು ಐಪಿಓ ಉದ್ದೇಶದಿಂದ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಅನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಆಂಡ್ ಎಕ್ಸ್ ಚೇಂಜ್ ಬೋರ್ಡ್ ಆಫ್ ಇಂಡಿಯಾ ದಲ್ಲಿ ಸಲ್ಲಿಕೆ ಮಾಡಿದೆ. ಐಪಿಓ ಪ್ರತಿ 2 ಮುಖಬೆಲೆಯ 53,300,000 ಈಕ್ವಿಟಿ ಷೇರುಗಳ ಮಾರಾಟದ ಪ್ರಸ್ತಾಪವನ್ನು ಒಳಗೊಂಡಿದೆ. ಮಾರಾಟದ ಕೊಡುಗೆಯು ನಿತೇಶ್ ಗುಪ್ತಾ ಅವರ ತಲಾ 2 ಮುಖಬೆಲೆಯ 53,300,000 ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ. ವಿನಿರ್ ಇಂಜಿನಿಯರಿಂಗ್ ಲಿಮಿಟೆಡ್ ಎಂಬುದು ಇಂಟಿಗ್ರೇಟೆಡ್ ಇಂಜಿನಿಯರಿಂಗ್ ಉತ್ಪನ್ನಗಳನ್ನು ತಯಾರಿಸುವ ಕಂಪನಿಯಾಗಿದ್ದು, ವಿದ್ಯುತ್, ರಕ್ಷಣೆ, ಏರೋಸ್ಪೇಸ್, ರೈಲ್ವೇಗಳು, ಪವರ್ ಟರ್ಬೈನ್ ಗಳು, ಹೈಡ್ರಾಲಿಕ್ ಗಳು, ಅರ್ಥ್ ಮೂವಿಂಗ್, ಉನ್ನತ ಮಟ್ಟದ ಎಂಜಿನಿಯರಿಂಗ್ ವಿಭಾಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಬಳಕೆಯಾಗುವ ವ್ಯಾಪಕ ಶ್ರೇಣಿಯ ಕೈಗಾರಿಕೆಗಳು ಮತ್ತು ಅಪ್ಲಿಕೇಶನ್ ಗಳಲ್ಲಿ ಬಳಕೆಯಾಗುವ ವಿಶೇಷವಾದ, ಸಂಕೀರ್ಣವಾದ ಮತ್ತು ಭಾರೀ, ಪ್ರಿಸಿಷನ್ ಫೋರ್ಜ್ ಡ್ ಮತ್ತು ಯಂತ್ರದ ಘಟಕಗಳ ತಯಾರಿಕೆಯಲ್ಲಿ ತೊಡಗಿದೆ. ಶಸ್ತ್ರಸಜ್ಜಿತ ವಾಹನಗಳು, ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳು, ಯುದ್ಧ ಉಪಕರಣಗಳು, ಮಿಲಿಟರಿ ಯಂತ್ರಾಂಶ, ಅಪ್ ಸ್ಟ್ರೀಮ್ ಮತ್ತು ಡೌನ್ ಸ್ಟ್ರೀಮ್ ತೈಲ ಮತ್ತು ಅನಿಲ ವ್ಯವಸ್ಥೆಗಳು, ಕ್ರಯೋಜೆನಿಕ್ಸ್ ವ್ಯವಸ್ಥೆಗಳು, ವಿಮಾನ ಪ್ರೊಪಲ್ಷನ್ ಸಿಸ್ಟಮ್ ಗಳು, ಪವರ್ ಟರ್ಬೈನ್ ಗಳು, ಗ್ಯಾಸ್ ಟರ್ಬೈನ್ ಗಳು, ರೈಲ್ವೇ ಲೋಕೋಮೋಟಿವ್ ಆಂಡ್ ಬ್ರೇಕಿಂಗ್ ಸಿಸ್ಟಮ್ ಗಳು, ಪರಮಾಣು ಶಕ್ತಿ ಮೂಲಸೌಕರ್ಯ ಉಪಕರಣಗಳು, ಹೆವಿ ಡ್ಯೂಟಿ ಉತ್ಖನನ ಯಂತ್ರಗಳು, ಬಾಹ್ಯಾಕಾಶ ಚೌಕಟ್ಟುಗಳು, ಹೈಡ್ರಾಲಿಕ್ ಘಟಕಗಳು, ವಿಂಡ್ ಟರ್ಬೈನ್ ಜನರೇಟರ್ ಗಳು ಮತ್ತು ಹೈ ಪ್ರೆಷರ್ ಬಾಯ್ಲರ್ ಗಳು ಇತ್ಯಾದಿಗಳಂತಹ ವಿವಿಧ ವ್ಯವಸ್ಥೆಗಳು ಮತ್ತು ಅಪ್ಲಿಕೇಶನ್ ಗಳಲ್ಲಿ ಈ ಘಟಕಗಳು ಬಹಳ ಪ್ರಮುಖ ಪಾತ್ರವಹಿಸುತ್ತವೆ. ಕಂಪನಿಯು ಮಿಶ್ರಲೋಹದ ಉಕ್ಕು, ಟೈಟಾನಿಯಂ, ಹ್ಯಾಸ್ಟೆಲ್ಲೋಯ್, ಕಾರ್ಬನ್ ಸ್ಟೀಲ್, ಸ್ಟೇನ್ ಲೆಸ್ ಸ್ಟೀಲ್, ಡ್ಯುಪ್ಲೆಕ್ಸ್ ಸ್ಟೀಲ್, ಸ್ಪೆಷಲ್ ಸ್ಟೀಲ್, ಇನ್ ಕೊನೆಲ್, ಮೊನೆಲ್ ಮತ್ತು ಅಲ್ಯೂಮಿನಿಯಂ ಸೇರಿ ವ್ಯಾಪಕ ಶ್ರೇಣಿಯ ಲೋಹಗಳನ್ನು ಬಳಸಿಕೊಂಡು ಸಿದ್ಧಗೊಳಿಸುವ ಮಹತ್ವದ ಮತ್ತು ಭಾರೀ ಪ್ರಿಸಿಷನ್ ಫೋರ್ಜ್ ಡ್ ಮತ್ತು ಯಂತ್ರೋಪಕರಣ ಘಟಕಗಳನ್ನು ಉತ್ಪಾದಿಸುವಲ್ಲಿ ಕಂಪನಿಯು ಪರಿಣತಿ ಹೊಂದಿದೆ. ಈ ಪ್ರಕ್ರಿಯೆಗಳು ಮತ್ತು ಪ್ರಿಸಿಷನ್ ಮೆಶಿನಿಂಗ್ ಪ್ರಕ್ರಿಯೆಗಳನ್ನು ಬಳಸಿಕೊಂಡು 20 ಕಿಲೋಗ್ರಾಂಗಳಿಂದ ಹಿಡಿದು 6,000 ಕಿಲೋಗ್ರಾಂಗಳಷ್ಟು ತೂಕದ ಘಟಕಗಳನ್ನು ತಯಾರಿಸುವ ಸಾಮರ್ಥ್ಯವನ್ನು ಕಂಪನಿಯು ಹೊಂದಿದೆ.

## ದಾವಣಗೆರೆ ಬೆಣ್ಣೆ ದೋಸೆ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

1.ಅಕ್ಕಿ 4 ಕಪ್ (ನೀರಿನಲ್ಲಿ5 ಗಂಟೆ ನೆನೆ ಹಾಕಬೇಕು) 2. ಉದ್ದಿನ ಬೇಳೆ 1 ಕಪ್ 3. ಕಡಲೆ ಪುರಿ 1/2 ಕಪ್ 4. ಮೆಂತೆ 1 ಚಮಚ 5. ಸಕ್ಕರೆ 1 ಚಮಚ 6. ಉಪ್ಪು ರುಚಿಗೆ ತಕ್ಕಷ್ಟು 7. ಒಂದು ಚಿಟಿಕೆ ಅಡುಗೆ ಸೋಡಾ ಮಸಾಲ: ಬೇಯಿಸಿದ ಮತ್ತು ಕಿವುಚಿದ ಆಲೂಗೆಡ್ಡೆ 2 ಈರುಳ್ಳಿ 1, ತುಪ್ಪದಲ್ಲಿ ಕರಿದಿದ್ದು ಉಪ್ಪು ರುಚಿಗೆ ತಕ್ಕಷ್ಟು ಚಟ್ನಿ : ಚಟ್ನಿ : ಟೊಮೆಟೊ ತೊಕ್ಕು ಮಾಡಿಟ್ಟರೆ ತಿಂಗಳವರೆಗೆ ಇಟ್ಟು ಬಳಸಬಹುದು:ಇದೊಂದು ಇದ್ದರೆ ಸಾಕು ಸಾರು ಕೂಡ ಬೇಕಾಗಿಲ್ಲ ತೆಂಗಿನ ತುರಿ 1 ಕಪ್ 4 ಹಸಿ ಮೆಣಸು 1 ಚಮಚ ಸಕ್ಕರೆ ಶುಂಠಿ, ಚಿಕ್ಕ ತುಂಡು ಕೊತ್ತಂಬರಿ ಸೊಪ್ಪು ಹುರಿಗಡಲೆ 3 ಚಮಚ ಚಿಟಿಕೆ ಇಂಗು ಎಣ್ಣೆ ಒಂದು ಚಮಚ 1/2 ಚಮಚ ಸಾಸಿವೆ ಉಪ್ಪು ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ನಾಳೆ ಬೆಳಗ್ಗೆ ದೋಸೆ ಮಾಡಬೇಕೆಂದು ಇದ್ದರೆ ರಾತ್ರಿಯೆ ದೋಸೆಯ ಸಾಮಾಗ್ರಿಗಳನ್ನ ಮಿಕ್ಸಿಯಲ್ಲಿ ಹಾಕಿ ಚೆನ್ನಾಗಿ ಅರೆದು ಇಡಬೇಕು. ಬೆಳಿಗ್ಗೆ ತವೆಗೆ ಬೆಣ್ಣೆ ಸವರಿ ತೆಳ್ಳಗೆ ದೋಸೆ ಹಿಟ್ಟನ್ನು ಹುಯ್ಯಬೇಕು, ಅದು ಗರಿಯಾಗುವಾಗ ಅದರ ಎರಡು ಬದಿಗೆ ಬೆಣ್ಣೆ ಹಾಕಿ ಒಮ್ಮೆ ಎರಡೂ ಕಡೆ ಮಗುಚಿ ಹಾಕಿದರೆ ದೋಸೆ ರೆಡಿ.

ಮಸಾಲೆಯ ಸಾಮಾಗ್ರಿಗಳನ್ನು ಮಿಶ್ರ ಮಾಡಿದರೆ ಬಾಜಿ ರೆಡಿ.

ಚಟ್ನಿ ಸಾಮಾಗ್ರಿಗಳನ್ನು ಮಿಕ್ಸಿಯಲ್ಲಿ ಹಾಕಿ ಅರೆಯಬೇಕು, ನಂತರ ಒಂದು ಬಾಣಲೆಯಲ್ಲಿ ಸ್ವಲ್ಪ ಎಣ್ಣೆ ಹಾಕಿ ಅದಕ್ಕೆ ಸಾಸಿವೆ ಹಾಕಿ ಈ ಚಟ್ನಿಯನ್ನು ಅದರಲ್ಲಿ ಹಾಕಿ ಸ್ವಲ್ಪ ನೀರು ಹಾಕಿ ಕುದಿಸಬೇಕು, ಚಟ್ನಿ ರೆಡಿ

## ಶ್ವಾಸಕೋಶ ಸಮಸ್ಯೆ

### ಹೆಲ್ತ್ ಟಿಪ್ಸ್



ಶ್ವಾಸಕೋಶ, ನಿಶ್ಯಕ್ತಿ, ಎದೆನೋವು, ಕೆಮ್ಮು, ಉಬ್ಬಸ ಇತ್ಯಾದಿ ಸಮಸ್ಯೆಗಳು ಬರುವುದು. ಸಾಮಾನ್ಯ ಶೀತ, ಅಸ್ತಮಾ, ನ್ಯುಮೋನಿಯಾ ಮತ್ತು ಬ್ರಾಂಕಟಿಸ್ ಮಳೆಗಾಲದಲ್ಲಿ ಅತಿಯಾಗಿ ಕಾಡಬಹುದು. ಹೀಗಾಗಿ ಶ್ವಾಸಕೋಶದ ಸಮಸ್ಯೆಯ ಬಗ್ಗೆ ಎಚ್ಚರಿಕೆ ವಹಿಸಬೇಕು. ಮಳೆಗಾಲದಲ್ಲಿ ಶ್ವಾಸಕೋಶವನ್ನು ರಕ್ಷಣೆ ಮಾಡುವ ಕೆಲವು ವಿಧಾನಗಳ ಬಗ್ಗೆ ತಿಳಿಯಿರಿ.

ಮಳೆಗಾಲದಲ್ಲಿ ದೇಹವನ್ನು ಹೈಡ್ರೇಟ್ ಆಗಿಡಲು ಹೆಚ್ಚಿನ ಪ್ರಮಾಣದಲ್ಲಿ ನೀರು ಕುಡಿಯಬೇಕು. ದೇಹವನ್ನು ಹೈಡ್ರೇಟ್ ಆಗಿಡಲು ಒಂದರಿಂದ ಎರಡು ಲೀಟರ್ ನಷ್ಟು ನೀರು ಕುಡಿಯಬೇಕು. ಇದರಿಂದ ಶ್ವಾಸಕೋಶದಲ್ಲಿ ಕಫದ ತೆಳು ಪದರವು ನಿರ್ಮಾಣವಾಗಿ ಕಲ್ಮಷ ಹಾಗೂ ಕೀಟಾಣುಗಳಿಂದ ರಕ್ಷಣೆ ನೀಡುವುದು.

ಬಿಸಿ ನೀರು ಅಥವಾ ಗ್ರೀನ್ ಟೀ, ಸೂಪ್ ಇತ್ಯಾದಿಗಳನ್ನು ಸೇವನೆ ಮಾಡಿದರೆ ಆಗ ದೇಹವನ್ನು ಬಿಸಿಯಾಗಿಟ್ಟುಕೊಳ್ಳಬಹುದು. ಇದು ಕೆಮ್ಮು ಮತ್ತು ಗಂಟಲು ನೋವಿನಿಂದ ಪರಿಹಾರ ನೀಡುವುದು.

ಯಾವುದೇ ದೈಹಿಕ ಚಟುವಟಿಕೆ ಅಥವಾ ಮೆಟ್ಟಿಲುಗಳನ್ನು ಹತ್ತಿದ ಕೂಡಲೇ ಉಸಿರಾಟದ ತೊಂದರೆ ಆಗುತ್ತಲಿದ್ದರೆ, ಆಗ ನೀವು ನಿತ್ಯವೂ ದೀರ್ಘ ಉಸಿರಾಟದ ವ್ಯಾಯಾಮಗಳನ್ನು ಮಾಡಬೇಕು. ಇದರಿಂದ ತುಂಬಾ ನೆರವಾಗಲಿದೆ. ದೀರ್ಘವಾಗಿ ಐದು ನಿಮಿಷ ಕಾಲ ಉಸಿರಾಡಿದರೆ ಆಗ ಇದರಿಂದ ಮನಸ್ಸು ಶಾಂತವಾಗಿರುವುದು ಮತ್ತು ಶ್ವಾಸಕೋಶದ ಸಾಮರ್ಥ್ಯವು ಹೆಚ್ಚಾಗುವುದು.

ಮಳೆಗಾಲದಲ್ಲಿ ಆಹಾರದ ಕಡೆಗೆ ಹೆಚ್ಚು ಗಮನಹರಿಸಬೇಕು. ಮುಖ್ಯವಾಗಿ ಹಣ್ಣು, ತರಕಾರಿಗಳು, ಧಾನ್ಯಗಳು, ಕಾಳುಗಳ ಸೇವನೆಯಿಂದ ದೇಹಕ್ಕೆ ಬೇಕಾಗಿರುವ ಪ್ರಮುಖ ಪೋಷಕಾಂಶಗಳು ಸಿಗುವುದು.

ವಿಟಮಿನ್ ಸಿ, ವಿಟಮಿನ್ ಇ, ಆ?ಯಂಟಿಆಕ್ಸಿಡೆಂಟ್ ಮತ್ತು ಒಮೆಗಾ-3 ಕೊಬ್ಬಿನಾಮ್ಲವು ಇರುವ ತರಕಾರಿ ಮತ್ತು ಹಣ್ಣುಗಳನ್ನು ಆಯ್ಕೆ ಮಾಡಿದರೆ ಒಳ್ಳೆಯದು. ಇದರಿಂದ ಶ್ವಾಸಕೋಶದ ಆರೋಗ್ಯ ಕಾಪಾಡಬಹುದು ಮತ್ತು ಮಳೆಗಾಲದಲ್ಲಿ ಇದು ಶ್ವಾಸಕೋಶವನ್ನು ರಕ್ಷಣೆ ಮಾಡಲು ಸಹಕಾರಿ ಆಗಿದೆ.

ಮಳೆಗಾಲದಲ್ಲಿ ಹೆಚ್ಚಿನವರು ಅಗತ್ಯವಿದ್ದರೆ ಮಾತ್ರ ಮನೆಯಿಂದ ಹೊರಗೆ ಹೋಗುವುದು. ಆದರೆ ಮನೆಯ ಒಳಗಡೆ ಇದ್ದರೆ ಆಗ ಎಲ್ಲಾ ರೀತಿಯ ಬ್ಯಾಕ್ಟೀರಿಯಾ ಮತ್ತು ಕೀಟಾಣುಗಳಿಂದ ನೀವು ದೂರವಿರಬಹುದು ಎಂದು ಹೇಳಲು ಆಗದು.

ಮನೆಯ ಒಳಗಡೆ ಕೂಡ ಗಾಳಿಯು ಕಲುಷಿತವಾಗುವ ಸಾಧ್ಯತೆಯು ಇರುವ ಕಾರಣ ಗಾಳಿಯ ಗುಣಮಟ್ಟವನ್ನು ಮನೆಯ ಒಳಗಡೆ ಸರಿಯಾಗಿ ಇಟ್ಟುಕೊಳ್ಳಬೇಕು. ಮನೆಯ ಕೋಣೆ ಮತ್ತು ಹಾಲ್ ನಲ್ಲಿ ಗಾಳಿ ಶುದ್ಧೀಕರಿಸುವ ಯಂತ್ರವನ್ನು ಅಳವಡಿಸಿಕೊಂಡರೆ ಒಳ್ಳೆಯದು. ಇದರಿಂದ ಧೂಳು, ಕಲ್ಮಷ ಹಾಗೂ ಪ್ರಾಣಿಗಳ ರೋಮಗಳು ದೂರವಾಗುವುದು.

## ಕರ್ಪೂರ ಬೆರೆಸಿ ಹಚ್ಚಿದರೆ ಬಿಳಿ ಕೂದಲು ಬೇರು ಸಮೇತ ಕಪ್ಪಾಗುವುದು!

### ಬ್ಯೂಟಿ ಟಿಪ್ಸ್



ಕರ್ಪೂರವನ್ನು ಬಳಸುವುದರಿಂದ ಕೂದಲಿಗೆ ಸಂಬಂಧಿಸಿದ ಎಲ್ಲಾ ಸಮಸ್ಯೆಗಳು ಕಡಿಮೆಯಾಗುತ್ತವೆ. ಕೂದಲು ಉದುರುವುದು, ತಲೆಹೊಟ್ಟು, ಸೀಳಿದ ತುದಿಗಳು, ಬಿಳಿ ಕೂದಲನ್ನು ಕಪ್ಪು ಬಣ್ಣಕ್ಕೆ ತಿರುಗಿಸುವುದು ಮತ್ತು ಕೂದಲು ಉದ್ದ ಮತ್ತು ದಪ್ಪವಾಗಿ ಬೆಳೆಯುವಂತೆ ಮಾಡುವಲ್ಲಿ ಕರ್ಪೂರವು ಉತ್ತಮವಾಗಿ ಕಾರ್ಯನಿರ್ವಹಿಸುತ್ತದೆ. ಕರ್ಪೂರ ಬಳಸುವುದರಿಂದ ಕೂದಲಿನ ಸಮಸ್ಯೆಗಳು ಹೇಗೆ ಕಡಿಮೆಯಾಗುತ್ತವೆ ಎಂಬುದನ್ನು ತಿಳಿದುಕೊಳ್ಳೋಣ.

ಕರ್ಪೂರವನ್ನು ಪುಡಿಯನ್ನಾಗಿ ಮಾಡಬೇಕು. ಇದನ್ನು ತೆಂಗಿನ ಎಣ್ಣೆಗೆ ಸೇರಿಸಿ, ಡಬಲ್ ಬಾಯಿಲಿಂಗ್ ವಿಧಾನವನ್ನು ಬಳಸಿಕೊಂಡು ಬಿಸಿ ಮಾಡಬೇಕು. ಇದನ್ನು ನೆತ್ತಿಗೆ ಹಚ್ಚಿ ಉಗುರು ಬೆಚ್ಚಗಿರುವಾಗ ಮಸಾಜ್ ಮಾಡಬೇಕು. ಈ ರೀತಿ ಮಸಾಜ್ ಮಾಡುವುದರಿಂದ ತಲೆಗೆ ರಕ್ತ ಪರಿಚಲನೆ ಹೆಚ್ಚಾಗುತ್ತದೆ.

ರಾತ್ರಿ ಉಗುರು ಬೆಚ್ಚಗಿರುವಾಗಲೇ ತೆಂಗಿನ ಎಣ್ಣೆಯನ್ನು ಕರ್ಪೂರದೊಂದಿಗೆ ಬೆರೆಸಿ ಕೂದಲಿಗೆ ಹಚ್ಚಬೇಕು. ಬೆಳಿಗ್ಗೆ ಎದ್ದ ತಕ್ಷಣ ಸ್ನಾನ ಮಾಡಬೇಕು. ಇದನ್ನು ವಾರದಲ್ಲಿ ಎರಡು ಅಥವಾ ಮೂರು ಬಾರಿ ಮಾಡಿ. ಎರಡು ತಿಂಗಳು ಹೀಗೆ ಮಾಡಿದ ನಂತರ, ಕೂದಲಿನಲ್ಲಿ ಬದಲಾವಣೆಯನ್ನು ನೀವು ಖಂಡಿತ ಗಮನಿಸುವಿರಿ.

ಕರ್ಪೂರ ಬೆರೆಸಿದ ಎಣ್ಣೆಯನ್ನು ನೆತ್ತಿಗೆ ಹಚ್ಚುವುದರಿಂದ ಕೂದಲು ಉದುರುವುದು ಕಡಿಮೆಯಾಗುತ್ತದೆ ಮತ್ತು ಕೂದಲು ಬೆಳವಣಿಗೆ ವೇಗವಾಗಿ ಆಗುತ್ತದೆ. ಕೂದಲು ಎರಡು ಪಟ್ಟು ವೇಗವಾಗಿ ಬೆಳೆಯುತ್ತದೆ ಎಂದು ಆಯುರ್ವೇದ ತಜ್ಞರು ಹೇಳುತ್ತಾರೆ. ಇದು ಕೂದಲು ಉದ್ದವಾಗಿ ಮತ್ತು ದಪ್ಪವಾಗಿ ಬೆಳೆಯುವಂತೆ ಮಾಡುತ್ತದೆ.

ಅನೇಕ ಜನರ ಕೂದಲು ನಿರ್ಜೀವವಾಗಿ ಕಾಣುತ್ತದೆ. ಅಂತಹವರಿಗೂ ಸಹ, ಕರ್ಪೂರ ಬೆರೆಸಿದ ಎಣ್ಣೆಯನ್ನು ಕೂದಲಿಗೆ ಹಚ್ಚುವುದು ಪ್ರಯೋಜನಕಾರಿಯಾಗಿದೆ. ಇದು ನೆತ್ತಿಯಿಂದ ಧೂಳು ಮತ್ತು ಕೊಳೆಯನ್ನು ತೆಗೆದುಹಾಕಿ ಕೂದಲಿಗೆ ಹೊಸ ಹೊಳಪನ್ನು ತರುತ್ತದೆ. ಕೂದಲು ಕೂಡ ಮೃದುವಾಗಿರುತ್ತದೆ.

## ಸಂಚಿತ್ ಸಂಜೀವ್ ಚೊಚ್ಚಲ ಕ್ರೈಮ್ ಥ್ರಿಲ್ಲರ್ ಚಿತ್ರಕ್ಕೆ ಕರಾವಳಿ ಬೆಡಗಿ ಕಾಜಲ್ ಕುಂದರ್ ಜೋಡಿ!





ನಟ ಸುದೀಪ್ ಮನೆಯ ಕುಡಿ ಸಂಚಿತ್ ಸಂಜೀವ್ ಈಗಾಗಲೇ ಚಂದನವನಕ್ಕೆ ಪದಾರ್ಪಣೆ ಮಾಡಿರುವ ವಿಚಾರ ಗೊತ್ತೇ ಇದೆ. ಹೊಸ ವರ್ಷದ ಸಂಭ್ರಮದಲ್ಲಿ ಅವರ ಹೊಸ ಸಿನಿಮಾ ಅನೌನ್ಸ್ ಆಗಿದೆ.

ವಿವೇಕ್ ನಿರ್ದೇಶನದ ಮೊದಲ ಕ್ರೈಮ್ ಥ್ರಿಲ್ಲರ್ ಚಿತ್ರದಲ್ಲಿ ಸಂಚಿತ್ ನಟಿಸಲು ಸಜ್ಜಾಗುತ್ತಿದ್ದಾರೆ. ಸುಪ್ರಿಯಾನ್ವಿ ಪ್ರೊಡಕ್ಷನ್ಸ್ ಮತ್ತು ಕೆಆರ್‌ಜಿ ಸ್ಟುಡಿಯೋಸ್ ನಿರ್ಮಿಸಿರುವ ಈ ಚಿತ್ರವು ಜನವರಿ 24 ರಂದು ಫರ್ಸ್ಟ್ ಲುಕ್ ಮತ್ತು ಟೈಟಲ್ ಅನ್ನು ಅದ್ದೂರಿಯಾಗಿ ಅನಾವರಣಗೊಳಿಸಲಿದೆ.

ಮೇಘ ಮತ್ತು ಲೈನ್‌ಮ್ಯಾನ್‌ನಂತಹ ಚಿತ್ರಗಳಲ್ಲಿ ಅಸಾಂಪ್ರದಾಯಿಕ ಮತ್ತು ಅರ್ಥಪೂರ್ಣ ಪಾತ್ರಗಳಿಗೆ ಹೆಸರುವಾಸಿಯಾದ ಕಾಜಲ್ ಕುಂದರ್ ಈ ಚಿತ್ರಕ್ಕೆ ಸೇರ್ಪಡೆಗೊಳ್ಳುತ್ತಿದ್ದಾರೆ. ಪೆಪೆ ನಟಿ ಮತ್ತೊಂದು ಕುತೂಹಲಕಾರಿ ಪಾತ್ರವನ್ನು ಜೀವಂತಗೊಳಿಸಲು ಉತ್ಸುಕರಾಗಿದ್ದಾರೆ. ಸಿಇ ಜೊತೆ ಮಾತನಾಡಿದ ಕಾಜಲ್, ನಿರ್ದೇಶಕರು ಮತ್ತು ತಂಡವು ನನ್ನ ಹಿಂದಿನ ಕೆಲಸವನ್ನು ನೋಡಿದ್ದರು ಮತ್ತು ನಾನು ಆ ಪಾತ್ರಕ್ಕೆ ಸಂಪೂರ್ಣವಾಗಿ ಹೊಂದಿಕೊಳ್ಳುತ್ತೇನೆ ಎಂದು ಭಾವಿಸಿದರು. ವಿವೇಕ್ ನನಗೆ ಆಡಿಷನ್ ನೀಡಲು ಹೇಳಿದ್ದರು, ಹೀಗಾಗಿ ನಾನು ಈ ಸಿನಿಮಾದಲ್ಲಿದ್ದೇನೆ ಎಂದು ಸಂತಸ ವ್ಯಕ್ತ ಪಡಿಸಿದ್ದಾರೆ.

ಕಾಜಲ್ ಒಂದು ದಿನ ಸುದೀಪ್ ಅವರೊಂದಿಗೆ ಪರದೆಯನ್ನು ಹಂಚಿಕೊಳ್ಳುವ ಕನಸು ಕಾಣುತ್ತಿದ್ದರೂ, ಆದರೆ ಈಗ ಕಾರ್ತಿಕ್ ಗೌಡ ಮತ್ತು ಯೋಗಿ ಜಿ ರಾಜ್ ಅವರೊಂದಿಗೆ ಪ್ರಿಯಾ ಸುದೀಪ್ ನಿರ್ಮಿಸಿರುವ ಪ್ರಾಜೆಕ್ಟ್ ಭಾಗವಾಗಲು ಸಂತೋಷ ವ್ಯಕ್ತಪಡಿಸಿದರು. ಗುಣಮಟ್ಟ ಮತ್ತು ಕಥೆ ನಿರೂಪಣೆ ಹಾಗೂ ಗೌರವಿಸುವ ತಂಡದೊಂದಿಗೆ ಕೆಲಸ ಮಾಡುವುದು ಒಂದು ಉತ್ತಮ ಭಾವನೆ ಮತ್ತು ಪ್ರಸಿದ್ಧ ನಿರ್ಮಾಣ ಸಂಸ್ಥೆಯಲ್ಲಿ ಕೆಲಸ ಮಾಡಲು ಉತ್ಸುಕಳಾಗಿದ್ದೇನೆ ಎಂದಿದ್ದಾರೆ.

ನಾನು ಪಕ್ಕದ ಮನೆಯ ಹುಡುಗಿಯ ಪಾತ್ರವನ್ನು ನಿರ್ವಹಿಸುತ್ತಿದ್ದೇನೆ, ಇದರಲ್ಲಿ ಅಭಿನಯಕ್ಕೆ ಸಾಕಷ್ಟು ಅವಕಾಶವಿದೆ, ಇದು ನನ್ನನ್ನು ರೋಮಾಂಚನಗೊಳಿಸಿತು. ವರ್ಕ್ ಶಾಪ್ ಈಗಾಗಲೇ ನಡೆಯುತ್ತಿವೆ ಮತ್ತು ಫೆಬ್ರವರಿಯಲ್ಲಿ ಚಿತ್ರೀಕರಣ ಪ್ರಾರಂಭವಾಗುವ ಮೊದಲು ನಾನು ತಯಾರಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನಂದಿಸುತ್ತಿದ್ದೇನೆ ಎಂದಿದ್ದಾರೆ. ಈ ಯೋಜನೆಯ ಹೊರತಾಗಿ, ಕಾಜಲ್ ಬಿಳಿ ಚುಕ್ಕಿ ಹಳ್ಳಿ ಹಕ್ಕಿ ಮತ್ತು ಹೊಸ ತಂಡದ ಜೊತೆ ಹೆಸರಿಡದ ಹಾಸ್ಯ ಚಿತ್ರದಲ್ಲಿ ನಟಿಸುತ್ತಿದ್ದಾರೆ.

## ಹ್ಯಾಪಿಯೆಸ್ಟ್ ಮೈಂಡ್ಸ್ ರನ್

### ಮ್ಯಾರಥಾನ್ ನಲ್ಲಿ 1000ಕ್ಕೂ ಹೆಚ್ಚು ಓಟಗಾರರ ರಿಂದ ಬಾಲಕಿಯರಿಗೆ ಸ್ಟೆಮ್ ಶಿಕ್ಷಣ ಒದಗಿಸುವ ಉದ್ದೇಶಕ್ಕೆ ಬೆಂಬಲ

'ಬಾರ್ನ್ ಡಿಜಿಟಲ್. ಬಾರ್ನ್ ಅಜೈಲ್', ಮೈಂಡ್ಫುಲ್ ಐಟಿ ಕಂಪನಿ ಆಗಿರುವ ಹ್ಯಾಪಿಯೆಸ್ಟ್ ಮೈಂಡ್ಸ್ ಟೆಕ್ನಾಲಜೀಸ್ ಲಿಮಿಟೆಡ್ ಸಂಸ್ಥೆಯು ಹ್ಯಾಪಿಯೆಸ್ಟ್ ಮೈಂಡ್ಸ್ ರನ್ ನ ಐದನೇ ಆವೃತ್ತಿಯನ್ನು ಬೆಂಗಳೂರಿನ ಕಬ್ಬನ್ ಪಾರ್ಕ್ ನಲ್ಲಿರುವ ಕಂಠೀರವ ಸ್ಟೇಡಿಯಂನಲ್ಲಿ ಜನವರಿ 19 ಭಾನುವಾರದಂದು ಆಯೋಜಿಸಿತ್ತು.

ಅದೇ ದಿನ ದೇಶದ ಇನ್ನಿತರ ಮೂರು ಸ್ಥಳಗಳಲ್ಲಿ (ಭುವನೇಶ್ವರ, ನೋಯ್ಡಾ ಮತ್ತು ಪುಣೆ) ಈ ಹ್ಯಾಪಿಯೆಸ್ಟ್ ರನ್ ಕಾರ್ಯಕ್ರಮ ನಡೆದಿದ್ದು, ಒಟ್ಟು 1000ಕ್ಕೂ ಹೆಚ್ಚು ಮಂದಿ ಓಟದಲ್ಲಿ ಭಾಗವಹಿಸಿದರು. ಈ ವರ್ಷ ಬಾಲಕಿಯರಿಗೆ ಸ್ಟೆಮ್ ಶಿಕ್ಷಣವನ್ನು ನೀಡುವ ಉದ್ದೇಶ ಇಟ್ಟುಕೊಂಡು ಕಾರ್ಯ ನಿರ್ವಹಿಸುತ್ತಿರುವ ನನ್ಹಿ ಕಾಲಿ ಎನ್ ಜಿ ಓಗೆ 10 ಲಕ್ಷ ಮೊತ್ತವನ್ನು ನೀಡಲಾಗಿದೆ. ಅಯೋನ್, ಐಸಿಐಸಿಐ ಬ್ಯಾಂಕ್ ಮತ್ತು ಆರ್ ಬಿ ಎಲ್ ಬ್ಯಾಂಕ್ ಈ ಓಟದ ಕಾರ್ಯಕ್ರಮದ ಪ್ರಾಯೋಜಕರಾಗಿದ್ದರು. ಪಾನೀಯ ಪಾಲುದಾರರಾಗಿದ್ದ ಹರಿಕೇನ್ ಮತ್ತು ಸ್ವಾಸ್ಥ್ಯ ಪಾಲುದಾರರಾಗಿದ್ದ ಫೋರ್ಟಿಸ್ ಸಂಸ್ಥೆಗಳು ಈ ಕಾರ್ಯಕ್ರಮದ ಯಶಸ್ಸಿಗೆ ಕಾರಣೀಭೂತರಾಗಿದ್ದಾರೆ.

ಹ್ಯಾಪಿಯೆಸ್ಟ್ ಹೆಲ್ತ್ ನ ಡ್ಯಾನ್ಸ್ ಫಿಟ್ ನೆಸ್ ಸೆಷನ್ ಮೂಲಕ ಈ ಹ್ಯಾಪಿಯೆಸ್ಟ್ ರನ್ ಕಾರ್ಯಕ್ರಮವು ಪ್ರಾರಂಭಗೊಂಡಿತು. ಎಲ್ಲರ ಉಲ್ಲಾಸ ಹೆಚ್ಚಿಸುವಂತೆ ನಡೆದ ಈ ಕಾರ್ಯಕ್ರಮವು ಓಟದಲ್ಲಿ ಭಾಗವಹಿಸುವವರ ಹುಮ್ಮಸ್ಸು ಹೆಚ್ಚಿಸಿತು. ಕಂಠೀರವ ಸ್ಟೇಡಿಯಂನಲ್ಲಿ ಬೆಳಿಗ್ಗೆ 7:00 ಗಂಟೆಗೆ ಸರಿಯಾಗಿ ಜೋಸೆಫ್ ಅವರು ಓಟಕ್ಕೆ ಅಧಿಕೃತ ಚಾಲನೆ ನೀಡಿದರು. ಎಲ್ಲಾ ಓಟಗಾರರು ಸುಂದರವಾದ ಪ್ರಕೃತಿ ವೈಭ ಹೊಂದಿರುವ ಕಬ್ಬನ್ ಪಾರ್ಕ್ ನಲ್ಲಿ 3 ಮೈಲಿ ಮತ್ತು 6 ಮೈಲಿ ಓಟ ಗಳನ್ನು ಪೂರೈಸಿದರು. ಆ ಓಟದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಪ್ರತಿಯೊಬ್ಬರೂ ಪದಕಗಳನ್ನು ಪಡೆದರು. ಜೊತೆಗೆ ಅತ್ಯುತ್ತಮವಾದ ರುಚಿಕರವಾದ ಉಪಹಾರವನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹ್ಯಾಪಿಯೆಸ್ಟ್ ಮೈಂಡ್ಸ್ ನ ಕಾರ್ಯನಿರ್ವಾಹಕ ಉಪಾಧ್ಯಕ್ಷ ಜೋಸೆಫ್ ಅನಂತರಾಜು ಅವರು, ಆರೋಗ್ಯಕ್ಕೆ ಫಿಟ್ ನೆಸ್ ಕಾಪಾಡಿಕೊಳ್ಳುವುದೇ ಪ್ರಮುಖವಾದುದು, ಹಾಗಾಗಿ ಫಿಟ್ ನೆಸ್ ಅನ್ನು ಗೌರವಿಸುವ ವ್ಯಕ್ತಿಯಾಗಿ ಈ ಸ್ಫೂರ್ತಿದಾಯಕ ಯೋಜನೆಯ ಭಾಗವಾಗಲು ನಾನು ಉತ್ಸುಕನಾಗಿದ್ದೇನೆ. ಬಾಲಕಿಯರಿಗೆ ಹೆಚ್ಚಿನ ಸ್ಟೆಮ್ ಶಿಕ್ಷಣ ಒದಗಿಸುವುದನ್ನು ಬೆಂಬಲಿಸುವ ಕಾರಣಕ್ಕೆ ಈ ಓಟದಲ್ಲಿ 1000ಕ್ಕೂ ಹೆಚ್ಚು ಓಟಗಾರರು ಭಾಗವಹಿಸಿದ್ದು, ಅವರು ಜನ ಶಕ್ತಿಯ ಪ್ರದರ್ಶನ ಮಾಡಿದ್ದಾರೆ ಮತ್ತು ಈ ಮಹೋನ್ನತ ಉದ್ದೇಶ ಸಾಕಾರಕ್ಕೆ ಬೆಂಬಲ ಸೂಚಿಸಿದ್ದಾರೆ ಎಂದು ಹೇಳಿದರು.

ಹ್ಯಾಪಿಯೆಸ್ಟ್ ಮೈಂಡ್ಸ್ ನ ಚೀಫ್ ಪೀಪಲ್ ಆಫೀಸರ್ ಸಚಿನ್ ಖುರಾನಾ ಅವರು ಮಾತನಾಡಿ, ಒಂದು ಅತ್ಯುತ್ತಮವಾದ ಉದ್ದೇಶವನ್ನು ಬೆಂಬಲಿಸಲು ದೊಡ್ಡ ಸಂಖ್ಯೆಯ ಮತ್ತು ವಿವಿಧ ಹಿನ್ನೆಲೆಯ ಜನರು ಒಟ್ಟುಗೂಡಿದ್ದನ್ನು ನೋಡಿ ನಮಗೆ ಬಹಳ ಸಂತೋಷವಾಗಿದೆ. ಈ ಒಗ್ಗಟ್ಟು ಉದ್ದೇಶ ಸಾಕಾರಕ್ಕೆ ಹೆಚ್ಚಿನ ಬಲ ನೀಡುವುದಲ್ಲದೆ, ನಾವೆಲ್ಲರೂ ಒಗ್ಗೂಡಿ ಮುನ್ನಡೆದರೆ ಒಂದು ಅರ್ಥಪೂರ್ಣ ಬದಲಾವಣೆಯನ್ನು ಉಂಟುಮಾಡಬಹುದು ಎಂಬುದನ್ನು ತೋರಿಸಿಕೊಡುತ್ತದೆ. ಒಗ್ಗಟ್ಟಿಗೆ ಬಲವಿಗೆ ಎಂಬ ಪ್ರಜ್ಞೆಯನ್ನು ಮೂಡಿಸುವಲ್ಲಿ ಈ ಕಾರ್ಯಕ್ರಮ ಯಶಸ್ವಿಯಾಗಿದೆ ಎಂದು ಹೇಳಿದರು.

ಸಚಿನ್ ಖುರಾನಾ, ಡಾ.ಕಿರಣ್ ವೆಗಾಸ್, ಪಾಲ್ ಜಾಕೋಬ್, ಹೇಮಂತ ಲೆಂಕಾ, ಪಾಯಲ್ ಜಾತಕಿಯಾ, ಆಂಚಲ್ ಶೆಟ್ಟಿ, ಸಚಿ ಜಾಗಿರ್ದಾರ್, ರೇಷಿಕಾ ಇ, ಸಲೋನಿ ಜೈನ್ ಮತ್ತು ದೀಕ್ಷಾ ಪ್ರಿಯಾ ಮುಂತಾದವರು ಹ್ಯಾಪಿಯೆಸ್ಟ್ ರನ್ ಸಮಿತಿಯ ಸಮಿತಿಯಲ್ಲಿದ್ದು ಕಾರ್ಯನಿರ್ವಹಿಸಿದರು. ಈ ಕಾರ್ಯಕ್ರಮದ ಅಭೂತಪೂರ್ವ ಯಶಸ್ಸಿಗೆ ದುಡಿದರು. ಈ ಕಾರ್ಯಕ್ರಮದ ಆಯೋಜಕರು ಈ ಕಾರ್ಯಕ್ರಮವನ್ನು ಯಶಸ್ವಿಯಾಗಿಸಲು ದುಡಿದ ಸ್ವಯಂಸೇವಕರು, ಪ್ರಾಯೋಜಕರು ಮತ್ತು ತೆರೆಮರೆಯಲ್ಲಿ ನಿಂತು ಕೊಡುಗೆ ನೀಡಿದವರಿಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಿದರು.

ಸಾವಧಾನತೆ, ಸಂತೋಷ ಮತ್ತು ಯೋಗಕ್ಷೇಮದ ಮಹತ್ವದ ಮೇಲೆ ಸಂಸ್ಥೆಯು ಇಟ್ಟಿರುವ ನಂಬಿಕೆಗೆ ಹ್ಯಾಪಿಯೆಸ್ಟ್ ಮೈಂಡ್ಸ್ ರನ್ 2025 ಒಂದು ಅತ್ಯುತ್ತಮ ಉದಾಹರಣೆಯಾಗಿದೆ.

## ವೀಲ್ ಚೇರ್‌ನಲ್ಲಿ ಕಾಣಿಸಿಕೊಂಡ ರಶ್ಮಿಕಾ ಮಂದಣ್ಣ



ಪ್ಯಾನ್ ಇಂಡಿಯಾ ನಾಯಕಿ ರಶ್ಮಿಕಾ ಮಂದಣ್ಣ ವ್ಹೀಲ್ ಚೇರ್ ನಲ್ಲಿ ಕಾಣಿಸಿಕೊಂಡಿದ್ದಾರೆ. ಬುಧವಾರ ಶಂಶಾಬಾದ್ ವಿಮಾನ ನಿಲ್ದಾಣವನ್ನು ತಲುಪಿದಾಗ ಈ ವಿಚಾರ ಬಯಲಿಗೆ ಬಂದಿದೆ. ಕಾರಿನಿಂದ ಇಳಿಯುವಾಗಲೂ ಕಷ್ಟಪಟ್ಟು ಒಂದೇ ಕಾಲಿನಲ್ಲಿ ನಡೆಯುತ್ತಿದ್ದರು. ಇತ್ತೀಚೆಗಷ್ಟೇ ರಶ್ಮಿಕಾ ಮಂದಣ್ಣ ಜಿಮ್‌ನಲ್ಲಿ ವರ್ಕೌಟ್ ಮಾಡುವಾಗ ಕಾಲು ಉಳುಕಿತ್ತು.

ಗಾಯ ಚಿಕ್ಕದಾಗಿದೆ ಎಂದು ಭಾವಿಸಲಾಗಿತ್ತು, ಆದರೆ ವಿಮಾನ ನಿಲ್ದಾಣದಲ್ಲಿ ರಶ್ಮಿಕಾ ಅವರ ಸ್ಥಿತಿ ನೋಡಿದರೆ ಗಾಯ ದೊಡ್ಡದಾಗಿದೆ ಮತ್ತು ಗಂಭೀರವಾಗಿದೆ ಎಂದು ವರದಿಯಾಗಿದೆ. ವಿಮಾನ ನಿಲ್ದಾಣದಲ್ಲಿ ರಶ್ಮಿಕಾ ಅವರ ಇತ್ತೀಚಿನ ದೃಶ್ಯಗಳು ಮತ್ತು ವೀಡಿಯೊಗಳು ಈಗ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿವೆ. ಇದನ್ನು ನೋಡಿದ ಅಭಿಮಾನಿಗಳು ಶಾಕ್ ಆಗಿದ್ದಾರೆ.

ರಶ್ಮಿಕಾ ಮಂದಣ್ಣ ಕಳೆದ ವರ್ಷ ಪುಷ್ಪ 2 ಚಿತ್ರದ ಮೂಲಕ ಮತ್ತೊಂದು ಬ್ಲಾಕ್‌ಬಸ್ಟರ್ ಪಡೆದರು. ಅಲ್ಲು ಅರ್ಜುನ್ ಅಭಿನಯದ ಈ ಚಿತ್ರವು ರೂ.1850 ಕೋಟಿಗೂ ಹೆಚ್ಚು ಕಲೆಕ್ಷನ್ ಮಾಡಿ ಬಾಹುಬಲಿ 2 ದಾಖಲೆಗಳನ್ನು ಮುರಿದಿದೆ. ಈ ಸಿನಿಮಾದಲ್ಲಿ ಶ್ರೀವಲ್ಲಿ ಪಾತ್ರದಲ್ಲಿ ರಶ್ಮಿಕಾ ಅಭಿನಯ ಎಲ್ಲರನ್ನೂ ಆಕರ್ಷಿಸಿತ್ತು.

ಸದ್ಯ ಬಾಲಿವುಡ್ ಸ್ಟಾರ್ ಹೀರೋ ವಿಕ್ಕಿ ಕೌಶಲ್ ಅಭಿನಯದ ಚಾವಾ ಐತಿಹಾಸಿಕ ಸಿನಿಮಾದಲ್ಲಿ ಸಂಭಾಜಿ ಮಹಾರಾಜರ ಪತ್ನಿ ಮಹಾರಾಣಿ ಯಸುಬಾಯಿ ಪಾತ್ರದಲ್ಲಿ ರಶ್ಮಿಕಾ ಕಾಣಿಸಿಕೊಳ್ಳಲಿದ್ದಾರೆ. ಇತ್ತೀಚೆಗಷ್ಟೇ ಈ ಚಿತ್ರದ ರಶ್ಮಿಕಾ ಅವರ ಫಸ್ಟ್ ಲುಕ್ ಬಿಡುಗಡೆಯಾಗಿದ್ದು, ಅಭಿಮಾನಿಗಳಿಂದ ನಿರೀಕ್ಷೆಗೂ ಮೀರಿದ ಪ್ರತಿಕ್ರಿಯೆ ಸಿಕ್ಕಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಸರ್ಕಾರಿ ಕೆಲಸಗಳಿಂದ ಅನುಕೂಲ, ಮಾನ ಅಪಮಾನ ನಿಂದನೆ, ಆತ್ಮಗೌರವಕ್ಕೆ ಸ್ನೇಹಿತರಿಂದ ದೂರ, ಮಕ್ಕಳ ನಡವಳಿಕೆಯಿಂದ ಬೇಸರ.

**ವೃಷಭ:** ಕುಟುಂಬದವರೊಂದಿಗೆ ಮನಸ್ತಾಪ, ಮಾನಸಿಕ ವೇದನೆ, ಆರೋಗ್ಯದಲ್ಲಿ ವ್ಯತ್ಯಾಸ,

**ಮಿಥುನ:** ಅನಿರೀಕ್ಷಿತ ಪ್ರಯಾಣ, ಪ್ರೀತಿ ಪ್ರೇಮದ ವಿಷಯಗಳ ಪ್ರಸ್ತಾಪ, ಆರೋಗ್ಯದಲ್ಲಿ ವ್ಯತ್ಯಾಸ.

**ಕಟಕ:** ಆರ್ಥಿಕವಾಗಿ ಮೋಸ, ಭೂಮಿ ವಾಹನ ಖರೀದಿಯಲ್ಲಿ ಸಮಸ್ಯೆ, ಸ್ನೇಹಿತರ ನಡುವೆ ಸಮಸ್ಯೆ

**ಸಿಂಹ:** ಉದ್ಯೋಗ ಸ್ಥಳದಲ್ಲಿ ಸಮಸ್ಯೆ, ಗೌರವಕ್ಕೆ ದಕ್ಕೆ, ಮಕ್ಕಳ ನಡವಳಿಕೆಯಿಂದ ಬೇಸರ, ಪ್ರೀತಿ ಪ್ರೇಮದ ಚಿಂತೆ.

**ಕನ್ಯಾ:** ಸರ್ಕಾರಿ ಅಧಿಕಾರಿಗಳಿಂದ ಅನುಕೂಲ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಪತ್ರ ವ್ಯವಹಾರದಲ್ಲಿ ನಷ್ಟ ಮತ್ತು ಸಂಕಷ್ಟ.

**ತುಲಾ:** ಮಿತ್ರರು ಶತ್ರುಗಳಾಗಿ ಪರಿವರ್ತನೆ, ಆತ್ಮಗೌರವಕ್ಕೆ ಚ್ಯುತಿ, ಉತ್ತಮ ಅವಕಾಶಗಳು ಪ್ರಾಪ್ತಿ.

**ವೃಶ್ಚಿಕ:** ದುರಾಲೋಚನೆಗಳು ಹೆಚ್ಚು, ಮೋಸ ಮತ್ತು ನಷ್ಟಗಳನ್ನು ಅನುಭವಿಸುವಿರಿ, ಉದ್ಯೋಗ ಸ್ಥಳದಲ್ಲಿ ಸಮಸ್ಯೆ.

**ಧನಸ್ಸು:** ಸಾಲದ ಸಹಾಯ, ಮಾನಸಿಕ ವೇದನೆ, ದೇವತಾ ಕಾರ್ಯಗಳಲ್ಲಿ ನಿರಾಸಕ್ತಿ, ಕುಲದೇವತಾ ನಿಂದನೆ.

**ಮಕರ:** ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ಆರ್ಥಿಕ ಸಮಸ್ಯೆಗಳು ಹೆಚ್ಚು, ದೂರ ಭಾವನೆಗಳಿಗೆ ಕಲ್ಪನೆಗಳಿಗೆ ಪೆಟ್ಟು.

**ಕುಂಭ:** ಕುಟುಂಬ ಗೌರವಕ್ಕೆ ಧಕ್ಕೆ, ದಾಂಪತ್ಯದಲ್ಲಿ ಸಮಸ್ಯೆ, ಭವಿಷ್ಯದ ಚಿಂತನೆಗಳು ಮತ್ತು ಆತಂಕ, ಶಕ್ತಿ ದೇವತೆಗಳ ದರ್ಶನಕ್ಕೆ ಮುಂದಾಗುವಿರಿ.

**ಮೀನ:** ಸಂಕಷ್ಟಕ್ಕೆ ಸಿಲುಕುವ ಸನ್ನಿವೇಶ, ಮಕ್ಕಳು ಪೆಟ್ಟು ಮಾಡಿಕೊಳ್ಳುವರು, ಆರೋಗ್ಯದಲ್ಲಿ ಏರುಪೇರು.

## ಪರಾಕ್ರಮ್ ದಿವಸ್




ಪರಾಕ್ರಮ್ ದಿವಸ್ (ಪರಾಕ್ರಮ್ ದಿವಸ್ ಎಂದೂ ಕರೆಯುತ್ತಾರೆ) ಅನ್ನು ಪ್ರತಿ ವರ್ಷ ಜನವರಿ 23 ರಂದು ಆಚರಿಸಲಾಗುತ್ತದೆ. ಇದು ಪ್ರಮುಖ ರಾಷ್ಟ್ರೀಯವಾದಿ, ರಾಜಕಾರಣಿ ಮತ್ತು ಸ್ವಾತಂತ್ರ್ಯ ಹೋರಾಟಗಾರ ನೇತಾಜಿ ಸುಭಾಷ್ ಚಂದ್ರ ಬೋಸ್ (ಜನಪ್ರಿಯವಾಗಿ ನೇತಾಜಿ ಎಂದು ಕರೆಯುತ್ತಾರೆ) ಅವರ ಜನ್ಮದಿನವನ್ನು ಗುರುತಿಸುವ ಸಲುವಾಗಿ ಭಾರತ ಸರ್ಕಾರವು ಈ ದಿನವನ್ನು ಮೀಸಲಿಟ್ಟಿದೆ.

ಜನವರಿ 19, 2021 ರಂದು, ಭಾರತ ಸರ್ಕಾರವು ಸಂಸ್ಕೃತಿ ಸಚಿವಾಲಯದ ಮೂಲಕ ಜನವರಿ 23, 2021 ರಿಂದ ರಾಷ್ಟ್ರವು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಮರಣೋತ್ತರ 125 ನೇ ಜನ್ಮದಿನವನ್ನು ಆಚರಿಸಲಿದೆ ಎಂದು ಪ್ರಕಟಣೆಯನ್ನು ಹೊರಡಿಸಿತು. ಈ ರಜಾದಿನವನ್ನು ಪರಾಕ್ರಮ್ ದಿವಸ್ (ಅಥವಾ ಪರಾಕ್ರಮ್ ದಿವಸ್) ಎಂದು ಕರೆಯಲಾಯಿತು, ಇದರರ್ಥ ನೇತಾಜಿಯವರ ತ್ಯಾಗ ಮತ್ತು ಭಾರತದ ಸ್ವಾತಂತ್ರ್ಯ ಚಳವಳಿಗೆ ನೀಡಿದ ಅಪಾರ ಕೊಡುಗೆಯನ್ನು ಅಂಗೀಕರಿಸಲು. ನೇತಾಜಿ ಸುಭಾಷ್ ಚಂದ್ರ ಬೋಸ್ ಜನವರಿ 23, 1897 ರಂದು ಒರಿಸ್ಸಾ/ಒಡಿಶಾದ ಕಟಕ್ನಲ್ಲಿ ಜನಿಸಿದರು. ಅವರ ಪೋಷಕರು ಜಾನಕಿನಾಥ್ ಬೋಸ್ ಮತ್ತು ಪ್ರಭಾವತಿ ದತ್. ಒಬ್ಬ ಅದ್ಭುತ ವಿದ್ವಾಂಸ ಮತ್ತು ನಿಜವಾದ ಭಾರತೀಯ ದೇಶಭಕ್ತ, ನೇತಾಜಿ ಬೋಸ್ ಕಲ್ಕತ್ತಾ ವಿಶ್ವವಿದ್ಯಾಲಯದ ಅಧೀನದಲ್ಲಿರುವ ಸ್ಕಾಟಿಷ್ ಚರ್ಚ್ ಕಾಲೇಜಿನಲ್ಲಿ ತತ್ವಶಾಸ್ತ್ರದಲ್ಲಿ ಬಿ.ಎ. ಪದವಿ ಪಡೆದರು. ನಂತರ ಅವರು 1919 ರಲ್ಲಿ ಇಂಗ್ಲೆಂಡ್ನಲ್ಲಿ ಭಾರತೀಯ ನಾಗರಿಕ ಸೇವೆ (ಐ.ಸಿ.ಎಸ್.) ಪೂರ್ಣಗೊಳಿಸಲು ಹೋದರು ಮತ್ತು ಇಂಗ್ಲಿಷ್ನಲ್ಲಿ ಅತ್ಯುನ್ನತ ಅಂಕಗಳೊಂದಿಗೆ ತಮ್ಮ ತರಗತಿಯಲ್ಲಿ ನಾಲ್ಕನೇ ಸ್ಥಾನ ಪಡೆದರು. ಆದಾಗ್ಯೂ, ಅವರು 1921 ರಲ್ಲಿ ತಮ್ಮ ಹುದ್ದೆಗೆ ರಾಜೀನಾಮೆ ನೀಡಿ ಬ್ರಿಟಿಷ್ ಸರ್ಕಾರಕ್ಕೆ ಸೇವೆ ಸಲ್ಲಿಸಲು ಬಯಸದ ಕಾರಣ ಭಾರತಕ್ಕೆ ಮರಳಿದರು.

ಭಾರತಕ್ಕೆ ಹಿಂತಿರುಗಿದ ನೇತಾಜಿ ದೇಶಬಂಧು ಚಿತ್ತರಂಜನ್ ದಾಸ್ ಅವರ ಮಾರ್ಗದರ್ಶನದಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ (ಐ.ಎನ್ .ಸಿ.) ಸೇರಿದರು, ಅವರು ತಮ್ಮ ರಾಜಕೀಯ ಮಾರ್ಗದರ್ಶಕರಾದರು. ಅವರು ಸ್ವಾಮಿ ವಿವೇಕಾನಂದರ ಸಿದ್ಧಾಂತಗಳಿಂದ ಹೆಚ್ಚು ಪ್ರಭಾವಿತರಾಗಿದ್ದರು ಮತ್ತು ಅವರನ್ನು ತಮ್ಮ ಆಧ್ಯಾತ್ಮಿಕ ಗುರುಗಳೆಂದು ಪರಿಗಣಿಸಿದರು. 1923 ರಲ್ಲಿ, ಬೋಸ್ ಅಖಿಲ ಭಾರತ ಯುವ ಕಾಂಗ್ರೆಸ್ನ ಅಧ್ಯಕ್ಷರಾದರು ಮತ್ತು ನಂತರ 1938 ಮತ್ತು 1939 ರಲ್ಲಿ ಕಾಂಗ್ರೆಸ್ ಅಧ್ಯಕ್ಷರಾದರು. 1942 ರಲ್ಲಿ, ಎರಡನೇ ಮಹಾಯುದ್ಧದ ಸಮಯದಲ್ಲಿ, ನೇತಾಜಿ 'ದೆಹಲಿ ಚಲೋ' ಎಂಬ ಘೋಷಣೆಯೊಂದಿಗೆ ಆಗ್ನೇಯ ಏಷ್ಯಾದಲ್ಲಿ ಆಜಾದ್ ಹಿಂದ್ ಫೌಜ್ (ಭಾರತೀಯ ರಾಷ್ಟ್ರೀಯ ಸೇನೆ) ಎಂದು ಕರೆಯಲ್ಪಡುವ 5,000 ಜನರ ಪಡೆಯನ್ನು ರಚಿಸಿ ಮುನ್ನಡೆಸಿದರು. ಅವರು ತಮ್ಮ ತವರು ರಾಜ್ಯ ಬಂಗಾಳದಲ್ಲಿ ಜನಪ್ರಿಯ ಬೆಂಬಲವನ್ನು ಗಳಿಸಲು ಫಾರ್ವರ್ಡ್ ಬ್ಲಾಕ್ ಎಂಬ ಹೊಸ ಪಕ್ಷವನ್ನು ಸಹ ಸ್ಥಾಪಿಸಿದರು.

ಸಂಜೆ ಮುಗಿಲು
ಗುರುವಾರ
23.1.2025



## ಪಾಕಿಸ್ತಾನದೊಂದಿಗೆ ವ್ಯಾಪಾರ ಪುನರಾರಂಭಿಸುವ ಮಾತುಕತೆ ನಡೆದಿಲ್ಲ

ನವದೆಹಲಿ: ಭಾರತದೊಂದಿಗೆ ವ್ಯಾಪಾರವನ್ನು ಪುನರಾರಂಭಿಸುವ ಬಗ್ಗೆ ಪಾಕಿಸ್ತಾನದೊಂದಿಗೆ ಯಾವುದೇ ಮಾತುಕತೆ ನಡೆದಿಲ್ಲ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಬುಧವಾರ ಹೇಳಿದ್ದಾರೆ. ''ಕಳೆದ ವರ್ಷದ ನಂತರ, ವ್ಯಾಪಾರದ ಬಗ್ಗೆ ಪಾಕಿಸ್ತಾನದೊಂದಿಗೆ ಯಾವುದೇ ಮಾತುಕತೆ ನಡೆದಿಲ್ಲ, ಅಥವಾ ಅವರ ಕಡೆಯಿಂದ



ಯಾವುದೇ ಉಪಕ್ರಮ ಬಂದಿಲ್ಲ'' ಎಂದು ಜೈಶಂಕರ್ ಪತ್ರಿಕಾಗೋಷ್ಠಿಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಭಾರತವು ಪಾಕಿಸ್ತಾನದೊಂದಿಗಿನ ವ್ಯಾಪಾರವನ್ನು ಎಂದಿಗೂ ನಿಲ್ಲಿಸಿಲ್ಲ ಮತ್ತು ಈ ನಿಟ್ಟಿನಲ್ಲಿ ನಿರ್ಧಾರವನ್ನು ಪಾಕಿಸ್ತಾನ ಸರ್ಕಾರವು 2019 ರಲ್ಲಿ ತೆಗೆದುಕೊಂಡಿದೆ ಎಂದು ಅವರು ಹೇಳಿದರು. ''ಮೊದಲಿನಿಂದಲೂ, ಭಾರತವು ಅತ್ಯಂತ ನೆಚ್ಚಿನ ರಾಷ್ಟ್ರದ ಸ್ಥಾನಮಾನವನ್ನು ಪಡೆಯಬೇಕು ಎಂಬುದು ನಮ್ಮ ಆಸಕ್ತಿಯಾಗಿತ್ತು. ನಾವು ಪಾಕಿಸ್ತಾನಕ್ಕೆ ಎಂಎಫ್‌ಎನ್ ಸ್ಥಾನಮಾನವನ್ನು ನೀಡುತ್ತಿದ್ದೆವು. ಆದರೆ ಅವರು ನಮಗೆ ಅದೇ ಸ್ಥಾನಮಾನವನ್ನು ನೀಡಲಿಲ್ಲ'' ಎಂದು ಜೈಶಂಕರ್ ಹೇಳಿದರು. ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನವನ್ನು ನೀಡಿದ ಸಂವಿಧಾನದ 370 ನೇ ವಿಧಿಯನ್ನು ಭಾರತ ರದ್ದುಪಡಿಸಿದ್ದಕ್ಕೆ ಪ್ರತೀಕಾರವಾಗಿ ಇಮ್ರಾನ್ ಖಾನ್ ನೇತೃತ್ವದ ಅಂದಿನ ಪಾಕಿಸ್ತಾನ ಸರ್ಕಾರವು 2019 ರ ಆಗಸ್ಟ್‌ನಲ್ಲಿ ಎಲ್ಲಾ ದ್ವಿಪಕ್ಷೀಯ ವ್ಯಾಪಾರವನ್ನು ಸ್ಥಗಿತಗೊಳಿಸಿತು.

## ಮುಗ್ಗರಿಸಿದ ಕಂಗನಾ ರಾಣಾವತ್ ಎಮರ್ಜೆನ್ಸಿ ಚಿತ್ರ

**ಮುಂಬೈ:** ಒಂದು ಕಾಲದಲ್ಲಿ ಬಾಲಿವುಡ್‌ನಲ್ಲಿ ರಾಣಿಯಂತೆ ಮೆರೆದವರು ಕಂಗನಾ ರಾಣಾವತ್ ಇವರು ಕಮರ್ಷಿಯಲ್ ಚಿತ್ರಗಳ ಜತೆಗೆ ಅಭಿನಯಕ್ಕೆ ಒತ್ತು ಇರುವ ಪಾತ್ರಗಳಲ್ಲಿ, ನಾಯಕಿ ಪ್ರಧಾನ ಸಿನಿಮಾಗಳಲ್ಲಿ ಕಾಣಿಸಿಕೊಂಡು ಪ್ರೇಕ್ಷಕರ ಜತೆಗೆ ವಿಮರ್ಶಕರ ಗಮನ ಸೆಳೆದಿದ್ದಾರೆ. ಅಲ್ಲದೆ ಮನೋಜ್ಞ ಅಭಿನಯದ ಮೂಲಕ ರಾಷ್ಟ್ರ ಪ್ರಶಸ್ತಿಯನ್ನೂ ಮುಡಿಗೇರಿಸಿಕೊಂಡಿದ್ದಾರೆ. ಆಗಾಗ ವಿವಾದಾತ್ಮಕ ಹೇಳಿಕೆ ನೀಡುವ ಮೂಲಕ ಹಲವರ ಕೆಂಗಣ್ಣಿಗೆ ಗುರಿಯಾಗುತ್ತಾರಾದರೂ ಅವರ ಅಭಿನಯಕ್ಕೆ ಎಲ್ಲರೂ ಪೂರ್ಣಾಂಕ ನೀಡುತ್ತಾರೆ. ಹೀಗೆ ಬಾಲಿವುಡ್‌ನಲ್ಲಿ ತನ್ನದೇ ಛಾಪು ಮೂಡಿಸಿರುವ ಕಂಗನಾಗೆ ಇತ್ತೀಚಿನ ದಿನಗಳಲ್ಲಿ ಸೋಲು ಬೆಂಬಿಡದೆ ಕಾಡುತ್ತಿದೆ. ಇತ್ತೀಚೆಗೆ ರಿಲೀಸ್ ಆಗಿರುವ ಅವರ ಎಮರ್ಜೆನ್ಸಿ ಚಿತ್ರ ಕೂಡ ಬಾಕ್ಸ್ ಆಫೀಸ್‌ನಲ್ಲಿ ಮಂಕಾಗಿದ್ದು, ಗೆಲುವು ಮತ್ತೊಮ್ಮೆ ಮರೀಚಿಕೆಯಾದಂತಾಗಿದೆ ಹಾಗಾದರೆ ಎಮರ್ಜೆನ್ಸಿ ಎಡವಿದ್ದೆಲ್ಲಿ? ಹಲವು ಬಾರಿ ಬಿಡುಗಡೆ ಮುಂದೂಡಿದ್ದೇ ಮುಳುವಾಯ್ತಾ? ಮಾಜಿ ಪ್ರದಾನಿ ಇಂದಿರಾ ಗಾಂಧಿ ಅವರ ಜೀವನ ಚರಿತ್ರೆ ಆಗಿರುವ ಕಾರಣ ಒಂದು ವರ್ಗದ ಪ್ರೇಕ್ಷಕರ ಕೆಂಗಣ್ಣಿಗೆ ಗುರಿಯಾಯ್ತಾ? ಇಲ್ಲಿದೆ ಈ ಎಲ್ಲ ಪ್ರಶ್ನೆಗಳಿಗೆ ಉತ್ತರ.

ಎಮರ್ಜೆನ್ಸಿ ಚಿತ್ರಕ್ಕೆ ಕಂಗನಾ ನಾಯಕಿ ಮಾತ್ರವಲ್ಲ ನಿರ್ದೇಶಕಿ, ನಿರ್ಮಾಪಕಿಯೂ ಹೌದು. ಮೊದಲ ಬಾರಿಗೆ ಅವರು ಪೂರ್ಣ ಪ್ರಮಾಣದ ನಿರ್ದೇಶಕಿಯಾಗಿರುವ ಸಿನಿಮಾ ಇದು. ಅಲ್ಲದೆ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಕಥೆಯನ್ನು ಆಯ್ದುಕೊಂಡ ಕಾರಣಕ್ಕೆ ಈ ಚಿತ್ರ ಗಮನ ಸೆಳೆದಿತ್ತು. ಜತೆಗೆ




ಕಂಗನಾ ಅವರ ಲುಕ್ ಥೇಟ್ ಇಂದಿರಾ ಗಾಂಧಿ ಅವರನ್ನು ಹೋಲುತ್ತಿದ್ದರಿಂದ ನಿರೀಕ್ಷೆ ಗರಿಗೆದರಿತ್ತು. ಮಾತ್ರವಲ್ಲ ರಿಲೀಸ್ ಆದ ಟೀಸರ್ ಮತ್ತು ಟ್ರೈಲರ್ ಹಲವರನ್ನು ಆಕರ್ಷಿಸಿತ್ತು. ಹೀಗಾಗಿ ಈ ಬಾರಿ ಕಂಗನಾಗೆ ಗೆಲುವು ಖಚಿತ ಎನ್ನುವ ಮಾತುಗಳೂ ಕೇಳಿ ಬಂದಿದ್ದವು. ಆದರೆ ಇದೀಗ ಈ ನಿರೀಕ್ಷೆಗಳೆಲ್ಲ ತಲೆ ಕೆಳಗಾಗಿದೆ.

## ಹಿಜ್ಬುಲ್ಲಾ ಕಮಾಂಡರ್ 'ಶೇಖ್ ಮುಹಮ್ಮದ್ ಅಲಿ ಹಮ್ಮದಿ ಗುಂಡಿಕ್ಕಿ ಹತ್ಯೆ

ಹಿಜ್ಬುಲ್ಲಾ ಕಮಾಂಡರ್ ಶೇಖ್ ಮುಹಮ್ಮದ್ ಅಲಿ ಹಮ್ಮದಿಯನ್ನ ಮಂಗಳವಾರ ರಾತ್ರಿ ಗುಂಡಿಕ್ಕಿ ಕೊಲ್ಲಲಾಗಿದೆ ಎಂದು ಲೆಬನಾನ್ ಮಾಧ್ಯಮಗಳು ವರದಿ ಮಾಡಿವೆ. ಹಿಜ್ಬುಲ್ಲಾದ ಪಶ್ಚಿಮ ಅಲ್-ಬಕಾ ಪ್ರದೇಶದ ಕಮಾಂಡರ್ ಆಗಿ ಸೇವೆ ಸಲ್ಲಿಸುತ್ತಿದ್ದ ಹಮ್ಮದಿಯನ್ನ ಎರಡು ವಾಹನಗಳಲ್ಲಿ ಬಂದ ದಾಳಿಕೋರರು ಗುಂಡಿಕ್ಕಿ ಕೊಂದಿದ್ದಾರೆ ಎಂದು ಲೆಬನಾನ್ ಪತ್ರಿಕೆ ಅಲ್-ಅಖ್ಬರ್ ವರದಿ ಮಾಡಿದೆ. ಹಮ್ಮದಿ ಎಫ್ ಬಿಐನ ಮೋಸ್ಟ್ ವಾಂಟೆಡ್ ಪಟ್ಟಿಯಲ್ಲಿದ್ದ. ಆಸ್ಪತ್ರೆಗೆ ಸಾಗಿಸಲಾಯಿತಾದರೂ, ದಾಳಿಯ ಸ್ವಲ್ಪ ಸಮಯದ ನಂತರ ಹಮ್ಮದಿ ಮೃತಪಟ್ಟಿರುವುದಾಗಿ ಘೋಷಿಸಲಾಯಿತು. ಹಮ್ಮದಿ ಹತ್ಯೆಯ ಹಿಂದಿನ ಉದ್ದೇಶ ಇನ್ನೂ ಸ್ಪಷ್ಟವಾಗಿಲ್ಲ. ದೀರ್ಘಕಾಲದ ಕೌಟುಂಬಿಕ ಕಲಹದಿಂದ ಈ ಕೊಲೆ ನಡೆದಿರಬಹುದು ಎಂದು ಸ್ಥಳೀಯ ವರದಿಗಳು ಊಹಿಸಿದ್ದರೂ, ಯಾವುದೇ ಅಧಿಕೃತ ಹೇಳಿಕೆಯು ಈ ಸಿದ್ಧಾಂತವನ್ನು ದೃಢಪಡಿಸಿಲ್ಲ.

## ಜಲಗಾಂವ್ ರೈಲು ದುರಂತದ ಕಾರಣ ಬಹಿರಂಗ

**ಮುಂಬೈ:** ಮಹಾರಾಷ್ಟ್ರದ ಜಲಗಾಂವ್‌ನ ಪರಂದಾ ರೈಲು ನಿಲ್ದಾಣದ ಬಳಿ ಬುಧವಾರ (ಜ. 22) ನಡೆದ ಭೀಕರ ರೈಲು ದುರಂತದಲ್ಲಿ 11ಕ್ಕೂ ಹೆಚ್ಚು ಮಂದಿ ಬಲಿಯಾಗಿದ್ದು, ಹಲವು ಮಂದಿ ಗಾಯಗೊಂಡಿದ್ದಾರೆ.



ಲಖನೌ-ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್ ಪುಷ್ಪಕ್ ಎಕ್ಸ್‌ಪ್ರೆಸ್‌ನಿಂದ ಜಿಗಿದ ಪ್ರಯಾಣಿಕರಿಗೆ ಇನ್ನೊಂದು ಕಡೆಯಿಂದ ಬಂದ ಕರ್ನಾಟಕ ಎಕ್ಸ್‌ಪ್ರೆಸ್ ರೈಲು ಡಿಕ್ಕಿ ಹೊಡೆದು ಈ ದುರಂತ ಸಂಭವಿಸಿದೆ. ಬೆಂಕಿ ವದಂತಿ ಕಾರಣದಿಂದ ಪ್ರಯಾಣಿಕರು ಹಳಿಗೆ ಜಿಗಿದಿದ್ದೇ ಇಷ್ಟೊಂದು ಪ್ರಮಾಣದ ಜೀವ ಹಾನಿಗೆ ಕಾರಣ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಂಕಿ ಕಾಣಿಸಿಕೊಂಡಿದೆ ಎಂಬ ವದಂತಿಯಿಂದಾಗಿ ಪುಷ್ಪಕ್ ಎಕ್ಸ್‌ಪ್ರೆಸ್ ರೈಲಿನಿಂದ ಜಿಗಿದ ಪ್ರಯಾಣಿಕರಿಗೆ ಕರ್ನಾಟಕ ಎಕ್ಸ್‌ಪ್ರೆಸ್ ರೈಲು ಡಿಕ್ಕಿ ಹೊಡೆದಿದ್ದೇ ದುರಂತಕ್ಕೆ ಕಾರಣ?? ಎಂದು ಕಮಿಷನರ್ ಆಯುಷ್ ಪ್ರಸಾದ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಲಗಾಂವ್ ಪರಂದಾ ನಿಲ್ದಾಣದಲ್ಲಿ 2 ರೈಲುಗಳು ಹಾದು ಹೋಗುವಾಗ ಈ ದುರಂತ ಸಂಭವಿಸಿದೆ. ಬೆಂಕಿಯ ವದಂತಿ ಕಾರಣಕ್ಕೆ ಯಾರೋ ಚೈನ್ ಎಳೆದು ಹಲವು ಮಂದಿ ಹೊರಗೆ ಜಿಗಿದಿರುವುದು ದುರಂತಕ್ಕೆ ಕಾರಣ. ಚಿಕಿತ್ಸೆಗಾಗಿ 3 ಆಸ್ಪತ್ರೆಗಳನ್ನು ಸಕ್ರಿಯಗೊಳಿಸಲಾಗಿದೆ. ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅವರು ಹೇಳಿದ್ದಾರೆ.

50,000 ಕ್ಕೂ ಹೆಚ್ಚು ಜನರ ಸ್ಥಳಾಂತರಕ್ಕೆ ಆದೇಶ

## ಲಾಸ್ ಏಂಜಲೀಸ್‌ನಲ್ಲಿ ಕಾಡ್ಗಿಚ್ಚು



ಹ್ಯೂಸ್ ಬೆಂಕಿಯು ಬೆಳಗಿನ ಜಾವದಲ್ಲಿ ಆವರಿಸಿದ್ದು ಆರು ಗಂಟೆಗಳಲ್ಲಿ ಸುಮಾರು 15 ಚದರ ಮೈಲುಗಳಲ್ಲಿ (39 ಚದರ ಕಿಲೋಮೀಟರ್) ಮರಗಳು ಮತ್ತು ಪೊದೆಗಳನ್ನು ಸುಟ್ಟುಹಾಕಿದೆ, ವಿನಾಶಕಾರಿ ಈಟನ್ ಮತ್ತು ಪಾಲಿಸೇಡ್ ಬೆಂಕಿಯಿಂದ ಸುಮಾರು 40 ಮೈಲುಗಳು (64 ಕಿಲೋಮೀಟರ್) ದೂರದಲ್ಲಿರುವ ಜನಪ್ರಿಯ ಮನರಂಜನಾ ಪ್ರದೇಶವಾಗಿದೆ.

**ಕ್ಯಾಸ್ಟೈಕ್ (ಕ್ಯಾಲಿಫೋರ್ನಿಯಾ):** ಲಾಸ್ ಏಂಜಲೀಸ್‌ನ ಉತ್ತರಕ್ಕೆ ಕಡಿದಾದ ಪರ್ವತಗಳಲ್ಲಿ ಬೃಹತ್ ಮತ್ತು ವೇಗವಾಗಿ ಕಾಡ್ಗಿಚ್ಚು ವ್ಯಾಪಿಸಿದ್ದು, 50,000 ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸುವ ಆದೇಶಗಳು ಮತ್ತು ಎಚ್ಚರಿಕೆಗಳು ಬಂದಿವೆ. ಭೂಮಿ ಮತ್ತು ವಾಯುವಿನ ಮೇಲೆ ಕಾಡ್ಗಿಚ್ಚು ಪ್ರಭಾವ ತೀವ್ರ ಕಾಡುತ್ತಿದೆ ಎಂದು ಅಗ್ನಿಶಾಮಕ ಅಧಿಕಾರಿಗಳು ತಿಳಿಸಿದ್ದಾರೆ.

ಹ್ಯೂಸ್ ಬೆಂಕಿಯು ಬೆಳಗಿನ ಜಾವದಲ್ಲಿ ಆವರಿಸಿದ್ದು ಆರು ಗಂಟೆಗಳಲ್ಲಿ ಸುಮಾರು 15 ಚದರ ಮೈಲುಗಳಲ್ಲಿ (39 ಚದರ ಕಿಲೋಮೀಟರ್) ಮರಗಳು ಮತ್ತು ಪೊದೆಗಳನ್ನು ಸುಟ್ಟುಹಾಕಿದೆ, ವಿನಾಶಕಾರಿ ಈಟನ್ ಮತ್ತು ಪಾಲಿಸೇಡ್ಸ್ ಬೆಂಕಿಯಿಂದ ಸುಮಾರು 40 ಮೈಲುಗಳು (64 ಕಿಲೋಮೀಟರ್) ದೂರದಲ್ಲಿರುವ ಜನಪ್ರಿಯ ಮನರಂಜನಾ ಪ್ರದೇಶವಾಗಿದೆ.

ಈ ಪ್ರದೇಶವು ತೀವ್ರ ಎಚ್ಚರಿಕೆ ಎದುರಿಸುತ್ತಿದ್ದು, ಬೆಂಕಿ ಹೊತ್ತಿಕೊಂಡಾಗ ಗಾಳಿಯು ವೇಗವಾಗಿರಲಿಲ್ಲ, ಇದು ಅಗ್ನಿಶಾಮಕ ವಿಮಾನಗಳು ಹತ್ತಾರು ಸಾವಿರ ಗ್ಯಾಲನ್‌ಗಳಷ್ಟು ಅಗ್ನಿಶಾಮಕ ನಿರೋಧಕವನ್ನು ಸುರಿಯಲು ಅವಕಾಶ ಮಾಡಿಕೊಟ್ಟಿತು. ಇಂದು ನಾವು ಇರುವ ಪರಿಸ್ಥಿತಿಯು 16 ದಿನಗಳ ಹಿಂದೆ ನಾವು ಇದ್ದ ಪರಿಸ್ಥಿತಿಗಿಂತ ಬಹಳ ಭಿನ್ನವಾಗಿದೆ ಎಂದು ಲಾಸ್ ಏಂಜಲೀಸ್ ಕೌಂಟಿ ಅಗ್ನಿಶಾಮಕ ಮುಖ್ಯಸ್ಥ ಆಂಥೋನಿ ಮರ್ರೋನ್ ಹೇಳಿದ್ದಾರೆ.

ಯಾವುದೇ ಮನೆಗಳು ಅಥವಾ ಇತರ ರಚನೆಗಳು ಸುಟ್ಟುಹೋದ ಬಗ್ಗೆ ವರದಿಯಾಗಿಲ್ಲ. ಕ್ಯಾಲಿಫೋರ್ನಿಯಾದ ಕ್ಯಾಸ್ಟೈಕ್‌ನಲ್ಲಿರುವ ಕ್ಯಾಸ್ಟೈಕ್ ಸರೋವರದ ಉದ್ದಕ್ಕೂ ಹ್ಯೂಸ್ ಬೆಂಕಿಯಿಂದ ಉಂಟಾದ ಜ್ವಾಲೆಗಳನ್ನು ಫೈಟರ್‌ಗಳು ಮೇಲ್ವಿಚಾರಣೆ ಮಾಡುತ್ತಿದ್ದಾರೆ.

'ಚಂಡಮಾರುತ-ಬಲ' ಗಾಳಿಯು ಮತ್ತೆ ಬಲಗೊಳ್ಳುತ್ತಿದ್ದಂತೆ ದಕ್ಷಿಣ ಕ್ಯಾಲಿಫೋರ್ನಿಯಾ ಹೊಸ ಕಾಡ್ಗಿಚ್ಚಿನ ಎಚ್ಚರಿಕೆಗಳನ್ನು ಎದುರಿಸುತ್ತಿದೆ. 31,000 ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲು ಆದೇಶಿಸಲಾಗಿದೆ. ಇನ್ನೂ 23,000 ಜನರನ್ನು ಸ್ಥಳಾಂತರಿಸುವ ಎಚ್ಚರಿಕೆ ನೀಡಲಾಗಿದೆ ಎಂದು ಲಾಸ್ ಏಂಜಲೀಸ್ ಕೌಂಟಿ ಶೆರಿಫ್ ರಾಬರ್ಟ್ ಲೂನಾ ಹೇಳಿದ್ದಾರೆ.

ಜನವರಿ 7 ರಂದು ಬೆಂಕಿ ಹೊತ್ತಿ ಉರಿದು ಕನಿಷ್ಠ 28 ಜನರು ಮೃತಪಟ್ಟು 14,000 ಕ್ಕೂ ಹೆಚ್ಚು ಕಟ್ಟಡಗಳು, ರಚನೆಗಳು ನಾಶವಾಗಿದ್ದವು.

## ಜಮ್ಮುವಿನಲ್ಲಿ ಒಂದೇ ಗ್ರಾಮದ 17 ಜನರ ನಿಗೂಢ ಸಾವು

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರ: ಕಳೆದ ಭಾನುವಾರ ಸಂಜೆ ಬಾಲಕಿಯೊಬ್ಬಳ ಸಾವಿನೊಂದಿಗೆ ರಾಜೌರಿಯ ಬಾದಲ್ ಗ್ರಾಮದಲ್ಲಿ ನಿಗೂಢ ಕಾಯಿಲೆಯಿಂದ ಮೃತಪಟ್ಟವರ ಸಂಖ್ಯೆ 17ಕ್ಕೆ ಏರಿದೆ. ಈ ಕುರಿತು ಜಮ್ಮು ಜಿಎಂಸಿ ಆಸ್ಪತ್ರೆ ಮುಖ್ಯಸ್ಥ ಡಾ. ಅಶುತೋಷ್ ಗುಪ್ತಾ ಮಾತನಾಡಿ, ಮೊಹಮ್ಮದ್ ಅವರ ಆರನೇ ಮಗು ಆಸ್ಪತ್ರೆಯಲ್ಲಿ ಮೃತಪಟ್ಟಿದೆ. ಒಂದೇ ಕುಟುಂಬದ ಆರು ಮಕ್ಕಳ ಸಾವು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಕೇಂದ್ರ ಗೃಹ ಇಲಾಖೆ ತಂಡವು ಜಮ್ಮುವಿಗೆ ಭೇಟಿ ನೀಡಿತ್ತು. ನಾವು ಅವರಿಗೆ ಬುಧಾಲ್ ಸಾವುಗಳ ಕುರಿತು ಮಾಹಿತಿಯನ್ನು ನೀಡಿದ್ದೇವೆ. ನಿಗೂಢ ಸಾವಿನ ಕಾರಣವನ್ನು ತಿಳಿಯಲು ತಂಡವು ಭಾನುವಾರ ಬುಧಾಲ್ ರಾಜೌರಿ ಪ್ರದೇಶಕ್ಕೆ ಭೇಟಿ ನೀಡಿತ್ತು ಎಂದು ಮಾಹಿತಿ ನೀಡಿದ್ದಾರೆ. ಆರು ದಿನಗಳ ಹಿಂದೆ, ಮೊಹಮ್ಮದ್ ಅಸ್ಲಂ ಅವರ ಐವರು ಮಕ್ಕಳು ನಿಗೂಢ ಕಾಯಿಲೆಯಿಂದ ಮೃತಪಟ್ಟಿದ್ದರು ಮತ್ತು ಆರನೇ ಮಗು ಜಮ್ಮುವಿನ ಎಸ್‌ಎಂಜಿಎಸ್ ಆಸ್ಪತ್ರೆಯಲ್ಲಿ ವೆಂಟಿಲೇಟರ್‌ನಲ್ಲಿ ಜೀವನ್ಮರಣದ ಹೋರಾಟ ನಡೆಸಿ ಸೋಮವಾರ ಅಸುನೀಗಿತ್ತು. ಈ ಮೂಲಕ ಮೊಹಮ್ಮದ್ ಅಸ್ಲಾಂ, ನಿಗೂಢ ಕಾಯಿಲೆಯಿಂದ ತನ್ನ ಎಲ್ಲ ಮಕ್ಕಳನ್ನು ಕಳೆದುಕೊಂಡು ಅನಾಥರಾಗಿದ್ದಾರೆ. ಅಸ್ಲಾಂ ಅವರು ಕಳೆದ ಒಂದು ವಾರದಲ್ಲಿ ನಾಲ್ವರು ಹೆಣ್ಣುಮಕ್ಕಳು, ಇಬ್ಬರು ಗಂಡು ಮಕ್ಕಳು ಮತ್ತು ಚಿಕ್ಕಪ್ಪ ಮತ್ತು ಚಿಕ್ಕಮ್ಮನನ್ನು ಕಳೆದುಕೊಂಡಿದ್ದಾರೆ. ಜಮ್ಮುವಿನ ರಾಜೌರಿ ಜಿಲ್ಲೆಯಲ್ಲಿ ಕಳೆದ ಆರು ವಾರಗಳಲ್ಲಿ 17 ಜನರು ಮೃತಪಟ್ಟಿದ್ದಾರೆ. ಈ 3 ಘಟನೆಗಳಲ್ಲಿ ಸಂಭವಿಸಿದ ಸಾವುಗಳ ಹಿಂದಿನ ಕಾರಣಗಳನ್ನು ಪತ್ತೆ ಮಾಡಲು ನಿಗೂಢ ರೋಗ ಪೀಡಿತ ಗ್ರಾಮಕ್ಕೆ ಭೇಟಿ ನೀಡಲು ಗೃಹ ಸಚಿವಾಲಯದ ನೇತೃತ್ವದ ತಂಡವನ್ನು ರಚಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಶನಿವಾರವೇ ಸೂಚನೆ ಕೊಟ್ಟಿದ್ದರು.

## ಭಾರತ ರತ್ನಕ್ಕೆ ಹೆಸರು ಸೂಚನೆ: ರತನ್ ಟಾಟಾ, ಡಾ.ಮನಮೋಹನ್ ಸಿಂಗ್ ಮುಂಚೂಣಿಯಲ್ಲಿ...

**ನವದೆಹಲಿ:** ಭಾರತ ದೇಶದ ಅತ್ಯುನ್ನತ ನಾಗರಿಕ ಗೌರವ ಭಾರತ ರತ್ನವನ್ನು ಈ ವರ್ಷ ಯಾರಿಗೆ ಸರ್ಕಾರ ನೀಡಬಹುದು ಎಂಬ ಊಹಾಪೋಹಗಳು ಹೆಚ್ಚಾಗುತ್ತಿರುವ ಸಮಯ ಇದು. ಈ ವರ್ಷದ ಪ್ರಶಸ್ತಿ ಪುರಸ್ಕೃತರಲ್ಲಿ ಉನ್ನತ ರಾಜಕಾರಣಿಗಳು ಇರಬಹುದು ಎಂದು ಹೇಳಲಾಗುತ್ತಿದ್ದು, ಗಣರಾಜ್ಯೋತ್ಸವದಂದು ಬಿಡುಗಡೆಯಾಗುವ ಪಟ್ಟಿಯಲ್ಲಿ ಅಚ್ಚರಿಯ ಅಂಶವೂ ಇರಬಹುದು. ಎಲ್ಲಾ ಕ್ಷೇತ್ರಗಳ ಹೆಸರುಗಳು ಸುಳಿದಾಡುತ್ತಿದ್ದು, ಕೈಗಾರಿಕೋದ್ಯಮಿ ರತನ್ ಟಾಟಾ ಮತ್ತು ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಮರಣೋತ್ತರವಾಗಿ ಅತ್ಯಂತ ಪ್ರತಿಷ್ಠಿತ ಪ್ರಶಸ್ತಿಗೆ ಪ್ರಾಥಮಿಕ ಆಯ್ಕೆ ಪಟ್ಟಿಯಲ್ಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಅಕ್ಟೋಬರ್‌ನಲ್ಲಿ ರತನ್ ಟಾಟಾ ನಿಧನ ನಂತರ ಅವರಿಗೆ ಭಾರತ ರತ್ನ ನೀಡುವ ಬೇಡಿಕೆ ಹೆಚ್ಚಾಯಿತು. ಮಹಾರಾಷ್ಟ್ರ ಸಚಿವ ಸಂಪುಟ ಕೂಡ ಇದನ್ನು ಶಿಫಾರಸು ಮಾಡುವ ನಿರ್ಣಯವನ್ನು ಅಂಗೀಕರಿಸಿತು. ಡಿಸೆಂಬರ್ 26 ರಂದು ನಿಧನರಾದ ಡಾ.ಮನಮೋಹನ್ ಸಿಂಗ್ ಅವರನ್ನು ಗೌರವಿಸುವ ಬೇಡಿಕೆ ಕಾಂಗ್ರೆಸ್ ಮತ್ತು ಕೆಲವು ಎನ್‌ಡಿಎ ಪಾಲುದಾರರಿಂದ ಬಂದಿತು. ಸರ್ಕಾರವು ತನ್ನ ಸಂಪರ್ಕದಲ್ಲಿ ಅವರ ಸ್ಮಾರಕವನ್ನು ನಿರ್ಮಿಸಲು ರಾಷ್ಟ್ರೀಯ ಸ್ಮೃತಿ ಸ್ಥಳದಲ್ಲಿ ಎರಡು ಸ್ಥಳಗಳನ್ನು ಸೂಚಿಸಿತು. ದಲಿತ ಐಕಾನ್ ಮತ್ತು ಬಿಎಸ್‌ಪಿ ಸಂಸ್ಥಾಪಕ ಕಾನ್ಶಿ ರಾಮ್ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ ಎಂದು ಹೇಳಲಾಗುತ್ತಿದೆ. ಸಮಾಜವಾದಿ ಪಕ್ಷದ ಮುಲಾಯಂ ಸಿಂಗ್ ಯಾದವ್, ಹಿಂದುತ್ವ ಸಿದ್ಧಾಂತವಾದಿ ವಿ ಡಿ ಸಾವರ್ಕರ್, ಶಿಕ್ಷಣ ತಜ್ಞರಾದ ಜ್ಯೋತಿರಾವ್ ಫುಲೆ ಮತ್ತು ಸಾವಿತ್ರಿಬಾಯಿ ಫುಲೆ, ಬಿಹಾರದ ಮೊದಲ ಮುಖ್ಯಮಂತ್ರಿ ಶ್ರೀ ಕೃಷ್ಣ ಸಿಂಗ್, ಮಂಡಲ ಆಯೋಗದ ವರದಿಯಲ್ಲಿ ಸಾಮಾಜಿಕ ಸ್ತರವನ್ನು ಉತ್ತೇಜಿಸಿದ್ದ ಬಿ ಪಿ ಮಂಡಲ್ ಮತ್ತು ಒಡಿಶಾದ ಮಾಜಿ ಮುಖ್ಯಮಂತ್ರಿ ಬಿಜು ಪಟ್ನಾಯಕ್ ಸೇರಿದಂತೆ ಹಲವು ಹೆಸರುಗಳು ಕೇಳಿಬರುತ್ತಿವೆ. ಗಣರಾಜ್ಯೋತ್ಸವದ ಮೊದಲು ಅಥವಾ ಕಳೆದ ವರ್ಷದಂತೆ ಫೆಬ್ರವರಿ 5 ರ ನಂತರ ದೆಹಲಿ ವಿಧಾನಸಭಾ ಚುನಾವಣೆ ನಡೆಯಲಿರುವುದರಿಂದ ನಂತರ ಭಾರತ ರತ್ನ ಹೆಸರುಗಳನ್ನು ಕೇಂದ್ರ ಸರ್ಕಾರ ಪ್ರಕಟಿಸಬಹುದು ಎಂದು ಹೇಳಲಾಗುತ್ತಿದೆ.

## ಹಾಳಾದ, ತುಕ್ಕು ಹಿಡಿದ ಸ್ಥಿತಿಯಲ್ಲಿ ಭಾರತ-ಬಾಂಗ್ಲಾ ಗಡಿ ಬೇಲಿ

**ನವದೆಹಲಿ:** ಭಾರತ-ಬಾಂಗ್ಲಾದೇಶ ಗಡಿಯುದ್ದಕ್ಕೂ ಬಹುತೇಕ ಪ್ರದೇಶಗಳಲ್ಲಿನ ಗಡಿ ಬೇಲಿಯು ಹಾಳಾದ ಮತ್ತು ತುಕ್ಕು ಹಿಡಿದ ಸ್ಥಿತಿಯಲ್ಲಿದ್ದು, ಅಗತ್ಯವಿರುವ ಕಡೆಗಳಲ್ಲಿ ಮಣ್ಣು ತುಂಬಿಸಿ ತಕ್ಷಣವೇ ಗಡಿಬೇಲಿಗಳನ್ನು ದುರಸ್ತಿಗೊಳಿಸುವುದು ಅಗತ್ಯವಾಗಿದೆ ಎಂದು ಗಡಿ ಭದ್ರತಾ ಪಡೆ (ಬಿಎಸ್‌ಎಫ್) ನಡೆಸಿದ ಆಂತರಿಕ ಮೌಲ್ಯಮಾಪನ ಸಮೀಕ್ಷೆ ಹೇಳಿದೆ. ಭಾರತ - ಬಾಂಗ್ಲಾದೇಶ ಮಧ್ಯದ ಸಂಪೂರ್ಣ ಗಡಿಗೆ ಬೇಲಿ ಹಾಕಲು ಕೇಂದ್ರ ಸರ್ಕಾರ ಯತ್ನಿಸುತ್ತಿರುವ ಮಧ್ಯದಲ್ಲೇ ಇಂಥದೊಂದು ವರದಿ ಬಂದಿರುವುದು ಗಮನಾರ್ಹ. ಗಡಿಯಾಚೆಯಿಂದ ಅಕ್ರಮ ವಲಸೆ ಮತ್ತು ರಾಷ್ಟ್ರ ವಿರೋಧಿ ಚಟುವಟಿಕೆಗಳು ಸೇರಿದಂತೆ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ದೃಷ್ಟಿಯಿಂದ ಹಂತ ಹಂತವಾಗಿ ಫ್ಲಡ್ ಲೈಟ್‌ಗಳೊಂದಿಗೆ ಗಡಿ ಬೇಲಿ ನಿರ್ಮಾಣಕ್ಕೆ ಭಾರತ ಸರ್ಕಾರ ಈಗಾಗಲೇ ಅನುಮತಿ ನೀಡಿದೆ. ಭಾರತ-ಬಾಂಗ್ಲಾದೇಶ ಗಡಿಯ ಒಟ್ಟು ಉದ್ದ 4096.7 ಕಿ.ಮೀ ಆಗಿದ್ದು, ಇದರಲ್ಲಿ 3196.705 ಕಿ.ಮೀ ಗಡಿಗೆ ಭೌತಿಕ ಬೇಲಿ ಹಾಕಲಾಗಿದೆ. ಹಲವಾರು ಕಡೆಗಳಲ್ಲಿ ಮುಳ್ಳು ತಂತಿ ಸಡಿಲವಾಗಿದ್ದು, ಅನೇಕ ಸ್ಥಳಗಳಲ್ಲಿ ಮುರಿದು ಹೋಗಿದೆ. ಪಿಕೆಟ್, ಸ್ಪೈಕ್ ಗಳು, ಕನ್ಸರ್ಟಿನಾ ಕಾಯಿಲ್, ಮುಳ್ಳು ತಂತಿಯಂತಹ ಬೇಲಿಗಳು ತುಕ್ಕು ಹಿಡಿದಿವೆ ಮತ್ತು ಪಿಕೆಟ್‌ನ ತಳಭಾಗಕ್ಕೆ ಸರಿಯಾಗಿ ಕಾಂಕ್ರೀಟ್ ಹಾಕಲಾಗಿಲ್ಲ. ಎರಡೂ ಬದಿಗಳ ಕೆಲವು ಭಾಗಗಳಲ್ಲಿ ಮುಳ್ಳು ತಂತಿ ಸಡಿಲವಾಗಿದೆ ಮತ್ತು ಅದನ್ನು ಬಲಪಡಿಸುವ ಅಗತ್ಯವಿದೆ ಎಂದು ವರದಿ ಹೇಳಿದೆ. ಗೃಹ ಸಚಿವಾಲಯಕ್ಕೆ ಸಲ್ಲಿಸಲಾಗಿರುವ ಈ ವರದಿಯ ಪ್ರತಿ ಈಟಿವಿ ಭಾರತ್ ಗೆ ಲಭ್ಯವಾಗಿದೆ.



## ಕ್ವಾಡ್ ರಾಷ್ಟ್ರಗಳ ವಿದೇಶಾಂಗ ಮಂತ್ರಿಗಳ ಜೊತೆ ಜೈಶಂಕರ್ ಮಾತುಕತೆ

**ವಾಷಿಂಗ್ಟನ್:** ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪದಗ್ರಹಣ ಕಾರ್ಯಕ್ರಮಕ್ಕೆ ತೆರಳಿರುವ ಭಾರತದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಕ್ವಾಡ್



ಸಭೆಯಲ್ಲಿ ಭಾಗಿಯಾದರು. ಇದು ಟ್ರಂಪ್ ಅಧ್ಯಕ್ಷರಾದ ಬಳಿಕದ ಮೊದಲ ಸಭೆಯಾಗಿದೆ. ಸಭೆಯಲ್ಲಿ ಭಾರತದ ಜೊತೆಗೆ ಆಸ್ಟ್ರೇಲಿಯಾ, ಜಪಾನ್ ಮತ್ತು ಅಮೆರಿಕದ ವಿದೇಶಾಂಗ ಸಚಿವರು ಭಾಗಿಯಾಗಿದ್ದರು. ಇದಾದ ಬಳಿಕ ಹೊಸದಾಗಿ ನೇಮಕಗೊಂಡ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರ ಮೈಕ್ ವಾಲ್ಟ್ಜ ಅವರೊಂದಿಗೆ ಪ್ರತ್ಯೇಕ ಸಭೆ ನಡೆಸಿದರು. ಕ್ವಾಡ್, ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಗುರಿಯನ್ನು ಹೊಂದಿರುವ ನಾಲ್ಕು (ಭಾರತ, ಅಮೆರಿಕ, ಜಪಾನ್, ಆಸ್ಟ್ರೇಲಿಯಾ) ದೇಶಗಳ ಗುಂಪಾಗಿದೆ. ಟ್ರಂಪ್ ಅಧಿಕಾರ ವಹಿಸಿಕೊಂಡ ಕೆಲವೇ ಗಂಟೆಗಳಲ್ಲಿ ಕ್ವಾಡ್‌ನ ವಿದೇಶಾಂಗ ಸಚಿವರ ಸಭೆ ನಡೆದಿರುವುದು ಗಮನಾರ್ಹ. ಸಭೆಯ ಬಳಿಕ ಮಾತನಾಡಿದ ಅಮೆರಿಕದ ವಿದೇಶಾಂಗ ಸಚಿವ ಮಾರ್ಕೊ ರೊಬಿಯೊ, ಈ ಸಭೆಯು ಕ್ವಾಡ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ನೀತಿಗೆ ಹೆಚ್ಚಿನ ಆದ್ಯತೆ ನೀಡುತ್ತದೆ. ಮುಕ್ತ, ಸ್ಥಿರ ಮತ್ತು ಸಮೃದ್ಧ ಇಂಡೋ- ಪೆಸಿಫಿಕ್ ರಾಷ್ಟ್ರಗಳ ನಿರ್ಮಾಣ ಮತ್ತು ಮಿತ್ರ ರಾಷ್ಟ್ರಗಳ ಜೊತೆಗೆ ಉತ್ತಮ ಬಾಂಧವ್ಯದ ಕುರಿತು ಚರ್ಚಿಸಲಾಯಿತು ಎಂದರು.

## 500 ವಿದ್ಯಾರ್ಥಿನಿಯರಿಗೆ ಅಮೆಜಾನ್ ವಿದ್ಯಾರ್ಥಿವೇತನ ವಿತರಣೆ

ಅಮೆಜಾನ್ ಫ್ಯೂಚರ್ ಇಂಜಿನಿಯರ್ ಕಾರ್ಯಕ್ರಮದ 'ಕೆರಿಯರ್ಸ್ ಆಫ್ ದಿ ಫ್ಯೂಚರ್' ಯೋಜನೆಯ ಮೊದಲ ಆವೃತ್ತಿಯಲ್ಲಿ 500ಕ್ಕೂ ಹೆಚ್ಚು ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನವನ್ನು ಘೋಷಿಸಿದೆ.

ತಂತ್ರಜ್ಞಾನ ಕ್ಷೇತ್ರದಲ್ಲಿ ಯುವತಿಯರು ಮುಂದೆ ಬರುವಂತೆ ಮಾಡಲು ಅಮೆಜಾನ್ ಸಂಸ್ಥೆಯು ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಅಥವಾ ಅದಕ್ಕೆ ಸಂಬಂಧಿತ ಕ್ಷೇತ್ರಗಳಲ್ಲಿ ಪದವಿಗಳನ್ನು ಪಡೆಯುತ್ತಿರುವ 500 ಮಂದಿ ವಿದ್ಯಾರ್ಥಿನಿಯರಿಗೆ ಮೆರಿಟ್ ಆಧಾರದಲ್ಲಿ ನಾಲ್ಕು ವರ್ಷ ಅವಧಿಯಲ್ಲಿ ತಲಾ 2 ಲಕ್ಷ ರೂಪಾಯಿ ಮೌಲ್ಯದ ವಿದ್ಯಾರ್ಥಿವೇತನವನ್ನು ನೀಡುತ್ತಿದೆ. ಟೆಕ್ ಕ್ಷೇತ್ರದಲ್ಲಿ ಇರುವ ಲಿಂಗ ಅಸಮಾನತೆಯನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿರುವ ಈ ಯೋಜನೆಯು ಹಣಕಾಸು ಸಹಾಯ ಒದಗಿಸುವುದರ ಜೊತೆಗೆ ವಿದ್ಯಾರ್ಥಿನಿಯರಿಗೆ ಸಮಗ್ರ ಬೆಂಬಲವನ್ನು ಒದಗಿಸುತ್ತದೆ.




ಇಲ್ಲಿಯವರೆಗೆ ಕಂಪನಿಯು ಭಾರತದಲ್ಲಿ 1700ಕ್ಕೂ ಹೆಚ್ಚು ಮೆರಿಟ್ ಆಧಾರಿತ ಇಂಟರ್ನ್‌ಶಿಪ್‌ಗಳನ್ನು ನೀಡಿದೆ ಎಂದು ಅಮೆಜಾನ್ ಇಂಡಿಯಾದ ಕಂಟ್ರಿ ಮ್ಯಾನೇಜರ್ ಸಮೀರ್ ಕುಮಾರ್ ಹೇಳಿದ್ದಾರೆ. ಅಮೆಜಾನ್ ಫ್ಯೂಚರ್ ಇಂಜಿನಿಯರ್ ಕಾರ್ಯಕ್ರಮದ ಮೂಲಕ ಈವರೆಗೆ 3 ಮಿಲಿಯನ್ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಮತ್ತು ಭಾರತದ 8 ರಾಜ್ಯಗಳ 272 ಜಿಲ್ಲೆಗಳಲ್ಲಿ 20,000ಕ್ಕೂ ಹೆಚ್ಚು ಶಿಕ್ಷಕರಿಗೆ ಯಶಸ್ವಿಯಾಗಿ ತರಬೇತಿ ನೀಡಿದೆ. ವಿದ್ಯಾರ್ಥಿಗಳಿಗೆ ನಿರ್ಣಾಯಕ ಕಲಿಕೆಯ ಅವಕಾಶಗಳನ್ನು ಒದಗಿಸಲು ಎಜುಕೇಷನಲ್ ಇನಿಶಿಯೇಟಿವ್ಸ್, ಪೀಪುಲ್, ದಿ ಇನ್ನೋವೇಶನ್ ಸ್ಟೋರಿ, ನವಗುರುಕುಲ ಮತ್ತು ಫೌಂಡೇಶನ್ ಫಾರ್ ಎಕ್ಸಲೆನ್ಸ್, ಆಶಾ ಫಾರ್ ಎಜುಕೇಶನ್, ಕ್ವೆಸ್ಟ್ ಅಲೈನ್ಸ್, ಲೀಡರ್‌ಶಿಪ್ ಫಾರ್ ಇಕ್ವಿಟಿ, ಲರ್ನಿಂಗ್ ಲಿಂಕ್ಸ್ ಫೌಂಡೇಶನ್, ಪೈ ಜಾಮ್ ಫೌಂಡೇಶನ್, ದಿ ಅಮೇರಿಕನ್ ಇಂಡಿಯಾ ಫೌಂಡೇಶನ್, ಕೋಡ್. ಆರ್ಗ್ ಸೇರಿದಂತೆ ಹಲವಾರು ಶಿಕ್ಷಣ-ಕೇಂದ್ರಿತ ಲಾಭರಹಿತ ಸಂಸ್ಥೆಗಳೊಂದಿಗೆ ಅಮೆಜಾನ್ ಪಾಲುದಾರಿಕೆಯನ್ನು ಮಾಡಿದೆ ಎಂದು ವಿವರಿಸಿದೆ.

## ಅಸ್ಸಾಂ ಸರ್ಕಾರಕ್ಕೆ ಸುಪ್ರೀಂ ತರಾಟೆ

**ಹೊಸದಿಲ್ಲಿ:** ವಿದೇಶಿ ಪ್ರಜೆಗಳನ್ನು ಏಕೆ ಬಂಧನ ಕೇಂದ್ರಗಳಲ್ಲಿ ಇರಿಸಲಾಗಿದೆ ಹಾಗೂ ಏಕೆ ಅವರನ್ನು ಆಯಾ ದೇಶಗಳಿಗೆ ಗಡೀಪಾರು ಮಾಡಿಲ್ಲ ಎಂಬ ಬಗ್ಗೆ ವಿವರಣೆ ನೀಡುವಂತೆ ಸುಪ್ರೀಂಕೋರ್ಟ್, ಅಸ್ಸಾಂ ಸರ್ಕಾರಕ್ಕೆ ಆದೇಶ ನೀಡಿದೆ. ಪ್ರಕರಣದ ಮುಂದಿನ ವಿಚಾರಣೆಯ ವೇಳೆ ರಾಜ್ಯದ ಮುಖ್ಯ ಕಾರ್ಯದರ್ಶಿ ಈ ಸಂಬಂಧ ವಿವರಣೆ ನೀಡಲು ವರ್ಚುವಲ್ ವಿಧಾನದ ಮೂಲಕ ಹಾಜರಾಗುವಂತೆ ಸೂಚಿಸಿದೆ. ಮೂಲಭೂತ ಹಕ್ಕುಗಳು ಕೇವಲ ಭಾರತೀಯ ಪ್ರಜೆಗಳಿಗೆ ಮಾತ್ರ ಸೀಮಿತವಲ್ಲ; ವಿದೇಶಿಯರು ಸೇರಿದಂತೆ ಎಲ್ಲ ಜನತೆಗೆ ಇರುವಂಥದ್ದು. ಆದ್ದರಿಂದ ಬಂಧನ ಕೇಂದ್ರಗಳಲಿ ್ಲರುವವರನ್ನು ಆಯಾ ದೇಶಗಳಿಗೆ ಗಡೀಪಾರು ಮಾಡಲು ತಕ್ಷಣದ ಕ್ರಮ ಕೈಗೊಳ್ಳಬೇಕು ಎಂದು ನ್ಯಾಯಮೂರ್ತಿ ಅಭಯ್ ಎಸ್.ಓಕಾ ಮತ್ತು ಎನ್.ಕೋಟೀಶ್ವರ ಸಿಂಗ್ ಅವರನ್ನೊಳಗೊಂಡ ನ್ಯಾಯಪೀಠ ಆದೇಶಿಸಿದೆ. ಅಸ್ಸಾಂನ ಬಂಧನ ಕೇಂದ್ರಗಳು/ ತಾತ್ಕಾಲಿಕ ಶಿಬಿರಗಳಲಿ 270 ಮಂದಿಯನ್ನು ಇರಿಸಿರುವ ಬಗೆಗಿನ ಪ್ರಕರಣದ ಬಗ್ಗೆ ನ್ಯಾಯಪೀಠ ವಿಚಾರಣೆ ನಡೆಸುತ್ತಿದೆ.



ಅನುಸರಣಾ ಅಫಿಡವಿಟ್ ಸಲ್ಲಿಸಲು ಸರ್ಕಾರಕ್ಕೆ ಆರು ವಾರಗಳ ಕಾಲಾವಕಾಶ ನೀಡಲಾಗಿತ್ತು. ತಾತ್ಕಾಲಿಕ ಶಿಬಿರಗಳಲ್ಲಿ 270 ಮಂದಿ ವಿದೇಶಿ ಪ್ರಜೆಗಳನ್ನು ಇರಿಸಿದ ಬಗ್ಗೆ ಸಕಾರಣಗಳನ್ನು ದಾಖಲೆ ರೂಪದಲ್ಲಿ ನೀಡುವುದನ್ನು ನಾವು ನಿರೀಕ್ಷಿಸಿದ್ದೇವೆ. ಜತೆಗೆ ಅವರನ್ನು ಆಯಾ ದೇಶಗಳಿಗೆ ಗಡೀಪಾರು ಮಾಡಲು ಕೈಗೊಳ್ಳಲಾದ ಕ್ರಮಗಳ ಬಗ್ಗೆಯೂ ವಿವರಣೆ ನೀಡಬೇಕು ಎಂದು ಸೂಚಿಸಿತ್ತು.

## ಜನವರಿ 29 ರಂದು ಮೌನಿ ಅಮಾವಾಸ್ಯೆ; ಎರಡನೇ ಶಾಹಿ ಸ್ನಾನಕ್ಕೆ 10 ಕೋಟಿ ಭಕ್ತರ ನಿರೀಕ್ಷೆ; 150 ವಿಶೇಷ ರೈಲು ವ್ಯವಸ್ಥೆ!

**ಮಹಾಕುಂಭ ನಗರ:** ಮೌನಿ ಅಮಾವಾಸ್ಯೆಯ ದಿನಕ್ಕೆ ಅತ್ಯಂತ ಹೆಚ್ಚಿನ ಮಹತ್ವವನ್ನು ನೀಡಲಾಗಿದ್ದು, ಈ ದಿನವನ್ನು ಬಹಳ ಶುಭ ದಿನವೆಂದು ಸಹ ಕರೆಯಲಾಗುತ್ತದೆ. ಜನವರಿ 29 ರಂದು ಮೌನಿ ಅಮಾವಾಸ್ಯೆ ಅಂಗವಾಗಿ ಮಹಾಕುಂಭ ಮೇಳದಲ್ಲಿ ಎರಡನೇ ಶಾಹಿ ಸ್ನಾನ ನಡೆಯಲಿದ್ದು, ಸುಮಾರು 10 ಕೋಟಿ ಭಕ್ತರು ಆಗಮಿಸುವ ನಿರೀಕ್ಷೆಯಿದೆ.

ಇದಕ್ಕಾಗಿ ಪ್ರಯಾಗ್ ರಾಜ್ ರೈಲ್ವೆ ವಿಭಾಗೀಯ 150 ವಿಶೇಷ ರೈಲುಗಳ ಕಾರ್ಯಾಚರಣೆಗೆ ನಿರ್ಧರಿಸಿದೆ. ಈ ರೈಲುಗಳು ಪ್ರಯಾಗ್ ರಾಜ್ ನ ಎಲ್ಲಾ ಒಂಬತ್ತು ನಿಲ್ದಾಣಗಳಿಂದ ಓಡಾಟ ನಡೆಸಲಿದ್ದು, ಮಹಾಕುಂಭ ಮೇಳದ ಭಕ್ತರಿಗೆ ಸುಗಮ ಪ್ರಯಾಣ ಖಾತ್ರಿಪಡಿಸುತ್ತವೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ.

ಮೌನಿ ಅಮವಾಸ್ಯೆ ದಿನವಾದ ಜನವರಿ 29 ರಂದು 150 ಕ್ಕೂ ಹೆಚ್ಚು ವಿಶೇಷ ರೈಲುಗಳು ಕಾರ್ಯನಿರ್ವಹಿಸಲಿವೆ. ಅವುಗಳಲ್ಲಿ ಹೆಚ್ಚಿನವು ಪ್ರಯಾಗರಾಜ್ ಜಂಕ್ಷನ್‌ನಿಂದ ಸಂಚರಿಸಲಿವೆ ಎಂದು ಪ್ರಯಾಗರಾಜ್ ರೈಲ್ವೆ ವಿಭಾಗದ ಹಿರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಅಮಿತ್ ಮಾಳವಿಯಾ ತಿಳಿಸಿದ್ದಾರೆ.

ನಿಗದಿತ ಸಮಯಕ್ಕೆ ಸಾಮಾನ್ಯ ರೈಲುಗಳ ಜೊತೆಗೆ ವಿಭಾಗದ ಇತರ ನಿಲ್ದಾಣಗಳಿಂದ ವಿಶೇಷ ರೈಲುಗಳು ಸಂಚರಿಸಲಿವೆ. ಒಂದೇ ದಿನದಲ್ಲಿ 150 ವಿಶೇಷ ರೈಲುಗಳ ಸಂಚಾರ ಒಂದು ಹೆಗ್ಗುರುತು ಆಗಲಿದೆ. ಈ





ಯೋಜನೆಯೊಂದಿಗೆ ಮೌನಿ ಅಮವಾಸ್ಯೆಯಂದು ಪ್ರತಿ ನಾಲ್ಕು ನಿಮಿಷಗಳಿಗೊಮ್ಮೆ ರೈಲು ಓಡಿಸುವ ಗುರಿಯನ್ನು ಪ್ರಯಾಗ್ ರಾಜ್ ರೈಲ್ವೆ ವಿಭಾಗ ಹೊಂದಿದೆ. ಈ ವ್ಯವಸ್ಥೆಗಳೊಂದಿಗೆ ಮಹಾ ಕುಂಭ ಮೇಳದಲ್ಲಿ ಮೌನಿ ಅಮವಾಸ್ಯೆಯ ಆಚರಣೆಗೆ ಆಗಮಿಸುವ ಭಕ್ತರಿಗೆ ಅನುಕೂಲ ಒದಗಿಸಲು ರೈಲ್ವೆ ವಿಭಾಗ ಸಿದ್ಧವಾಗಿದೆ.

ಮಹಾ ಸಂಕ್ರಾಂತಿ ದಿನದಂದು ಸುಮಾರು 3.5 ಕೋಟಿ ಭಕ್ತರು ಸಂಗಮದಲ್ಲಿ ಸ್ನಾನ ಮಾಡಿದ್ದರು. ಮೊದಲ ಶಾಹಿ ಸ್ನಾನಕ್ಕೆ ಆಗಮಿಸುವ ಭಕ್ತರಿಗೆ ಅನುಕೂಲ ಕಲ್ಪಿಸಲು 101 ಜೋಡಿ ವಿಶೇಷ ರೈಲುಗಳ ಸಂಚಾರ ವ್ಯವಸ್ಥೆ ಮಾಡಲಾಗಿತ್ತು. ಇದೀಗ ಮೌನಿ ಅಮವ್ಯಾಸೆ ದಿನದಿಂದು ಸು?ಮಾರು 10 ಕೋಟಿ ಭಕ್ತರು ಸಂಗಮದಲ್ಲಿ ಸ್ನಾನ ಮಾಡುವ ಸಾಧ್ಯತೆಯಿದೆ ಎಂದು ಮೇಳದ ಅಧಿಕಾರಿಗಳು ಅಂದಾಜಿಸಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ವ್ಹೀಲ್ ಚೇರ್‌ನಲ್ಲಿ ರಶ್ಮಿಕಾ ಮಂದಣ್ಣ

ನಟಿ ರಶ್ಮಿಕಾ ಮಂದಣ್ಣ ಇತ್ತೀಚೆಗೆ ಜಿಮ್‌ನಲ್ಲಿ ಕಾಲಿಗೆ ಪೆಟ್ಟಾದ ಹಿನ್ನೆಲೆ ನಡೆಯಲು ಕಷ್ಟಪಡುತ್ತಿರುವ ಸ್ಥಿತಿಯಲ್ಲಿ ವಿಮಾನ ನಿಲ್ದಾಣದಲ್ಲಿ ಕಾಣಿಸಿಕೊಂಡಿದ್ದಾರೆ. ಕುಂಟುತ್ತಾ ವ್ಹೀಲ್ ಚೇರ್‌ನಲ್ಲಿ ನಟಿ ಕುಳಿತಿರುವ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ.



ವಿಮಾನ ನಿಲ್ದಾಣದಲ್ಲಿ ರಶ್ಮಿಕಾ ಕಾಣಿಸಿಕೊಂಡಿದ್ದು, ಕುಂಟುತ್ತಾ ಕಾರಿನಿಂದ ಇಳಿದು ವ್ಹೀಲ್ ಚೇರ್‌ನಲ್ಲಿ ಕೂರಲು ಹರಸಾಹಸ ಮಾಡುತ್ತಿರುವ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಕಾಲು ನೋವಿನ ನಡುವೆಯೂ ಒಪ್ಪಿಕೊಂಡಿರುವ ಸಿನಿಮಾ ಕೆಲಸ ಮಾಡಲು ಹೈದರಾಬಾದ್‌ನಿಂದ ಮುಂಬೈಗೆ ಅವರು ತೆರಳಿದ್ದಾರೆ. 'ಛಾವಾ' ಸಿನಿಮಾಗೆ ಡಬ್ಬಿಂಗ್ ಮಾಡೋದ್ರಲ್ಲಿ ಅವರು ಬ್ಯುಸಿಯಾಗಿದ್ದಾರೆ. ಅದೇನೇ ಇರಲಿ ಶ್ರೀವಲ್ಲಿ ಬೇಗ ಗುಣಮುಖರಾಗಲಿ ಎಂದು ಫ್ಯಾನ್ಸ್ ಪ್ರಾರ್ಥಿಸುತ್ತಿದ್ದಾರೆ.

ಇತ್ತೀಚೆಗೆ ಜಿಮ್‌ನಲ್ಲಿ ಕಾಲಿಗೆ ಪೆಟ್ಟಾಗಿರುವ ಬಗ್ಗೆ ನಟಿ ಸೋಶಿಯಲ್ ಮೀಡಿಯಾದಲ್ಲಿ ತಿಳಿಸಿದ್ದರು. ಜಿಮ್‌ನಲ್ಲಿ ನಾನು ಗಾಯಗೊಂಡಿದ್ದೇನೆ. ಮುಂದಿನ ಕೆಲ ವಾರ ಅಥವಾ ತಿಂಗಳ ಕಾಲ ನಾನು ವಿಶ್ರಾಂತಿಯಲ್ಲಿರುತ್ತೇನೆ. ಚೇತರಿಕೆಯಾಗಲು ಎಷ್ಟು ಸಮಯ ಬೇಕಾಗಬಹುದು ಎನ್ನುವುದು ದೇವರಿಗೆ ಮಾತ್ರ ತಿಳಿದಿದೆ. ನನ್ನ ಕಾಲಿನ ನೋವು ಗುಣವಾದ ಬಳಿಕ ನಾನು ಥಾಮ, ಸಿಕಂದರ್ ಮತ್ತು ಕುಬೇರ ಸೆಟ್‌ಗೆ ಮರಳುತ್ತೇನೆ. ಈ ವಿಳಂಬಕ್ಕೆ ಕ್ಷಮೆ ಕೋರುತ್ತೇನೆ ಎಂದಿದ್ದರು.

ಇನ್ನೂ ಸಿಖಂದರ್, ದಿ ಗರ್ಲ್‌ಫ್ರೆಂಡ್, ರೈನ್‌ಬೋ ಸೇರಿದಂತೆ ಹಲವು ಸಿನಿಮಾಗಳು ನಟಿಯ ಕೈಯಲ್ಲಿವೆ.



# 2019ರ ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿ ಘೋಷಣೆ

2019ರ ಕ್ಯಾಲೆಂಡರ್ ವರ್ಷದ ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿಯನ್ನು ಕರ್ನಾಟಕ ಸರ್ಕಾರವು ಘೋಷಿಸಿದೆ. ಅದರಲ್ಲಿ ಕಿಚ್ಚ ಸುದೀಪ್ ಮತ್ತು ಅನುಪಮಾ ಗೌಡ ಅವರು ಅತ್ಯುತ್ತಮ ನಟ ಹಾಗೂ ನಟಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

- ಅತ್ಯುತ್ತಮ ನಟ: ಸುದೀಪ್ 'ಪೈಲ್ವಾನ್' ಚಿತ್ರ
- ಅತ್ಯುತ್ತಮ ನಟಿ: ಅನುಪಮಾ ಗೌಡ 'ತ್ರಯಂಬಕಂ' ಸಿನಿಮಾ
- ಅತ್ಯುತ್ತಮ ಮೊದಲ ಚಿತ್ರ : ಮೋಹನದಾಸ ಪಿ. ಶೇಷಾದ್ರಿ ನಿರ್ದೇಶನದ ಚಿತ್ರ
- ದ್ವಿತೀಯ ಅತ್ಯುತ್ತಮ ಚಿತ್ರ : 'ಲವ್ ಮಾಕ್ಟೈಲ್' ಸಿನಿಮಾ ಡಾರ್ಲಿಂಗ್ ಕೃಷ್ಣ ನಿರ್ದೇಶನದ ಚಿತ್ರ
- ತೃತೀಯ ಅತ್ಯುತ್ತಮ ಚಿತ್ರ : 'ಅರ್ಘ್ಯಂ' ವೈ ಶ್ರೀನಿವಾಸ್ ನಿರ್ದೇಶನದ ಚಿತ್ರ
- ಅತ್ಯುತ್ತಮ ಪೋಷಕ ನಟ: ತಬಲಾ ನಾಣಿ (ಕೆಮಿಸ್ಟ್ರಿ ಆಫ್ ಕರಿಯಪ್ಪ)
- ಅತ್ಯುತ್ತಮ ಪೋಷಕ ನಟಿ: ಅನೂಷಾ ಕೃಷ್ಣ (ಬ್ರಾಹ್ಮಿ)
- ವಿಶೇಷ ಸಾಮಾಜಿಕ ಕಾಳಜಿಯ ಚಿತ್ರ: ಕನ್ನೇರಿ ಸಿನಿಮಾ, ಮಂಜುನಾಥ್ ಎಸ್ ನಿರ್ದೇಶನ
- ಅತ್ಯುತ್ತಮ ಜನಪ್ರಿಯ ಮನರಂಜನಾ ಚಿತ್ರ: ಇಂಡಿಯಾ - ಇಂಗ್ಲೆಂಡ್ ಸಿನಿಮಾ' ನಾಗತಿಹಳ್ಳಿ ಚಂದ್ರಶೇಖರ್ ನಿರ್ದೇಶನ
- ಅತ್ಯುತ್ತಮ ಮಕ್ಕಳ ಚಿತ್ರ: ಎಲ್ಲಿ ಆಡೋದು ನಾವು ಎಲ್ಲಿ ಆಡೋದು ಸಿನಿಮಾ' ಜಿ. ಅರುಣ್ ಕುಮಾರ್ ನಿರ್ದೇಶನ
- ನಿರ್ದೇಶಕರ ಪ್ರಥಮ ನಿರ್ದೇಶನದ ಅತ್ಯುತ್ತಮ ಚಿತ್ರ: ಗೋಪಾಲಗಾಂಧಿ' ನಾಗೇಶ್ ಎನ್. ನಿರ್ದೇಶನ
- ಅತ್ಯುತ್ತಮ ಕರ್ನಾಟಕ ಪ್ರಾದೇಶಿಕ ಭಾಷಾ ಚಿತ್ರ: ಟ್ರಿಬಲ್ ತಲಾಕ್ (ಬ್ಯಾರಿ ಭಾಷೆ)' ಯೂಕೂಬ್ ಖಾದರ್ ಗುಲ್ವಾಡಿ
- ಅತ್ಯುತ್ತಮ ಕತೆ: ಜಯಂತ್ ಕಾಯ್ಕಿಣಿ (ಇಲ್ಲಿರಲಾರೆ ಅಲ್ಲಿಗೆ ಹೋಗಲಾರೆ)
- ಅತ್ಯುತ್ತಮ ಚಿತ್ರಕತೆ: ಡಾರ್ಲಿಂಗ್ ಕೃಷ್ಣ- ಲವ್ ಮಾಕ್ಟೈಲ್ ಸಿನಿಮಾ
- ಅತ್ಯುತ್ತಮ ಸಂಭಾಷಣೆ: ಬರಗೂರು ರಾಮಚಂದ್ರಪ್ಪ (ಅಮೃತಮತಿ ಚಿತ್ರ)
- ಅತ್ಯುತ್ತಮ ಛಾಯಾಗ್ರಹಣ: ಜಿ.ಎಸ್ ಭಾಸ್ಕರ್
- ಅತ್ಯುತ್ತಮ ಸಂಗೀತ ನಿರ್ದೇಶನ: ವಿ. ಹರಿಕೃಷ್ಣ (ಯಜಮಾನ)
- ಅತ್ಯುತ್ತಮ ಸಂಕಲನ: ಜಿ. ಬಸವರಾಜ್ ಅರಸ್
- ಅತ್ಯುತ್ತಮ ಬಾಲ ನಟ: ಮಾಸ್ಟರ್ ಪ್ರೀತಂ (ಮಿಂಚುಹುಳು)
- ಅತ್ಯುತ್ತಮ ಬಾಲ ನಟಿ: ಬೇಬಿ ವೈಷ್ಣವಿ ಅಡಿಗ (ಸುಗಂಧಿ)
- ಅತ್ಯುತ್ತಮ ಕಲಾ ನಿರ್ದೇಶನ: ಹೊಸ್ಮನೆ ಮೂರ್ತಿ (ಮೋಹನದಾಸ)
- ಅತ್ಯುತ್ತಮ ಗೀತ ರಚನೆ: ರಝಾಕ್ ಪುತ್ತೂರು (ಪೆನ್ಸಿಲ್ ಬಾಕ್ಸ್)
- ಅತ್ಯುತ್ತಮ ಹಿನ್ನೆಲೆ ಗಾಯಕ: ರಘು ದೀಕ್ಷಿತ್ (ಲವ್ ಮಾಕ್ಟೈಲ್)
- ಅತ್ಯುತ್ತಮ ಹಿನ್ನೆಲೆ ಗಾಯಕಿ: ಜಯದೇವಿ ಜಿಂಗಮ ಶೆಟ್ಟಿ ( ರಾಗಭೈರವಿ ಚಿತ್ರ)
- ತೀರ್ಪುಗಾರರ ವಿಶೇಷ ಪ್ರಶಸ್ತಿ: ಅಮೃತಮತಿ ಚಿತ್ರ ಹಾಗೂ ತಮಟೆ ನರಸಿಂಹಯ್ಯ ಸಿನಿಮಾ
- ಅತ್ಯುತ್ತಮ ನಿರ್ವಾಹಕ: ಆರ್. ಗಂಗಾಧರ್ (ಮಕ್ಕಡ್ ಮನಸ್)





# ಅಬ್ಬರಿಸಿ ಬೊಬ್ಬಿರಿದ ವಿಕ್ಕಿ ಕೌಶಲ್

ಬಾಲಿವುಡ್ ನಟ ವಿಕ್ಕಿ ಕೌಶಲ್ ಹಾಗೂ ರಶ್ಮಿಕಾ ಮಂದಣ್ಣ ನಟನೆಯ 'ಛಾವಾ' ಟ್ರೈಲರ್ ರಿಲೀಸ್ ಆಗಿದೆ. ಟ್ರೈಲರ್‌ನಲ್ಲಿ ವಿಕ್ಕಿ ಮರಾಠ ಸಾಮ್ರಾಟನಾಗಿ ಅಬ್ಬರಿಸಿದ್ದಾರೆ. ಕನ್ನಡತಿ ರಶ್ಮಿಕಾ ಮಹಾರಾಣಿಯ ಗೆಟಪ್‌ನಲ್ಲಿ ಮಿಂಚಿದ್ದಾರೆ.
ಇದನ್ನೂ ಓದಿ:ಜೀವ ಉಳಿಸಿದ ಆಟೋ ಚಾಲಕನನ್ನು ಭೇಟಿಯಾಗಿ ಧನ್ಯವಾದ ತಿಳಿಸಿದ ಸೈಫ್ ಅಲಿ ಖಾನ್

'ಛಾವಾ' ಸಿನಿಮಾದ ಟ್ರೈಲರ್‌ನಲ್ಲಿ ಯುದ್ಧದ ದೃಶ್ಯಗಳು ಹೈಲೆಟ್ ಆಗಿದೆ. ವಿಕ್ಕಿ ಕೌಶಲ್ ಆ?ಯಕ್ಷನ್ ಅವತಾರಕ್ಕೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಮರಾಠ ರಾಜ ಛತ್ರಪತಿ ಶಿವಾಜಿ ಮಹಾರಾಜರ ಹಿರಿಯ ಮಗ ಛತ್ರಪತಿ ಸಂಭಾಜಿ ಮಹಾರಾಜನ ಪಾತ್ರವನ್ನು ವಿಕ್ಕಿ ಕೌಶಲ್ ನಿಭಾಯಿಸಿದ್ದಾರೆ. ಸಂಭಾಜಿ ಮಹಾರಾಜರ ಶೌರ್ಯ ಅವರ ತ್ಯಾಗ ಮತ್ತು ಯುದ್ಧಗಳನ್ನು ಗೆಲ್ಲುವ ತಂತ್ರಗಳ ಬಗ್ಗೆ ಇದೆ. ಗಂಡ ಮತ್ತು ಹೆಂಡತಿಯ ನಡುವಿನ ಭಾವನಾತ್ಮಕ ಪ್ರೇಮಕಥೆಯನ್ನು ಸಹ ಒಳಗೊಂಡಿದೆ. ಮರಾಠ ಸಾಮ್ರಾಜ್ಯದಿಂದ ಸಂಭಾಜಿ ದೂರ ಇದ್ದಾಗ ಅವರ ಹೆಂಡತಿ ಎಲ್ಲವನ್ನೂ ಯಾವ ರೀತಿ ನಿರ್ವಹಿಸುತ್ತಿದ್ದರು ಎಂಬುದು ಕಥೆಯ ಹೈಲೈಟ್ ಆಗಿದೆ. ಇದರ ಸಣ್ಣ ಝಲಕ್ ಅನ್ನು ಟ್ರೈಲರ್ ಮೂಲಕ ಚಿತ್ರತಂಡ ರಿವೀಲ್ ಮಾಡಿದೆ.




ಛಾವಾ ಟ್ರೈಲರ್ ಔಟ್

ಇನ್ನೂ ಛತ್ರಪತಿ ಸಂಭಾಜಿ ಮಹಾರಾಜನ ಪತ್ನಿಯಾಗಿ ರಶ್ಮಿಕಾ ಮಂದಣ್ಣ ಕಾಣಿಸಿಕೊಂಡಿದ್ದಾರೆ. ಪತಿಯ ಹೋರಾಟಕ್ಕೆ ಸಾಥ್ ಕೊಡುವ ಪತ್ನಿಯಾಗಿ ನಟಿ ಕಾಣಿಸಿಕೊಂಡಿದ್ದಾರೆ.

ಈ ಚಿತ್ರವನ್ನು ಲಕ್ಷ್ಮಣ್ ಉಟೇಕರ್ ನಿರ್ದೇಶನ ಮಾಡಿದ್ದಾರೆ. ಈ ಸಿನಿಮಾ ಫೆ.14ರಂದು ರಿಲೀಸ್ ಆಗಲಿದೆ. ಈ ಸಿನಿಮಾ ನೋಡಲು ಫ್ಯಾನ್ಸ್ ಕಾಯುತ್ತಿದ್ದಾರೆ.

## ಟೀಂ ಇಂಡಿಯಾ ಜೆರ್ಸಿಯಲ್ಲಿ ಪಾಕಿಸ್ತಾನದ ಹೆಸರು

# ಬಿಸಿಸಿಐ ಮಹತ್ವದ ನಿರ್ಧಾರ

ಫೆಬ್ರವರಿ 19 ರಿಂದ ಆರಂಭವಾಗಲಿರುವ ಚಾಂಪಿಯನ್ಸ್ ಟ್ರೋಫಿ ಹೈಬ್ರಿಡ್ ಮಾದರಿಯಲ್ಲಿ ನಡೆಯುತ್ತಿರುವುದು ಹಳೆಯ ವಿಚಾರ. ಆ ಪ್ರಕಾರ ಟೀಂ ಇಂಡಿಯಾ ತನ್ನ ಎಲ್ಲಾ ಪಂದ್ಯಗಳನ್ನು ದುಬೈನಲ್ಲಿ ಆಡಿದರೆ ಉಳಿದ ಎಲ್ಲಾ ತಂಡಗಳು ಪಾಕಿಸ್ತಾನದಲ್ಲಿ ಆಡಲಿವೆ. ಏತನ್ಮಧ್ಯೆ, ಈ ಐಸಿಸಿ ಟೂರ್ನಿಯಲ್ಲಿ ಆತಿಥೇಯ ರಾಷ್ಟ್ರ ಪಾಕಿಸ್ತಾನದ ಹೆಸರನ್ನು ತಮ್ಮ ಜೆರ್ಸಿಯಲ್ಲಿ ನಮೂದಿಸಲು ಭಾರತ ತಂಡ ನಿರಾಕರಿಸಿದೆ ಎಂದು ವರದಿಯಾಗಿತ್ತು. ನಿನ್ನೆಯಿಂದ ಈ ವಿಚಾರದ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದಿದ್ದವು. ಸಾಮಾನ್ಯವಾಗಿ, ಐಸಿಸಿ ಪಂದ್ಯಾವಳಿಯನ್ನು ಆಯೋಜಿಸುವ ದೇಶದ ಹೆಸರು ಎಲ್ಲಾ ತಂಡಗಳ ಜೆರ್ಸಿಯ ಮೇಲೆ ನಮೂದಿಸಲೇಬೇಕು. ಆದರೀಗ ಬಿಸಿಸಿಐ, ಪಾಕಿಸ್ತಾನದ ಹೆಸರನ್ನು ತಂಡದ ಜೆರ್ಸಿಯ ಮೇಲೆ ನಮೂದಿಸಲು ತಗಾದೆ ತೆಗೆದಿದೆ ಎಂಬ ಸುದ್ದಿ ಎಲ್ಲೆಡೆ ಹಬ್ಬಿದ ಬಳಿಕ ಹೊಸ ವಿವಾದವೊಂದು ಹುಟ್ಟಿಕೊಂಡಿತ್ತು. ಆದರೆ, ಇದೀಗ ಈ ವಿಚಾರವಾಗಿ ಬಿಸಿಸಿಐ ಸ್ಪಷ್ಟನೆ ನೀಡಿ, ವದಂತಿಗಳಿಗೆ ತೆರೆ ಎಳೆದಿದೆ.



**ಜೆರ್ಸಿಯಲ್ಲಿ ಪಾಕಿಸ್ತಾನದ ಹೆಸರು:** ಐಸಿಸಿ ನಿಯಮಗಳ ಪ್ರಕಾರ, ಐಸಿಸಿ ಬ್ಯಾನರ್ ಅಡಿಯಲ್ಲಿ ನಡೆಯುವ ಎಲ್ಲಾ ಪಂದ್ಯಾವಳಿಗಳಲ್ಲಿ ಭಾಗವಹಿಸುವ ಎಲ್ಲಾ ತಂಡಗಳು ತಮ್ಮ ಜೆರ್ಸಿಯಲ್ಲಿ ಆತಿಥೇಯ ದೇಶದ ಹೆಸರು ಮತ್ತು ಪಂದ್ಯಾವಳಿಯ ವರ್ಷವನ್ನು ಪಂದ್ಯಾವಳಿಯ ಹೆಸರಿನೊಂದಿಗೆ ನಮೂದಿಸುವುದು ಕಡ್ಡಾಯವಾಗಿದೆ. ಆ ಪ್ರಕಾರ, ಇದೀಗ ಎದ್ದಿರುವ ವದಂತಿಗೆ ತೆರೆ ಎಳೆದಿರುವ ಬಿಸಿಸಿಐನ ಹೊಸ ಕಾರ್ಯದರ್ಶಿ ದೇವ್‌ಜಿತ್ ಸೈಕಿಯಾ ಅವರು ಐಸಿಸಿಯ ಪ್ರತಿಯೊಂದು ನಿಯಮವನ್ನು ಬಿಸಿಸಿಐ ಅನುಸರಿಸಲಿದೆ ಎಂದು ಖಚಿತಪಡಿಸಿದ್ದಾರೆ. ಅಂದರೆ ಈ ಟೂರ್ನಿಯ ಆತಿಥೇಯ ಪಾಕಿಸ್ತಾನದ ಹೆಸರು ಟೀಂ ಇಂಡಿಯಾದ ಜೆರ್ಸಿ ಮೇಲೆ ಕಾಣಿಸಿಕೊಳ್ಳಲಿದೆ.

ಇತ್ತೀಚೆಗಷ್ಟೇ ಪಾಕಿಸ್ತಾನದ ಮಾಧ್ಯಮಗಳು ಈ ವಿಷಯವನ್ನು ಪ್ರಸ್ತಾಪಿಸಿ ಟೀಂ ಇಂಡಿಯಾದ ಜೆರ್ಸಿಯಲ್ಲಿ ಪಾಕಿಸ್ತಾನದ ಹೆಸರನ್ನು ಮುದ್ರಿಸಲು ಬಿಸಿಸಿಐ ನಿರಾಕರಿಸಿದೆ ಎಂದು ಆರೋಪಿಸಿದ್ದವು. ಪಿಸಿಬಿ ಕೂಡ ಈ ಸಮಸ್ಯೆಯನ್ನು ಐಸಿಸಿ ಮುಂದಿಡಲು ಬಯಸಿತ್ತು. ಆದರೆ ಬಿಸಿಸಿಐ ಈಗ ಈ ಎಲ್ಲಾ ವರದಿಗಳನ್ನು ತಿರಸ್ಕರಿಸಿದ್ದು, ಜೆರ್ಸಿಗೆ ಸಂಬಂಧಿಸಿದ ಪ್ರತಿಯೊಂದು ಐಸಿಸಿ ನಿಯಮವನ್ನು ಅನುಸರಿಸುವುದಾಗಿ ಘೋಷಿಸಿದೆ.

**ಟೀಂ ಇಂಡಿಯಾ ವೇಳಾಪಟ್ಟಿ:** ಫೆಬ್ರವರಿ 20 ರಿಂದ ಈ ಟೂರ್ನಿಯಲ್ಲಿ ಟೀಂ ಇಂಡಿಯಾದ ಅಭಿಯಾನ ಆರಂಭವಾಗಲಿದ್ದು, ಚೊಚ್ಚಲ ಪಂದ್ಯದಲ್ಲಿ ಬಾಂಗ್ಲಾದೇಶವನ್ನು ಎದುರಿಸಲಿದೆ. ನಂತರ ಟೀಂ ಇಂಡಿಯಾ ತನ್ನ ಎರಡನೇ ಪಂದ್ಯವನ್ನು ಪಾಕಿಸ್ತಾನದ ವಿರುದ್ಧ ಆಡಲಿದೆ. ಈ ಪಂದ್ಯ ಫೆಬ್ರವರಿ 23 ರಂದು ನಡೆಯಲಿದೆ. ಇದರ ನಂತರ, ಗುಂಪಿನ ಕೊನೆಯ ಪಂದ್ಯದಲ್ಲಿ, ಮಾರ್ಚ್ 2 ರಂದು ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಇದಾದ ಬಳಿಕ ಸೆಮಿಫೈನಲ್ ಮತ್ತು ಫೈನಲ್ ಪಂದ್ಯ ನಡೆಯಲಿದೆ. ಒಂದು ವೇಳೆ ಟೀಂ ಇಂಡಿಯಾ ಸೆಮಿಫೈನಲ್ ಮತ್ತು ಫೈನಲ್‌ಗೆ ಅರ್ಹತೆ ಪಡೆದರೆ, ಈ ಪಂದ್ಯಗಳು ಕೂಡ ದುಬೈನಲ್ಲಿ ಮಾತ್ರ ನಡೆಯಲಿವೆ.

# ಪ್ರಿಯಾಂಕಾ ಗಾಂಧಿಯನ್ನು ಚೆನ್ನಮ್ಮಗೆ ಹೋಲಿಸಿ ಅಪಮಾನ: ಸಿ.ಟಿ ರವಿ ಕಿಡಿ

**ಬೆಂಗಳೂರು:** ಪ್ರಿಯಾಂಕಾ ಗಾಂಧಿಯನ್ನು ರಾಣಿ ಚೆನ್ನಮ್ಮಗೆ ಹೋಲಿಸುವ ಮೂಲಕ ಚೆನ್ನಮ್ಮಗೆ ಅಪಮಾನ ಮಾಡಲಾಗಿದೆ ಎಂದು ಪರಿಷತ್ ಸದಸ್ಯ ಸಿ.ಟಿ ರವಿ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಕಿಡಿಕಾರಿದ್ದಾರೆ.

ಪ್ರಿಯಾಂಕಾ ಗಾಂಧಿಯನ್ನು ರಾಣಿ ಚೆನ್ನಮ್ಮಗೆ ಹೋಲಿಸಿದ ವಿಚಾರವಾಗಿ ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, ಹೊಗಳುವ ಭರದಲ್ಲಿ ಮಾನಸಿಕ ಗುಲಾಮಗಿರಿ ತೋರಿಸಿದ್ದಾರೆ. ಇದು ಭಟ್ಟಂಗಿತನದ ಹೇಳಿಕೆ. ರಾಷ್ಟ್ರೀಯ ವ್ಯಕ್ತಿತ್ವಕ್ಕೂ ಈ ಮೂಲಕ ಅವಮಾನ ಮಾಡಲಾಗಿದೆ. ನಾಡಿನ ಜನತೆಗೆ ಮಲ್ಲಿಕಾರ್ಜುನ ಖರ್ಗೆ ಕ್ಷಮೆ ಕೋರಬೇಕು ಎಂದು ಆಗ್ರಹಿಸಿದರು.

ಡಿಕೆಶಿ ಸಿಎಂ ಆಗುವ ಕುರಿತು ಜೈನಗುರು ಭವಿಷ್ಯವಾಣಿ ನುಡಿದ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಯೋಗ ಇದ್ದರೆ ಯಾರು ಬೇಕಾದರೂ ಸಿಎಂ ಆಗಬಹುದು. ಆದರೆ ಯೋಗ್ಯತೆ ಇದ್ದವರು ಮಾತ್ರ ಒಳ್ಳೆಯ ಮುಖ್ಯಮಂತ್ರಿ ಆಗುತ್ತಾರೆ. ಸಿಎಂ ಆಗಲು ಯೋಗ್ಯತೆ ಬೇಕು ಎಂದು ಡಿಸಿಎಂ ಡಿಕೆ ಶಿವಕುಮಾರ್‌ಗೆ ಟಾಂಗ್ ಕೊಟ್ಟರು.

ಕಾಂಗ್ರೆಸ್ ಅಧಿವೇಶನದಲ್ಲಿ ಗಾಂಧೀಜಿ ಸ್ಮರಣೆ ಮಾಡಿದ್ದಾರೆ. ಕಾಂಗ್ರೆಸ್ ವಿಸರ್ಜಿಸಿ ಎಂಬ ಗಾಂಧಿ ಮಾತನ್ನು ಅವರೆಲ್ಲ ನೆನಪಿಸಿಕೊಳ್ಳಬೇಕಿತ್ತು. ಸ್ವಾತಂತ್ರ್ಯ ನಂತರ ಕಾಂಗ್ರೆಸ್‌ನವರು ಭ್ರಷ್ಟಾಚಾರ ಮಾಡಿ ಎಂದು ಗಾಂಧಿ ಹೇಳಲಿಲ್ಲ. ಭ್ರಷ್ಟಾಚಾರಕ್ಕೆ ಸಮಾವೇಶದಲ್ಲಿ ಕಾಂಗ್ರೆಸ್‌ನವರು ಪ್ರಾಯಶ್ಚಿತ್ತ ಮಾಡಿಕೊಳ್ಳಬೇಕಿತ್ತು. ಅಂಬೇಡ್ಕರ್‌ರನ್ನ ಚುನಾವಣೆಯಲ್ಲಿ ಸೋಲಿಸಿ ಸಮಾವೇಶದಲ್ಲಿ ಜಪ ಮಾಡಿದ್ದಾರೆ. ಅಂಬೇಡ್ಕರ್‌ಗೆ ಕಾಂಗ್ರೆಸ್ ಮಾಡಿದ ಎಲ್ಲಾ ಮೋಸಕ್ಕೂ ಪ್ರಾಯಶ್ಚಿತ್ತ ಮಾಡಿಕೊಳ್ಳಬೇಕಿತ್ತು. ಅಂಬೇಡ್ಕರ್ ಮನೆಯನ್ನು ಸ್ಮಾರಕ ಮಾಡಿದ್ದು ಬಿಜೆಪಿ. ಅವರ ಅಂತ್ಯಸಂಸ್ಕಾರ ಜಾಗದಲ್ಲಿ ಬಿಜೆಪಿ ಪ್ರತಿಮೆ ನಿರ್ಮಿಸುತ್ತಿದೆ. ಅಂಬೇಡ್ಕರ್ ಕರ್ಮಭೂಮಿ ಅಭಿವೃದ್ಧಿ ಪಡಿಸುತ್ತಿರುವುದು ಬಿಜೆಪಿ. ತುರ್ತು ಪರಿಸ್ಥಿತಿ ಹೇರಿದ ಇಂದಿರಾಗಾಂಧಿ, ಪ್ರಜಾಪ್ರಭುತ್ವವನ್ನು ಆಗ ಅಪಾಯಕ್ಕೆ ದೂಡಲಾಯಿತು ಎಂದು ವಾಗ್ದಾಳಿ ನಡೆಸಿದರು.



ಸಿದ್ದರಾಮಯ್ಯ ಎದುರೇ ಡಿಕೆಶಿ ಸಿಎಂ ಆಗಲಿ ಎಂಬ ಘೋಷಣೆ ಮೊಳಗಿಸುತ್ತಾರೆ. ಸಿದ್ದರಾಮಯ್ಯಗೆ ಇದು ದೊಡ್ಡ ಅಪಮಾನ. ಇದಕ್ಕಿಂತ ದೊಡ್ಡ ಅಪಮಾನ ಇಲ್ಲ. ರಾಹುಲ್ ಗಾಂಧಿ, ಮನಮೋಹನ್ ಸಿಂಗ್ ಸಂಪುಟ ನಿರ್ಣಯದ ಪ್ರತಿ ಹರಿದು ಹಾಕಿದ್ದರು. ಕರ್ನಾಟಕದಲ್ಲಿ ಏನು ಕತೆ ಇದು? ಸಿದ್ದರಾಮಯ್ಯ ಅವರನ್ನು ಎದುರು ಕೂರಿಸಿಕೊಂಡೇ ಅಪಮಾನ ಮಾಡಿದ್ದಾರಲ್ಲ. ಸಿದ್ದರಾಮಯ್ಯ ಸ್ವಾಭಿಮಾನಿ ಎಂದು ನಾನು ಅಂದುಕೊಂಡಿದ್ದೆ. ಅವರದ್ದು ಸ್ವಾಭಿಮಾನದ ರಾಜಕಾರಣ ಅಂದುಕೊಂಡಿದ್ದೆ. ನನ್ನಂಥವನು ಸಿಎಂ ಆಗಿ ಹೀಗೆಲ್ಲ ಆಗಿದ್ದರೆ ಒಂದು ಕ್ಷಣವೂ ನಾನು ಅಪಮಾನ ಸಹಿಸುತ್ತಿರಲಿಲ್ಲ. ಸಿದ್ದರಾಮಯ್ಯ ಅದು ಹೇಗೆ ಈ ಅಪಮಾನ ಸಹಿಸಿಕೊಂಡರೋ ಗೊತ್ತಿಲ್ಲ. ಇದು ನನಗೆ ಈಗಲೂ ಅರ್ಥವಾಗುತ್ತಿಲ್ಲ ಎಂದು ಟೀಕಿಸಿದರು.

## ಬಿಸಿಸಿಐ ಸ್ಪಷ್ಟ ಸಂದೇಶ

# ರೋಹಿತ್ ಶರ್ಮಾ ಪಾಕಿಸ್ತಾನಕ್ಕೆ ಹೋಗಲ್ಲ

**ಮುಂಬೈ:** ಚಾಂಪಿಯನ್ಸ್ ಟ್ರೋಫಿ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲು ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಅವರನ್ನು ಪಾಕಿಸ್ತಾನಕ್ಕೆ ಕಳುಹಿಸದಿರಲು ಬಿಸಿಸಿಐ ನಿರ್ಧರಿಸಿದೆ.

ರೋಹಿತ್ ಶರ್ಮಾ ಪಾಕಿಸ್ತಾನಕ್ಕೆ ಪ್ರಯಾಣಿಸುತ್ತಾರೋ ಇಲ್ಲವೋ ಎಂಬುದು ದೊಡ್ಡ ಪ್ರಶ್ನೆಯಾಗಿತ್ತು. ಅದಕ್ಕೀಗ ಬಿಸಿಸಿಐ ತೆರೆ ಎಳೆದಿದೆ. ನಾಯಕನ ಭೇಟಿ ಮತ್ತು ಫೋಟೋಶೂಟ್‌ಗಾಗಿ ರೋಹಿತ್ ಶರ್ಮಾ ಅವರನ್ನು ಪಾಕಿಸ್ತಾನಕ್ಕೆ ಕಳುಹಿಸದಿರಲು ಬಿಸಿಸಿಐ ದೃಢ ನಿರ್ಧಾರ ತೆಗೆದುಕೊಂಡಿದೆ ಎಂದು ಗೌರವ್ ಗುಪ್ತ ತಿಳಿಸಿದ್ದಾರೆ.

ಚಾಂಪಿಯನ್ಸ್ ಟ್ರೋಫಿಗಾಗಿ ಪಾಕಿಸ್ತಾನಕ್ಕೆ ಪ್ರಯಾಣಿಸಲು ಭಾರತ ನಿರಾಕರಿಸಿದ ನಂತರ, ಟೂರ್ನಮೆಂಟ್ ಅನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲಾಗಿದೆ. ರೋಹಿತ್ ಶರ್ಮಾ ಟೂರ್ನಮೆಂಟ್ ಪೂರ್ವ ನಾಯಕರ ಸಭೆಗಾಗಿ ಪಾಕಿಸ್ತಾನಕ್ಕೆ ಪ್ರಯಾಣಿಸುವ ಬಗ್ಗೆ ಕೆಲವು ಪ್ರಶ್ನೆಗಳು ಉದ್ಭವಿಸಿದ್ದವು. ಎಲ್ಲಾ ತಂಡಗಳ ನಾಯಕರು ಯಾವುದೇ ಐಸಿಸಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದ ಮೊದಲು ಒಟ್ಟುಗೂಡುತ್ತಾರೆ. ಅವರ ಯೋಜನೆಗಳು ಮತ್ತು ಗುರಿಗಳ ಬಗ್ಗೆ ಮಾತನಾಡುತ್ತಾರೆ. ಆದರೆ, ಸೆಕ್ಯೂರಿಟಿ ದೃಷ್ಟಿಯಿಂದ ಟೀಂ ಇಂಡಿಯಾ ಆಟಗಾರರನ್ನು ಪಾಕಿಸ್ತಾನಕ್ಕೆ ಕಳುಹಿಸಲು ಬಿಸಿಸಿಐ ಒಪ್ಪಿಗೆ ಸೂಚಿಸಿಲ್ಲ.




## ಏಯ್ ಯತ್ನಾಳ್ ಎಲ್ಲವನ್ನ ತೆಗೀಬೇಕಾ?

# ಜಿಟಿಡಿ ಖಡಕ್ ವಾರ್ನಿಂಗ್

**ಮೈಸೂರು:** ನೀನು ಸೌಹಾರ್ದ ಬ್ಯಾಂಕಿನ ಹೆಸರಿನಲ್ಲಿ ಹಣ ಡೆಪಾಸಿಟ್ ಮಾಡಿಸಿಕೊಂಡು, ಅದನ್ನ ಎಲ್ಲೆಲ್ಲಿ ಹೂಡಿಕೆ ಮಾಡಿದ್ಯಾ ಎಂಬುದು ನನಗೆ ಗೊತ್ತಿಲ್ವಾ? ಎಲ್ಲವನ್ನೂ ತೆಗೀಬೇಕಾ? ಎಂದ ಮಾಜಿ ಸಚಿವ ಜಿ.ಟಿ ದೇವೇಗೌಡ ಅವರು, ನಾನು ಭ್ರಷ್ಟಾಚಾರ ಮಾಡಿರೋದನ್ನ ನೀನು ಸಾಬೀತು ಮಾಡಿದ್ರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡುತ್ತೇನೆ ಅಂತ ಶಾಸಕ ಯತ್ನಾಳ್‌ಗೆ ಬಹಿರಂಗ ಸವಾಲೆಸೆದಿದ್ದಾರೆ.

ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಜಿ.ಟಿ ದೇವೇಗೌಡ ಅವರು, ಮುಡಾದ ಭ್ರಷ್ಟಾಚಾರದಲ್ಲಿ ತಮ್ಮ ಪಾತ್ರವೂ ಇದೇ ಎಂಬ ಶಾಸಕ ಯತ್ನಾಳ್ ಹೇಳಿಕೆಗೆ ಕೆರಳಿ ಕೆಂಡವಾದರು. ಈ ವೇಳೆ ಯತ್ನಾಳ್‌ಗೆ ಏಕವಚನದಲ್ಲೇ ಬಹಿರಂಗ ಸವಾಲ್ ಹಾಕಿದರು.

ನನ್ನ ಯೋಗ್ಯತೆ, ನನ್ನ ಆಸ್ತಿ ಲೆಕ್ಕ ನಿನಗೇನು ಗೊತ್ತು? ನಿನಗೆ ತಾಕತ್ ಇದ್ರೆ ನಿನ್ನ ಬಳಿ ನನ್ನದೇನಿದೆ ಬಹಿರಂಗಪಡಿಸು. ನಿನ್ನ ವಿಚಾರವೂ ನನಗೆ ಗೊತ್ತಿದೆ. ನಾನು ಬಹಿರಂಗಪಡಿಸುತ್ತೇನೆ. ನಾನು ಭ್ರಷ್ಟಾಚಾರ ಮಾಡಿರೋದನ್ನ ನೀನು ಸಾಬೀತು ಮಾಡಿದ್ರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡುತ್ತೇನೆ ಎಂದು ಸವಾಲೆಸೆದರು.



ನಾನು ಶಾಸಕನಾಗಿ ಬಂದಾಗ ಇದ್ದ ಆಸ್ತಿಗೂ, ಇವತ್ತಿನ ಆಸ್ತಿಗು ಏನು ವ್ಯತ್ಯಾಸ ಇದೆ ಅನ್ನೋದನ್ನ ನೀನು ತೆಗಿ. ನೀನು ರಾಜಕೀಯಕ್ಕೆ ಬಂದಾಗ ಏನಿತ್ತು? ನಂತರ ನೀನು ಹೇಗೆ ದುಂಡಗಾದೆ? ಸೌಹಾರ್ದ ಬ್ಯಾಂಕಿನ ಹೆಸರಿನಲ್ಲಿ ಹಣ ಡೆಪಾಸಿಟ್ ಮಾಡಿಸಿಕೊಂಡು, ಅದನ್ನ ಎಲ್ಲೆಲ್ಲಿ ಹೂಡಿಕೆ ಮಾಡಿದ್ಯಾ ಎಂಬುದು ನನಗೆ ಗೊತ್ತಿಲ್ವ? ಎಲ್ಲದನ್ನೂ ತೆಗೀಬೇಕಾ? ಯತ್ನಾಳ್‌ಗೆ ಸದಾ ಇನ್ನೊಬ್ಬರ ಬಗ್ಗೆ ಮಾತಾಡುವುದು ಒಂದು ಚಟ. ದಿನವೂ ಅದೇ ಚಟದಲ್ಲಿ ಮಾತಾಡ್ತಾರೆ. ಬೇರೆಯವರಿಗೆ ಮಾತನಾಡಿದಂತೆ ನನ್ನ ಜೊತೆ ಮಾತನಾಡಬೇಡ ಇದು ನಾನು ನಿನಗೆ ಕೊಡ್ತಿರೋ ಎಚ್ಚರಿಕೆ ಎಂದು ವಾರ್ನಿಂಗ್ ಕೊಟ್ಟರು.

ಮುಂದುವರಿದು.. ಯತ್ನಾಳ್‌ಗೆ ಎಷ್ಟು ಆಸ್ತಿ ಇತ್ತು. ಈಗ ಎಷ್ಟಾಗಿದೆ ಗೊತ್ತಾ? ಒಬ್ಬರನ್ನು ಇಂದು ಹೊಗಳುವುದು, ನಾಳೆ ತೆಗಳುವುದು ಯತ್ನಾಳ್ ಗೆ ಚಟ. ಯಾವನೋ ಏನೋ ಹೇಳುತ್ತಾನೆ ಅಂತಾ ನನ್ನ ಬಗ್ಗೆ ಮಾತನಾಡಬೇಡಿ. ಹಿರಿಯ ಮನುಷ್ಯ ಇದ್ಯಾ? ಗೌರವ ಇಟ್ಕೊಂಡು ಮಾತನಾಡು. ನಿನ್ನ ಮೇಲೆ ಶುಗರ್ ಫ್ಯಾಕ್ಟರಿ ವಿಚಾರದಲ್ಲಿ ಎಫ್‌ಐಆರ್ ಆಗಿರಲಿಲ್ವಾ? ನೀನು ರಾಜೀನಾಮೆ ಕೊಟ್ಯಾ? ಸೌಹಾರ್ದ ಬ್ಯಾಂಕ್ ವಿಚಾರದಲ್ಲಿ ಯತ್ನಾಳ್ ಮೇಲೆ ತನಿಖೆ ಆಗಲಿ ಆಗ ಗೊತ್ತಾಗುತ್ತೆ. ಭ್ರಷ್ಟಾಚಾರಕ್ಕೆ ಇನ್ನೊಂದು ಹೆಸರೇ ಯತ್ನಾಳ್ ಎಂದು ಸಿಡಿಮಿಡಿಗೊಂಡರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com